26 June 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ನಮ್ಮ ಆದಾಯವಿದ್ದಂತೆ ಬದುಕು ನಡೆಸಿದರೆ ಸ್ವರ್ಗ, ಬೇರೆಯವರ ಆಡಂಬರ ನೋಡಿ ಅವರಂತೆ ಬದುಕಲು ಕಲಿತರೆ ಜೀವನ ನರಕ !

-ಸ್ನೇಹಾ ಆನಂದ್

info.varthaman@gmail.com



ದಿವಂಗತ ಡಿ. ದೇವರಾಜ ಅರಸು ಪ್ರತಿಮೆ ಮರು ಸ್ಥಾಪನೆ ಪುಟ ಸಂ. 2



ಜು.1ರಂದು ಕೆಂಪೇಗೌಡರ 517ನೇ ಜಯಂತ್ಯೋತ್ಸವ ಪುಟ ಸಂ. 3




ನಟರಾಜ್ ಜೋಯ್ಸ್‌ಗೆ ಸಾಲು ಮರದ ತಿಮ್ಮಕ್ಕ ಪ್ರಶಸ್ತಿ ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 208 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

## ಅಡ್ಡಮತಕ್ಕೆ ವೈಮನಸ್ಸು ಕಾರಣ!

**ವಿಜಯೇಂದ್ರ, ಅಶೋಕ್, ಶೋಭಾ ಆಣೆ ಮಾಡಲಿ: ಎಸ್‌ಟಿಎಸ್ ಆಗ್ರಹ**



**ಬೆಂಗಳೂರು:** ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಶಾಸಕರು ಅಡ್ಡ ಮತದಾನ ಮಾಡಲು ಬಿ.ವೈ.ವಿಜಯೇಂದ್ರ ಮತ್ತು ಆರ್.ಅಶೋಕ್ ನಡುವಣ ವೈಮನಸ್ಸು ಕಾರಣ ಎಂದು ಬಿಜೆಪಿ ಉಚ್ಚಾಟಿತ ಶಾಸಕ ಎಸ್.ಟಿ.ಸೋಮಶೇಖರ್ ಕಿಡಿಕಾರಿದ್ದಾರೆ.

ಗುರುವಾರ ಸುದ್ದಿಗಾರರ ಜತೆ ಮಾತನಾಡಿದ ಅವರು, ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಕಡೆಯ ಅಭ್ಯರ್ಥಿಯನ್ನು ಸೋಲಿಸಬೇಕು ಎಂದು ವಿಪಕ್ಷ ನಾಯಕ ಆರ್.ಅಶೋಕ ಬೆಂಬಲಿಗ ಶಾಸಕರು ಅಡ್ಡಮತದಾನ ಮಾಡಿದ್ದಾರೆ. ಅಶೋಕ ಅವರ ಕಡೆಯ ಅಭ್ಯರ್ಥಿಯನ್ನು ಸೋಲಿಸಬೇಕು ಎಂದು ವಿಜಯೇಂದ್ರ ಬೆಂಬಲಿಗ ಶಾಸಕರು ಅಡ್ಡಮತದಾನ ಮಾಡಿದ್ದಾರೆ ಎಂದು ಆರೋಪಿಸಿದರು.

ಬಿಜೆಪಿಯಲ್ಲಿ ಆಂತರಿಕ ಭಿನ್ನಮತ ಜೋರಾಗಿದೆ. ಮತದಾನದ ದಿನ ಬೆಳಿಗ್ಗೆ 8ರವರೆಗೆ ಯಾರಿಗೆ ಮತ ಹಾಕಬೇಕು ಎಂಬುದನ್ನು ಬಿಜೆಪಿ ನಾಯಕರು ಹೇಳಿರಲಿಲ್ಲ. ವಿಪ್ ಸಹ ಜಾರಿ ಮಾಡಿರಲಿಲ್ಲ ಎಂದು ಬಿಜೆಪಿ ಶಾಸಕರೊಬ್ಬರು ನನಗೆ ಹೇಳಿದರು. ಈ ಇಬ್ಬರ ನಡುವಣ ಜಿದ್ದಾಜಿದ್ದಿ ಕಾರಣದಿಂದ ಬಿಜೆಪಿಗೆ ಮುಜುಗರವಾಗಿದೆ ಎಂದು ದೂರಿದರು.

ಅಲ್ಲದೆ, ಈ ಇಬ್ಬರೂ ನಾಯಕರನ್ನು ಕಂಡರೆ ಶೋಭಾ ಕರಂದ್ಲಾಜೆಗೆ ಆಗುವುದಿಲ್ಲ. ಅಡ್ಡ ಮತದಾನದಲ್ಲಿ ಅವರ ಸಂಚೂ ಇದೆ. ಬಿಜೆಪಿಯ 63 ಶಾಸಕರಿಂದ ಆಣೆ–ಪ್ರಮಾಣ ಮಾಡಿಸುವ ಪುಟ 2ಕ್ಕೆ

## ನಾನೂ ಮಾತಾಡಲ್ಲ, ನೀವೂ ಮಾತಾಡಬೇಡಿ!: ಅಶೋಕ್



**ಬೆಂಗಳೂರು:** ಶಾಸಕ ಎಸ್.ಟಿ. ಸೋಮಶೇಖರ್ ಅವರು ಈಗ ನಮ್ಮ ಪಕ್ಷದಲ್ಲಿ ಇಲ್ಲ. ಅವರನ್ನು ಬಿಜೆಪಿಯಿಂದ ಉಚ್ಚಾಟಿಸಲಾಗಿದೆ. ಅವರ ಬಗ್ಗೆ ನಾನು ಏನನ್ನೂ ಮಾತನಾಡುವುದಿಲ್ಲ. ಅವರೂ ನಮ್ಮ ಪಕ್ಷದ ಬಗ್ಗೆ ಮಾತನಾಡದಿದ್ದರೆ ಒಳಿತು ಎಂದು ಆರ್.ಅಶೋಕ್ ಹೇಳಿದರು.

ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಶಾಸಕರು ಅಡ್ಡ ಮತದಾನ ಮಾಡಲು ಬಿ.ವೈ. ವಿಜಯೇಂದ್ರ ಮತ್ತು ಆರ್. ಅಶೋಕ್ ನಡುವಣ ವೈಮನಸ್ಸು ಕಾರಣ ಎಂದು ಎಸ್.ಟಿ.ಸೋಮಶೇಖರ್ ಆರೋಪಿಸಿದ್ದರು. ಈ ಆರೋಪಕ್ಕೆ ಉತ್ತರಿಸಲು ಅಶೋಕ್ ಪುಟ 2ಕ್ಕೆ

# ಮೇಲುಸ್ತುವಾರಿ ಸಚಿವರ ನೇಮಕ

## ಜಿಲ್ಲೆಗಳಲ್ಲಿ ಬರ, ಪ್ರಕೃತಿ ವಿಕೋಪ ನಿರ್ವಹಣೆಗೆ ಆದೇಶ





**ಬೆಂಗಳೂರು:** ರಾಜ್ಯದಲ್ಲಿ ಮಳೆ ಕೊರತೆಯಿಂದ ಬರದ ಸ್ಥಿತಿ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ಪ್ರಕೃತಿ ವಿಕೋಪ ನಿರ್ವಹಣೆಗೆ ಜಿಲ್ಲೆಗಳ ಮೇಲುಸ್ತುವಾರಿಯಾಗಿ ಸಚಿವರನ್ನು ನೇಮಕ ಮಾಡಿ ಆದೇಶಿಸಲಾಗಿದೆ. ಆದರೆ ಆದೇಶದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಎಂದು ಉಲ್ಲೇಖಿಸಿಲ್ಲ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಶಿಫಾರಸ್ಸಿನ ಮೇರೆಗೆ ಯೋಜನೆ, ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆ ಈ ಕುರಿತು ಅಧಿಸೂಚನೆ ಹೊರಡಿಸಿದೆ.

ರಾಜ್ಯದಲ್ಲಿ ಪ್ರಕೃತಿ ವಿಕೋಪ ನಿರ್ವಹಣೆಯನ್ನು ಪರಿಣಾಮಕಾರಿಯಾಗಿ ನಡೆಸಲು ಅನುಕೂಲವಾಗುವಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೊರತುಪಡಿಸಿ ಸಚಿವರಿಗೆ ವಿವಿಧ ಜಿಲ್ಲೆಗಳ ಮೇಲುಸ್ತುವಾರಿ ಜವಾಬ್ದಾರಿಯನ್ನು ಹಂಚಿಕೆ ಮಾಡಲಾಗಿದೆ.

ಜಿಲ್ಲೆಗಳಲ್ಲಿ ಪ್ರಕೃತಿ ವಿಕೋಪ ಸಂಭವಿಸುವ ಸಂದರ್ಭದಲ್ಲಿ ಅಲ್ಲಿನ ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡುವ ಜೊತೆಗೆ ಜಿಲ್ಲಾಡಳಿತದೊಂದಿಗೆ ಸಮನ್ವಯ ಸಾಧಿಸುವುದು. ಪರಿಹಾರ ಮತ್ತು ಪುನರ್ವಸತಿ ಕಾರ್ಯಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕಾಗಿ ಸಚಿವರಿಗೆ ಈ ಜವಾಬ್ದಾರಿಗಳನ್ನು ಸಚಿವರಿಗೆ ವಹಿಸಲಾಗಿದೆ.

ಬೆಂಗಳೂರು ದಕ್ಷಿಣ ಜಿಲ್ಲೆಗೆ ರಾಮಲಿಂಗಾರೆಡ್ಡಿ, ಬೆಂಗಳೂರು ನಗರ ಜಿಲ್ಲೆಗೆ ಕೃಷ್ಣಬೈರೇಗೌಡ ಅವರಿಗೆ ಜವಾಬ್ದಾರಿ ವಹಿಸಲಾಗಿದೆ. ಮೈಸೂರು ಜವಾಬ್ದಾರಿ ಡಾ.ಯತೀಂದ್ರ ಸಿದ್ದರಾಮಯ್ಯ ವರಿಗೆ ನೀಡಲಾಗಿದೆ. ಕೆಲವರಿಗೆ ಮೂರು, ಮತ್ತೆ ಕೆಲವರಿಗೆ ನಾಲ್ಕು ಜಿಲ್ಲೆ ಜವಾಬ್ದಾರಿ ಪುಟ 2ಕ್ಕೆ

### ಯಾವ ಜಿಲ್ಲೆಗೆ ಯಾವ ಸಚಿವರು?

| ಹೆಸರು | ಜಿಲ್ಲೆ |
|---|---|
| ಡಾ.ಜಿ.ಪರಮೇಶ್ವರ್ | ತುಮಕೂರು ಮತ್ತು ಚಿತ್ರದುರ್ಗ |
| ಕೆ.ಹೆಚ್.ಮುನಿಯಪ್ಪ | ಬೆಂಗಳೂರು ಗ್ರಾಮಾಂತರ, ಬಳ್ಳಾರಿ ಮತ್ತು ವಿಜಯನಗರ |
| ರಾಮಲಿಂಗಾರೆಡ್ಡಿ | ಬೆಂಗಳೂರು ದಕ್ಷಿಣ ಮತ್ತು ಮಂಡ್ಯ |
| ಎಂ.ಬಿ. ಪಾಟೀಲ್ | ವಿಜಯಪುರ ಮತ್ತು ಬಾಗಲಕೋಟೆ |
| ಕೆ.ಜೆ.ಜಾರ್ಜ್ | ಶಿವಮೊಗ್ಗ, ಚಿಕ್ಕಮಗಳೂರು ಮತ್ತು ದಾವಣಗೆರೆ |
| ಈಶ್ವರ್ ಖಂಡ್ರೆ | ಬೀದರ್ ಮತ್ತು ಗದಗ |
| ಸತೀಶ್ ಜಾರಕಿಹೊಳಿ | ಬೆಳಗಾವಿ, ಧಾರವಾಡ ಮತ್ತು ಹಾವೇರಿ |
| ಯು.ಟಿ. ಖಾದರ್ ಫರೀದ್ | ಉಡುಪಿ, ಕೊಡಗು, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ |
| ಕೃಷ್ಣ ಬೈರೇಗೌಡ | ಬೆಂಗಳೂರು ನಗರ ಮತ್ತು ಹಾಸನ |
| ಪ್ರಿಯಾಂಕ್ ಖರ್ಗೆ | ಕಲಬುರಗಿ ಮತ್ತು ಯಾದಗಿರಿ |
| ಡಾ.ಶರಣಪ್ರಕಾಶ್ ಪಾಟೀಲ್ | ರಾಯಚೂರು ಮತ್ತು ಕೊಪ್ಪಳ |
| ಭೈರತಿ ಸುರೇಶ್ | ಕೋಲಾರ ಮತ್ತು ಚಿಕ್ಕಬಳ್ಳಾಪುರ |
| ಡಾ.ಯತೀಂದ್ರ ಸಿದ್ದರಾಮಯ್ಯ | ಮೈಸೂರು ಮತ್ತು ಚಾಮರಾಜನಗರ |

## ಆರ್‌ಎಸ್‌ಎಸ್ ನಿಷೇಧವೇ ಗುರಿ

**ಬಿಜೆಪಿಯಿಂದ 4 ಸಾವಿರ ಕೋಟಿ ಸಂಗ್ರಹ: ಬಿ.ಕೆ.ಹರಿಪ್ರಸಾದ್**

**ಹುಬ್ಬಳ್ಳಿ:** ರಾಷ್ಟ್ರೀಯ ಸ್ವಯಂ ಸೇವಕ ಸಂಘವನ್ನು ಈಗಾಗಲೇ ಮೂರು ಬಾರಿ ನಿಷೇಧ ಮಾಡಿದ್ದೇವೆ. ಈಗ ನಮ್ಮ ಮುಂದಿನ ಹೋರಾಟವೂ ಇದೇ ಕಾರಣಕ್ಕೆ ನಡೆಯಲಿದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ತಿಳಿಸಿದರು.

ಮಾಧ್ಯಮದವರೊಂದಿಗೆ ಗುರುವಾರ ಮಾತನಾಡಿದ ಅವರು, ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಆರ್‌ಎಸ್‌ಎಸ್ ಟೀಕೆ ಮಾತನಾಡುತ್ತಿರುವ ಕಾರಣಕ್ಕೆ, ಜನರ ಗಮನ ಬೇರೆಡೆ ಸೆಳೆಯಲು ಬಿಜೆಪಿ ಭೂ ಹಗರಣದಲ್ಲಿ ಮಲ್ಲಿಕಾರ್ಜುನ್ ಖರ್ಗೆ ಭಾಗಿಯಾಗಿದ್ದಾರೆಂದು ಆರೋಪಿಸುತ್ತಿದೆ ಎಂದು ಟೀಕಿಸಿದರು.

ಬಿಜೆಪಿ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದ ನಂತರ 4 ಸಾವಿರ ಕೋಟಿ ಪುಟ 2ಕ್ಕೆ

## ಪ್ರೊ.ಜ್ಞಾನಪ್ರಕಾಶ್ ಮುಕ್ತ ವಿವಿ ಕುಲಪತಿ

**ಮೈಸೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ನೂತನ ಕುಲಪತಿಯಾಗಿ ಮೈಸೂರು ವಿಶ್ವವಿದ್ಯಾನಿಲಯದ ಭೌತಶಾಸ್ತ್ರ ವಿಭಾಗದ ಹಿರಿಯ ಪ್ರಾಧ್ಯಾಪಕ ಡಾ.ಜ್ಞಾನಪ್ರಕಾಶ್ ಅವರನ್ನು ನೇಮಕ ಮಾಡಲಾಗಿದೆ.



ವಿಶ್ವವಿದ್ಯಾನಿಲಯಗಳ ಕುಲಾಧಿಪತಿಗಳೂ ಆದ ರಾಜ್ಯಪಾಲರು ಆದೇಶ ಹೊರಡಿಸಿದ್ದಾರೆ. ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಅವರ ಅಧಿಕಾರಾವಧಿ ಅಂತ್ಯಗೊಂಡ ಹಿನ್ನೆಲೆಯಲ್ಲಿ ನೂತನ ಕುಲಪತಿ ನೇಮಕ ಮಾಡಲಾಗಿದೆ.

ಮೈಸೂರು ವಿವಿ ಭೌತಶಾಸ್ತ್ರ ವಿಭಾಗದಲ್ಲಿ ಪ್ರಾಧ್ಯಪಕರಾಗಿ ಶೈಕ್ಷಣಿಕ ಕ್ಷೇತ್ರದಲ್ಲಿ ಸಂಶೋಧನೆ, ಬೋಧನೆ ಹಾಗೂ ಆಡಳಿತಾತ್ಮಕ ಅನುಭವ ಹೊಂದಿದ್ದಾರೆ.

## ಮತದಾರರ ಪಟ್ಟಿ ಪರಿಷ್ಕರಣೆ ತಡೆಯಲು ಛಲವಾದಿ ದೂರು

**ಬೆಂಗಳೂರು:** ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಪಾಲಿಕೆಗಳ 27 ವಾರ್ಡ್‌ಗಳಲ್ಲಿ ರಾಜ್ಯ ಚುನಾವಣಾ ಆಯೋಗ ಕಾನೂನು ಬಾಹಿರವಾಗಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ನಡೆಸುತ್ತಿದೆ. ತಕ್ಷಣವೇ ಇದನ್ನು ತಡೆಯಿರಿ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ರಾಜ್ಯ ಮುಖ್ಯ ಚುನಾವಣಾಧಿಕಾರಿ ವಿ.ಅನ್ಬುಕುಮಾರ್‌ಗೆ ಮನವಿ ಸಲ್ಲಿಸಿದ್ದಾರೆ.



ಭಾರತೀಯ ಚುನಾವಣಾ ಆಯೋಗದ ಆದೇಶದಂತೆ ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿ ಈಗಾಗಲೇ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ನಡೆಸುತ್ತಿದೆ. ಈ ಮಧ್ಯೆ ರಾಜ್ಯ ಚುನಾವಣಾ ಆಯೋಗ ಗ್ರೇಟರ್ ಬೆಂಗಳೂರು ಪುಟ 2ಕ್ಕೆ

## ತೋತಾಪುರಿ ಮಾವಿಗೆ 1,750 ಬೆಂಬಲ ಬೆಲೆ

**ಕೇಂದ್ರ ಸರ್ಕಾರದಿಂದ ಘೋಷಣೆ: ಎಚ್.ಡಿ.ಕುಮಾರಸ್ವಾಮಿ**



**ನವದೆಹಲಿ:** ಮಾವು ಬೆಲೆ ಕುಸಿತದಿಂದ ಕಂಗಾಲಾಗಿದ್ದ ಕರ್ನಾಟಕದ ರೈತರಿಗೆ ಕೇಂದ್ರ ಸರ್ಕಾರ ಕೈ ಹಿಡಿದಿದೆ. ಮಾರುಕಟ್ಟೆ ಹಸ್ತಕ್ಷೇಪ ಯೋಜನೆಯಡಿ ತೋತಾಪುರಿ ಮಾವಿಗೆ ಪ್ರತಿ ಕ್ವಿಂಟಲ್‌ಗೆ 1,750 ಬೆಂಬಲ ಬೆಲೆ ಘೋಷಿಸಿದೆ. 1,30,000 ಮೆಟ್ರಿಕ್ ಟನ್ ಮಾವು ಖರೀದಿಗೆ ಒಪ್ಪಿಗೆ ನೀಡಿದೆ.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಅಧಿಕೃತ ಆದೇಶ ಹೊರಡಿಸಿರುವುದನ್ನು ಖಚಿತಪಡಿಸಿದ್ದಾರೆ. ನನ್ನ ವಿನಂತಿ ಮನ್ನಿಸಿ ರಾಜ್ಯದ ಮಾವು ಬೆಳೆಗಾರರ ನೆರವಿಗೆ ಧಾವಿಸಿ ಆರ್ಥಿಕ ನೆರವು ಘೋಷಿಸಿದ ಕೇಂದ್ರದ ಕೃಷಿ ಮತ್ತು ರೈತ ಕಲ್ಯಾಣ ಖಾತೆ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಧನ್ಯವಾದ ಸಲ್ಲಿಸುತ್ತೇನೆ ಎಂದು ಕುಮಾರಸ್ವಾಮಿ ತಿಳಿಸಿದ್ದಾರೆ.

ಬೆಲೆ ಕುಸಿತದಿಂದ ಮಾವು ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದರು. ಈ ಸಂಬಂಧ ಕೇಂದ್ರ ಕೃಷಿ ಸಚಿವರಿಗೆ ಪತ್ರ ಬರೆದು ಮನವಿ ಸಲ್ಲಿಸಿದ್ದೆ. ಅಲ್ಲದೆ, ಬುಧವಾರ ಕೃಷಿ ಸಚಿವರ ನಿವಾಸಕ್ಕೆ ತೆರಳಿ ಮಾವು ಬೆಳೆಗಾರರ ಸಂಕಷ್ಟದ ಬಗ್ಗೆ ಮಾವರಿಕೆ ಮಾಡಿಕೊಟ್ಟು ಕೂಡಲೇ ನೆರವಿಗೆ ಬರಬೇಕು ಎಂದು ಕೋರಿದ್ದೆ. ನನ್ನ ಮನವಿಗೆ ಸ್ಪಂದಿಸಿ ತಕ್ಷಣವೇ ಆರ್ಥಿಕ ನೆರವು ಘೋಷಣೆ ಮಾಡುವುದಾಗಿ ಸಚಿವರು ಭರವಸೆ ನೀಡಿದ್ದರು ಎಂದು ತಿಳಿಸಿದ್ದಾರೆ.

## ಪೋಕ್ಸೋ ಪ್ರಕರಣ: ವಚನಾನಂದ ಶ್ರೀಗಳ ನಿರೀಕ್ಷಣಾ ಜಾಮೀನು ರದ್ದು



**ಬೆಂಗಳೂರು:** ಹರಿಹರ ಪಂಚಮಸಾಲಿ ಪೀಠದ ವಚನಾನಂದ ಶ್ರೀಗಳಿಗೆ ಪೋಕ್ಸೋ ಪ್ರಕರಣದಲ್ಲಿ ನೀಡಿದ್ದ ನಿರೀಕ್ಷಣಾ ಜಾಮೀನನ್ನು ಹೈಕೋರ್ಟ್ ರದ್ದುಪಡಿಸಿದೆ.

ನ್ಯಾ.ಎಂ.ನಾಗಪ್ರಸನ್ನ ಅವರಿದ್ದ ಪೀಠ ನಿರೀಕ್ಷಣಾ ಜಾಮೀನು ರದ್ದುಗೊಳಿಸಿ ಆದೇಶ ಪ್ರಕಟಿಸಿದೆ. ಆದರೆ, ರೆಗ್ಯೂಲರ್ ಜಾಮೀನಿಗೆ ಅರ್ಜಿ ಸಲ್ಲಿಸಲು ಮೂರು ವಾರಗಳ ಕಾಲಾವಕಾಶ ನೀಡಿದೆ. ಮೂರು ವಾರಗಳ ವರೆಗೆ ನಿರೀಕ್ಷಣಾ ಜಾಮೀನಿನ ರಕ್ಷಣೆ ಮುಂದುವರಿಯಲಿದೆ ಎಂದು ಕೋರ್ಟ್ ತಿಳಿಸಿದೆ. ಹೀಗಾಗಿ ಬಂಧನ ಭೀತಿಯಿಂದ ವಚನಾನಂದ ಶ್ರೀ ಪಾರಾಗಿದ್ದಾರೆ.

ಪೋಕ್ಸೋ ಪ್ರಕರಣದಲ್ಲಿ ನಿರೀಕ್ಷಣಾ ಜಾಮೀನು ಪ್ರಶ್ನಿಸಿ ಸಂತ್ರಸ್ತ ಬಾಲಕನ ತಾಯಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಕೋರ್ಟ್ ನಿರಿಕ್ಷಣಾ ಜಾಮೀನು ನೀಡಿದ ವಿಧಾನ ಸರಿಯಲ್ಲ ಎಂದು ತಿಳಿಸಿದೆ. ದೂರು ನೀಡುವ 1 ವಾರ ಮೊದಲೇ ನಿರೀಕ್ಷಣಾ ಜಾಮೀನು ನೀಡಲಾಗಿದೆ. ಈ ಕ್ರಮ ಸರಿಯಲ್ಲ ಎಂದು ಹೈಕೋರ್ಟ್ ಜಾಮೀನು ರದ್ದುಗೊಳಿಸಿದೆ.

ವಿಚಾರಣೆ ಸಂದರ್ಭದಲ್ಲಿಯೇ ವಚನಾನಂದ ಸ್ವಾಮೀಜಿ ಜಾಮೀನು ಪಡೆದ ರೀತಿಗೆ ಸ್ವತಃ ಹೈಕೋರ್ಟ್ ಅಚ್ಚರಿ ವ್ಯಕ್ತಪಡಿಸಿತ್ತು. ಮೇ 7ರಂದು ಸ್ವಾಮೀಜಿ ವಿರುದ್ಧ ಪೋಕ್ಸೋ ದೂರು ದಾಖಲಾಗಿದೆ. ಆದರೆ ಶ್ರೀಗಳು ಅದರ ಹಿಂದಿನ ದಿನ ಅಂದರೆ ಮೇ 6ರಂದೇ ನಿರೀಕ್ಷಣಾ ಜಾಮೀನು ಪಡೆದಿದ್ದಾರೆ. ದೂರು ದಾಖಲು ಮುನ್ನವೇ ಜಾಮೀನು ಕೊಟ್ಟ ರೀತಿ ಆಘಾತಕಾರಿ. ಮೇಲ್ನೋಟಕ್ಕೆ ಈ ಪ್ರಕರಣದಲ್ಲಿ ಪುಟ 2ಕ್ಕೆ

## ತ.ನಾಡಿಗೆ ಕಾವೇರಿ ನೀರು: ರಾಜ್ಯದ ರೈತರಿಗೆ ಅನ್ಯಾಯ

**ಬೆಂಗಳೂರು:** ರಾಜ್ಯ ಸರ್ಕಾರ ರಾಜ್ಯದ ರೈತರಿಗೆ ಕಾವೇರಿ ನೀರು ಬಿಡದೆ ತಮಿಳುನಾಡಿಗೆ ನೀರು ಹರಿಸುತ್ತಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಆರೋಪಿಸಿದರು.

ವಿಧಾನಸೌಧದಲ್ಲಿ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ರಾಜ್ಯದಲ್ಲಿ ಮುಂಗಾರು ಮಳೆ ಕೊರತೆಯಾಗಿದೆ. ಕೆಆರ್‌ಎಸ್ ಖಾಲಿಯಾಗುತ್ತಿದೆ. ಹೀಗಿದ್ದೂ, ತಮಿಳುನಾಡಿಗೆ ನೀರು ಹರಿಸುವ ಅವಶ್ಯಕತೆ ಏನು ಇತ್ತು ಎಂದು ಪ್ರಶ್ನಿಸಿದರು.

ಮೇಕೆದಾಟು ಯೋಜನೆಗೆ ತಡೆ ತರುತ್ತೇವೆ ಎಂದು ತಮಿಳುನಾಡು ಮುಖ್ಯಮಂತ್ರಿ ವಿಜಯ್ ಹೇಳಿದ್ದಾರೆ. ಅವರೊಂದಿಗೆ ಮಾತನಾಡುತ್ತೇನೆ ಎಂದಷ್ಟೇ ನಮ್ಮ ಮುಖ್ಯಮಂತ್ರಿ ಹೇಳಿದ್ದಾರೆ. ಆದರೆ ಪುಟ 2ಕ್ಕೆ

## ಕನ್ನಡ ಪತ್ಯಕ್ಕೆ 'ಕೃಷ್ಣ ನಾಮ': ಮಧು ಬಂಗಾರಪ್ಪ ಆಕ್ಷೇಪ

**ಬೆಂಗಳೂರು:** ಆರನೇ ತರಗತಿಯ ಎನ್‌ಸಿಇಆರ್‌ಟಿ ಕನ್ನಡ ಪತ್ಯ ಪುಸ್ತಕ ವಿಷಯದಲ್ಲಿ ಮಾಜಿ ಶಿಕ್ಷಣ ಸಚಿವ ಮಧು ಬಂಗಾರಪ್ಪ ಆಕ್ಷೇಪ ವ್ಯಕ್ತಪಡಿಸಿದ್ದಾರೆ.



ರಾಜ್ಯದೊಂದಿಗೆ ಯಾವುದೇ ಚರ್ಚೆ ನಡೆಸದೇ ಪುಸ್ತಕ ಬಿಡುಗಡೆ ಮಾಡಲಾಗಿದೆ. ಬಿಜೆಪಿ ಸರ್ಕಾರ ಮಕ್ಕಳ ಮನಸ್ಸಿನಲ್ಲಿ ಸೈದ್ಧಾಂತಿಕ ವಿಚಾರಗಳನ್ನು ಹೇರಿಕೆ ಮಾಡಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದ್ದಾರೆ.

ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿಯೂ ಪಠ್ಯಪುಸ್ತಕ ಪರಿಷ್ಕರಣೆಯಲ್ಲಿ ಅನೇಕ ತಪ್ಪುಗಳು ಕಂಡುಬಂದಿದ್ದವು. ಈಗ ಪುಸ್ತಕಕ್ಕೆ ಪುಟ 2ಕ್ಕೆ

## 'ಕೃಷ್ಣ' ನದಿಯ ಹೆಸರು: ಧರ್ಮಕ್ಕೆ ಸಂಬಂಧ ಇಲ್ಲ

**ನವದೆಹಲಿ:** ಪುಸ್ತಕದ ಹೆಸರಿಗೂ ಧರ್ಮಕ್ಕೂ ಯಾವುದೇ ಸಂಬಂಧ ಇಲ್ಲ. ಕೃಷ್ಣ ಎಂಬುದು ಕೃಷ್ಣಾ ನದಿಯ ಹೆಸರು ಎಂದು ರಾಷ್ಟ್ರೀಯ ಶೈಕ್ಷಣಿಕ ಸಂಶೋಧನೆ ಮತ್ತು ತರಬೇತಿ ಮಂಡಳಿ ತಿಳಿಸಿದೆ.

6ನೇ ತರಗತಿಯ ಕನ್ನಡ ಪಠ್ಯಪುಸ್ತಕ ಕೃಷ್ಣ ಕುರಿತು ಎದ್ದಿರುವ ವಿವಾದಕ್ಕೆ ಎನ್‌ಸಿಇಆರ್‌ಟಿ ಸ್ಪಷ್ಟನೆ ನೀಡಿದೆ. ಪಠ್ಯಪುಸ್ತಕಕ್ಕೆ ಕೃಷ್ಣ ಎಂದು ಹೆಸರಿಟ್ಟಿರುವ ಬಗ್ಗೆ ಮಾಜಿ ಶಿಕ್ಷಣ ಸಚಿವ ಮಧು ಬಂಗಾರಪ್ಪ ಆಕ್ಷೇಪ ವ್ಯಕ್ತಪಡಿಸಿದರು.

ಕನ್ನಡ 6ನೇ ತರಗತಿಯ (ಆರ್–3) ಪಠ್ಯಪುಸ್ತಕಕ್ಕೆ ಕೃಷ್ಣ ಎಂದು ಹೆಸರು ಇಟ್ಟಿರುವುದಕ್ಕೆ ವಿರೋಧ ವ್ಯಕ್ತವಾಗಿತ್ತು. ಜೊತೆಗೆ, ಸಸ್ಯಾಹಾರವನ್ನು ಮಾತ್ರ ಪ್ರೋತ್ಸಾಹಿಸಲಾಗಿದೆ ಮತ್ತು ಮಾಂಸಾಹಾರವನ್ನು ಕಡೆಗಣಿಸಲಾಗಿದೆ ಎಂಬ ಆರೋಪ ಕೇಳಿಬಂದಿತ್ತು. ಎಲ್ಲ ಆರ್–3 ಭಾಷಾ ಪಠ್ಯಪುಸ್ತಕಗಳಿಗೆ ಭಾರತದ ನದಿಗಳ ಹೆಸರನ್ನೇ ಇಡಲಾಗಿದೆ ಎಂದು ಎನ್‌ಸಿಇಆರ್‌ಟಿ ತಿಳಿಸಿದೆ. ಪುಟ 2ಕ್ಕೆ

## ನಟಿ ಕೃಷಿ ನಿವಾಸದಲ್ಲಿ ಉದ್ಯಮಿ ವೈಶಾಕ್ ಆತ್ಮಹತ್ಯೆ

**ಬೆಂಗಳೂರು:** ನಟಿ ಕೃಷಿ ತಾಪಂಡ ಅವರ ಆರ್.ಆರ್. ನಗರದ ಎಲಿಗೇಟ್ ಅಪಾರ್ಟ್ಮೆಂಟ್‌ನ ಬೆಡ್ ರೂಮ್‌ನಲ್ಲಿ ಕೃಷಿ ಗೆಳೆಯ ಹಾಗೂ ಉದ್ಯಮಿ ವೈಶಾಕ್ ಗುರುವಾರ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ವೈಶಾಕ್ ಅವರಿಗೆ ಹೆಂಡತಿ ಮತ್ತು ಮಕ್ಕಳಿದ್ದರೂ ನಟಿ ತಾಪಂಡ ಮನೆಯಲ್ಲೇ ವಾಸವಿದ್ದರು. ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ನಟಿಗೆ ಮೆಸೇಜ್ ಪುಟ 2ಕ್ಕೆ



# ಮೂರು ರಾಜ್ಯಗಳ ಒಮ್ಮತ

**ತುಂಗಭದ್ರಾ ಪಾತ್ರದ ರೈತರ ಹಿತರಕ್ಷಣೆ: ಸಿಎಂ ಡಿ.ಕೆ.ಶಿವಕುಮಾರ್**



**ಕೊಪ್ಪಳ:** ತುಂಗಭದ್ರಾ ನದಿ ಪಾತ್ರದ ರೈತರ ಹಿತರಕ್ಷಣೆಗೆ ಮೂರು ರಾಜ್ಯಗಳೂ ಚರ್ಚಿಸಿ ಒಮ್ಮತದ ಐತಿಹಾಸಿಕ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಘೋಷಿಸಿದರು.

ಮುನಿರಾಬಾದ್‌ನಲ್ಲಿ ಗುರುವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನವಲಿ ಜಲಾಶಯ ನಿರ್ಮಾಣ ಅಥವಾ ಜಲಾಶಯದಲ್ಲಿ ಶೇಖರಣೆಯಾಗಿರುವ ಹೂಳನ್ನು ತೆಗೆದು ನೀರನ್ನು ಸಂರಕ್ಷಿಸುವ ವಿಚಾರದ ಬಗ್ಗೆ ಒಂದು ತಾಸು ಸುದೀರ್ಘವಾಗಿ ಚರ್ಚೆ ನಡೆಸಲಾಗಿದೆ. ರೈತರ ಹಿತವನ್ನು ಕಾಯಲು ಮತ್ತು ಅವರ ರಕ್ಷಣೆ ಮಾಡಲು ನಾವೆಲ್ಲರೂ ಸೇರಿ ಒಮ್ಮತದ ಅಭಿಪ್ರಾಯಕ್ಕೆ ಬಂದಿದ್ದೇವೆ ಎಂದು ತಿಳಿಸಿದರು.

ಜಲಸಂಪನ್ಮೂಲ ಇಲಾಖೆ ಇತಿಹಾಸದಲ್ಲೇ ಅತ್ಯಂತ ಪ್ರಮುಖವಾದ ದಿನವಾಗಿದೆ. ದೇಶದ ಒಕ್ಕೂಟ ವ್ಯವಸ್ಥೆಯಲ್ಲಿ ಸಂವಿಧಾನವನ್ನು ಎತ್ತಿಹಿಡಿಯಲು, ನಮ್ಮ ಹಕ್ಕುಗಳನ್ನು ರಕ್ಷಿಸಲು ಹಾಗೂ ರೈತರನ್ನು ಬದುಕಿಸಲು ನಮ್ಮ ನೀರು ನಮ್ಮ ಹಕ್ಕು ಎಂಬ ಘೋಷಣೆಯಡಿ ಮೂರು ರಾಜ್ಯಗಳ (ಕರ್ನಾಟಕ, ಆಂಧ್ರಪ್ರದೇಶ ಮತ್ತು ತೆಲಂಗಾಣ) ರೈತರ ಹಿತಕಾಯುವ ನಿಟ್ಟಿನಲ್ಲಿ ಈ ಐತಿಹಾಸಿಕ ತೀರ್ಮಾನಕ್ಕೆ ಬರಲಾಗಿದೆ ಎಂದು ತಿಳಿಸಿದರು.

## ಜಲಸಂಪನ್ಮೂಲ ಸಚಿವರ ಗೈರು!

**ಕೊಪ್ಪಳ:** ನೀರಾವರಿಗೆ ಸಂಬಂಧಿಸಿದ ಕಾರ್ಯಕ್ರಮದಲ್ಲಿ ರಾಜ್ಯದ ಜಲಸಂಪನ್ಮೂಲ ಖಾತೆ ಸಚಿವ ರಾಮಲಿಂಗಾರೆಡ್ಡಿ ಗೈರಾಗಿರುವುದು ರಾಜಕೀಯ ಬೇಗುದಿಯ ಹಿನ್ನೆಲೆಯಲ್ಲಿ ಕುತೂಹಲಕ್ಕೆ ಕಾರಣವಾಗಿತ್ತು.

ಕಾರ್ಯಕ್ರಮ ನಡೆಯುವ ಸ್ಥಳ, ಹೆಲಿಪ್ಯಾಡ್ ಹಾಗೂ ಜಲಾಶಯ ಸೇರಿದಂತೆ ವಿವಿಧೆಡೆ ಸಿದ್ದತಾ ಕಾರ್ಯಗಳನ್ನು ಜೂ. 18ರಂದು ಸಚಿವರು ಪರಿಶೀಲಿಸಿದ್ದರು. ಆಂಧ್ರ ಹಾಗೂ ತೆಲಂಗಾಣ ರಾಜ್ಯಗಳ ಜಲಸಂಪನ್ಮೂಲ ಇಲಾಖೆ ಸಚಿವರು ಪಾಲ್ಗೊಂಡಿದ್ದರು. ಆದರೆ ರಾಜ್ಯದ ಸಚಿವರೇ ಗೈರಾಗಿದ್ದು ಚರ್ಚೆಗೆ ಕಾರಣವಾಯಿತು.

ಕಾರ್ಯಕ್ರಮಕ್ಕೆ ಗೈರಾಗಿರುವ ಬಗ್ಗೆ ಪ್ರತಿಕ್ರಿಯೆ ನೀಡಿರುವ ರಾಮಲಿಂಗಾರೆಡ್ಡಿ ವೈಯಕ್ತಿಕ ಕಾರಣದಿಂದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಸಾಧ್ಯವಾಗಿಲ್ಲ. ಇದನ್ನು ಮುಖ್ಯಮಂತ್ರಿ ಗಮನಕ್ಕೆ ತರಲಾಗಿತ್ತು ಎಂದು ತಿಳಿಸಿದ್ದಾರೆ.

# ಗೋದಾವರಿ–ಕಾವೇರಿ ನದಿ ಜೋಡಣೆಗೆ ಆಗ್ರಹ

**'ರಾಷ್ಟ್ರೀಯ ಯೋಜನೆ' ಅನುಷ್ಠಾನಕ್ಕೆ ಕೇಂದ್ರಕ್ಕೆ ಸಿಎಂ ನಾಯ್ಡು ಮನವಿ**



**ಕೊಪ್ಪಳ:** ದಕ್ಷಿಣ ಭಾರತದ ಪ್ರಮುಖ ನದಿಗಳಾದ ಗೋದಾವರಿ ಮತ್ತು ಕಾವೇರಿ ನದಿಗಳ ಜೋಡಣೆ ಯೋಜನೆಯನ್ನು ಕೇಂದ್ರ ಸರ್ಕಾರ 'ರಾಷ್ಟ್ರೀಯ ಯೋಜನೆ'ಯಾಗಿ ಪರಿಗಣಿಸಿ ಅನುಷ್ಠಾನಕ್ಕೆ ತರಬೇಕು ಎಂದು ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಕೇಂದ್ರಕ್ಕೆ ಮನವಿ ಮಾಡಿದರು.

ಮುನಿರಾಬಾದ್‌ನಲ್ಲಿ ತುಂಗಭದ್ರಾ ಜಲಾಶಯಕ್ಕೆ ನೂತನವಾಗಿ ಅಳವಡಿಸಲಾದ 33 ಸ್ಪಿಲ್‌ವೇ ಗೇಟುಗಳನ್ನು ಲೋಕಾರ್ಪಣೆ ಸಮಾರಂಭದಲ್ಲಿ ಅವರು ಮಾತನಾಡಿದರು.

ದೇಶದ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ನದಿಗಳ ಜೋಡಣೆ ಅತ್ಯಂತ ತುರ್ತಾಗಿ ಆಗಬೇಕಿದೆ. ನದಿ ಜೋಡಣೆ ಪ್ರಕ್ರಿಯೆಯಲ್ಲಿ ಯಾವುದೇ ರಾಜ್ಯಕ್ಕೆ ಅನ್ಯಾಯ ಆಗಬಾರದು ಎಂದು ಹೇಳಿದರು.

ಈ ಯೋಜನೆಯನ್ನು ಜಾರಿಗೊಳಿಸುವಾಗ ಕರ್ನಾಟಕ, ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳ ಹಕ್ಕುಗಳನ್ನು ಸಂಪೂರ್ಣವಾಗಿ ರಕ್ಷಿಸಬೇಕು. ಈ ಮೂರೂ ರಾಜ್ಯಗಳ ಹಕ್ಕುಗಳಿಗೆ ಧಕ್ಕೆ ಬಾರದಂತೆ ಸೂಕ್ತ ಕ್ರಿಯಾ ಯೋಜನೆ ರೂಪಿಸುವ ಜೊತೆಗೆ, ಅಗತ್ಯ ಬಿದ್ದರೆ ತಮಿಳುನಾಡಿಗೂ ನೀರನ್ನು ಕೊಂಡೊಯ್ಯುವ ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದರು.

ಪ್ರಸ್ತುತ ದೇಶದಲ್ಲಿ ಒಂದು ಕಡೆ ಭೀಕರ ಪ್ರವಾಹ ಬಂದರೆ, ಮತ್ತೊಂದು ಕಡೆ ತೀವ್ರ ಬರಗಾಲವಿರುತ್ತದೆ. ಈ ವರ್ಷ ಎಲ್ ನಿನೋ ಪ್ರಭಾವದಿಂದ ತುಂಗಭದ್ರಾ ಹಾಗೂ ಆಲಮಟ್ಟಿ ಜಲಾಶಯಗಳಿಗೂ ನಿರೀಕ್ಷಿತ ಪ್ರಮಾಣದಲ್ಲಿ ನೀರಿನ ಒಳಹರಿವು ಬಂದಿಲ್ಲ. ಇಂತಹ ಪರಿಸ್ಥಿತಿಯಲ್ಲಿ ದೇಶದ ಎಲ್ಲಾ ನದಿಗಳನ್ನು ಜೋಡಿಸುವುದೇ ಇರುವ ಏಕೈಕ ಮಾರ್ಗವಾಗಿದೆ. ಹೆಚ್ಚುವರಿ ನೀರಿರುವ ನದಿಗಳಿಂದ ಕೊರತೆಯಿರುವ ನದಿಗಳಿಗೆ ನೀರನ್ನು ಹರಿಸುವ ಮೂಲಕ ಬರಗಾಲವನ್ನು ಸಮರ್ಥವಾಗಿ ಎದುರಿಸಬಹುದು. ಇದರಿಂದ ರಾಜ್ಯಗಳ ನಡುವಿನ, ಜಿಲ್ಲೆಗಳ ನಡುವಿನ ಹಾಗೂ ರೈತರ ನಡುವಿನ ನೀರಿನ ಸಂಘರ್ಷಗಳನ್ನು ಸಂಪೂರ್ಣವಾಗಿ ತಡೆಯಬಹುದು ಎಂದು ಚಂದ್ರಬಾಬು ನಾಯ್ಡು ಅಭಿಪ್ರಾಯಪಟ್ಟರು.

ಪ್ರಧಾನಿ ನರೇಂದ್ರ ಮೋದಿ ಅವರ ಸಮರ್ಥ ನಾಯಕತ್ವದಲ್ಲಿ ದೇಶವು ತಂತ್ರಜ್ಞಾನ, ಹೆದ್ದಾರಿ ಹಾಗೂ ದೂರಸಂಪರ್ಕ ವಲಯದಲ್ಲಿ ಜಾಗತಿಕ ಮಟ್ಟದಲ್ಲಿ ವೇಗವಾಗಿ ಮುನ್ನಡೆಯುತ್ತಿದೆ. ನದಿಗಳ ಜೋಡಣೆ ಪ್ರಕ್ರಿಯೆಯೂ ಅವರ ನೇತೃತ್ವದಲ್ಲಿ ಯಶಸ್ವಿಯಾಗಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

# ನಟರಾಜ್ ಜೋಯ್ಸ್‌ಗೆ ಸಾಲು ಮರದ ತಿಮ್ಮಕ್ಕ ಪ್ರಶಸ್ತಿ

'ಮೈಸೂರು: ನಗರದ ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನದ ವತಿಯಿಂದ ಜಿಲ್ಲಾ ಪತ್ರಕರ್ತರ ಭವನದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆ ಸಮಾರಂಭದಲ್ಲಿ ಸಂಧ್ಯಾ ಸುರಕ್ಷಾ ಟ್ರಸ್ಟ್ ಅಧ್ಯಕ್ಷ ಬಿ. ಆರ್. ನಟರಾಜ್ ಜೋಯ್ಸ್ ಗೆ ಗಣ್ಯರು ವೃಕ್ಷಮಾತೆ ಸಾಲು ಮರದ ತಿಮ್ಮಕ್ಕ ಪ್ರಶಸ್ತಿ ಪ್ರದಾನ ಮಾಡಿದರು.

ಸಮಾರಂಭ ಉದ್ಘಾಟಿಸಿದ ಮುಡಾ ಮಾಜಿ ಅಧ್ಯಕ್ಷ ಎಚ್.ವಿ. ರಾಜೀವ್ ಮಾತನಾಡಿ, ನಮ್ಮ ಮಕ್ಕಳಿಗೆ ಏನೆಲ್ಲಾ ಕೂಡಿಡುವ ಬದಲು ಅವರ ಹೆಸರಿನಲ್ಲಿ ನೂರು ಮರ ಬೆಳೆಸಿದರೆ ಅದೇ ಅವರಿಗೆ ನೀಡುವ ದೊಡ್ಡ ಕೊಡುಗೆಯಾಗಿರುತ್ತದೆ. ಪ್ರಾಕೃತಿಕ ಅಸಮತೋಲನಕ್ಕೆ ಮಾನವನ ವಿಕೃತಿಯೇ ಕಾರಣವಾಗಿದೆ. ಹೀಗಾಗಿ ಪ್ರಕೃತಿಯನ್ನು ಉಳಿಸಿಕೊಳ್ಳುವ ಮೂಲಕ ಸಮತೋಲನದ ಅಭಿವೃದ್ಧಿ ಕೈಗೊಳ್ಳಬೇಕಾಗಿದೆ ಎಂದರು.

ಪ್ರಕೃತಿಯೊಡನೆ ಸಂಪರ್ಕ ಇದ್ದರೆ ಮಾತ್ರ ಬದುಕು ಹಸನಾಗುತ್ತದೆ. ಇದೇ ವೇಳೆ ನಗರದಲ್ಲಿ ಫ್ಲೈಓವರ್ ನಿರ್ಮಾಣಕ್ಕೆ ಮರ ಕಡಿಯಬೇಕಾಗುತ್ತದೆ ಎಂಬ ಕಾರಣಕ್ಕೇ ಹಲವರು ಅಡ್ಡಿ ಪಡಿಸಿದರು. ಇದು ಉತ್ತಮ ಬೆಳವಣಿಗೆಯಾಗಿದೆ. ಇನ್ನು, ಸಂಘ ಸಂಸ್ಥೆಗಳ ಹಸಿರೀಕರಣಕ್ಕೆ ಪಾಲಿಕೆ ಸಹಾ ಪ್ರೋತ್ಸಾಹಿಸಬೇಕಾದ ಅಗತ್ಯವಿದೆ. ಅಷ್ಟೇನೂ ಓದದಿದ್ದರೂ ಸಾಲು ಮರದ ತಿಮ್ಮಕ್ಕ ಪ್ರಕೃತಿ



ಸಂರಕ್ಷಣೆ, ವರ್ಧನೆಗೆ ನೀಡಿದ ಕೊಡುಗೆ ಮೂಲಕ ಇಂದು ವಿಶ್ವ ಪ್ರಸಿದ್ಧಿ ಹೊಂದಿದ್ದಾರೆ. ಹೀಗಾಗಿ ಇಂತಹವರ ಹೆಸರಿನಲ್ಲಿ ಪ್ರಶಸ್ತಿ ನೀಡುವುದು ಸ್ವಾಗತಾರ್ಹ ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮಾತನಾಡಿ, ಇಡೀ ವಿಶ್ವ ಪ್ರಕೃತಿ ಸಂರಕ್ಷಣೆ ವಿಷಯದಲ್ಲಿ ಒಂದಾಗಬೇಕಾಗಿದೆ. ಜನಸಂಖ್ಯೆ ನಿಯಂತ್ರಿಸದಿದ್ದರೆ ಪ್ರಕೃತಿಗೆ ದೊಡ್ಡ ಆಘಾತವಾಗುತ್ತದೆ. ಈ ಹಿಂದೆ ಮಲೆನಾಡಿನಲ್ಲಿ ಹರಿಯುತ್ತಿದ್ದ ಝರಿಗಳ ನೀರು ಸೇವನೆಗೆ ಯೋಗ್ಯವಾಗಿತ್ತು. ಆದರೆ ಈಚಿನ ವರ್ಷಗಳಲ್ಲಿ ಬೆಳೆಗಳಿಂದ ಪಡೆಯುವ ಫಸಲಿನಷ್ಟೇ ರಾಸಾಯನಿಕ ಹಾಕುತ್ತಿರುವ ಕಾರಣ ನೀರು ವಿಷಯಮಯವಾಗಿದೆ ಎಂದು ಬೇಸರಿಸಿದರು.

ಪ್ರಶಸ್ತಿ ಸ್ವೀಕರಿಸಿದ ನಟರಾಜ್ ಜೋಯ್ಸ್ ಮಾತನಾಡಿ, ಯಾರೋ ಕಷ್ಟ ಪಟ್ಟು ನೆಟ್ಟ ಗಿಡಗಳನ್ನು ಎಲೆ, ಹೂಗಳಿಗಾಗಿ ಕೊಂಬೆಯನ್ನೇ ಮುರಿಯುವವರೂ ಹೆಚ್ಚು. ಇದು ತಪ್ಪಬೇಕು. ಗಿಡಗಳ ಸಂರಕ್ಷಣೆಗೆ ಎಲ್ಲರೂ ಗಮನ ಹರಿಸಬೇಕೆಂದು ಕೋರಿದರು. ಅಂಬಳೆ ಶಿವಣ್ಣ ಅಧ್ಯಕ್ಷತೆ ವಹಿಸಿದ್ದರು. ರಾಜು ಕಾರ್ಯ, ಮಲ್ಲಿಕಾ ಮಹದೇವಸ್ವಾಮಿ, ಸಂಸ್ಥೆಯ ಅಧ್ಯಕ್ಷ ಬಸವರಾಜೇಂದ್ರ ಸ್ವಾಮೀಜಿ ಇನ್ನಿತರರು ಇದ್ದರು.



ಕೃಷ್ಣಮೂರ್ತಿಪುರಂ ಶ್ರೀ ರಾಮಮಂದಿರದಲ್ಲಿ ಶ್ರೀವೀರಾಂಜನೇಯ ಮಹಾಸಂಸ್ಥಾನಮ್ ಬಂಗಾರಮಕಿ ಪೀಠಾಧಿಪತಿ ಶ್ರೀ ಮಾರುತಿ ಗುರೂಜಿ ಸಾನಿಧ್ಯದಲ್ಲಿ ನಡೆಯುತ್ತಿರುವ ಶ್ರೀರಾಮತಾರಕ ಹೋಮ ಮತ್ತು ಸಿಂಧೂರ ಅರ್ಚನೆ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮದಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ ಭಾಗವಹಿಸಿ ಆಶೀರ್ವಾದ ಪಡೆದುಕೊಂಡರು. ಈ ಸಂದರ್ಭದಲ್ಲಿ ಸಂಚಾಲಕರಾದ ವಿ.ಮನು, ಪ್ರದೀಪ್ ಗೌಡ, ಅಜಯ್ ಶಾಸ್ತ್ರಿ, ವಿಕ್ರಂ ಅಯ್ಯಂಗಾರ್, ಟಿ.ಎಸ್.ಅರುಣ್ ಇನ್ನಿತರರು ಹಾಜರಿದ್ದರು.

ಮೊದಲ ಪುಟದಿಂದ

## ರಾಜ್ಯದ ರೈತರಿಗೆ ಅನ್ಯಾಯ

ಈವರೆಗೂ ಮಾತನಾಡಿಲ್ಲ. ನೀರು ಬಿಡುವುದಿಲ್ಲ ಎಂದು ಹೇಳುವ ಧೈರ್ಯ ನಮ್ಮ ಮುಖ್ಯಮಂತ್ರಿಗೆ ಇಲ್ಲ ಎಂದರು. ವಿಜಯ್ ಅವರ ಟಿವಿಕೆ ಪಕ್ಷದ ಜತೆಗೆ ಕಾಂಗ್ರೆಸ್ ಮೈತ್ರಿ ಮಾಡಿಕೊಂಡಿದೆ. ಹೀಗಾಗಿ ಮುಖ್ಯಮಂತ್ರಿ ಶಿವಕುಮಾರ್ ತಮಿಳುನಾಡು ಮುಖ್ಯಮಂತ್ರಿ ವಿರುದ್ಧ ಮಾತನಾಡುತ್ತಿಲ್ಲ. ಆ ಧೈರ್ಯವನ್ನೂ ಅವರು ತೋರುವುದಿಲ್ಲ. ಇವರ ಮೈತ್ರಿ ಕಾರಣಕ್ಕೆ ರಾಜ್ಯದ ರೈತರು ನೀರಿನ ಸಮಸ್ಯೆ ಎದುರಿಸಬೇಕಾಗಿದೆ ಎಂದು ದೂರಿದರು.

ಶಿವಕುಮಾರ್ ಅವರು ತಾವು ಹಿಂದೂ ಎಂದು ತೋರಿಸಿಕೊಳ್ಳುವ ಸಲುವಾಗಿ ದೇವಾಲಯಗಳಿಗೆ ಹೋಗುತ್ತಾರೆ. ಹಣೆಗೆ ವಿಭೂತಿ ಮತ್ತು ನಾಮ ಹಾಕಿಸಿಕೊಳ್ಳುತ್ತಾರೆ. ಆದರೆ ಸಹಾಯ ಮಾಡುವುದು ಮಾತ್ರ ಮುಸ್ಲಿಮರಿಗೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

## ಆರ್‌ಎಸ್‌ಎಸ್ ನಿಷೇಧವೇ ಗುರಿ

ಹಣ ಸಂಗ್ರಹಿಸಿದೆ. ನಮ್ಮ ಖಜಾನೆಯಲ್ಲಿ ಇರುವುದು ಕೇವಲ 700 ಕೋಟಿ. ನಮ್ಮದು ಬಡವರ ಪಕ್ಷ. ಚೆಕ್ ಮೂಲಕವೇ ವ್ಯವಹಾರ ನಡೆಯುತ್ತಿದೆ. ಬೆಂಗಳೂರಿನಲ್ಲಿ ಚಾಣಕ್ಯ ವಿಶ್ವವಿದ್ಯಾಲಯ ನಿರ್ಮಾಣಕ್ಕೆ ಬಡ ರೈತರ 106 ಎಕರೆ ಜಮೀನನ್ನು ಕೇವಲ 50 ಲಕ್ಷಕ್ಕೆ ಖರೀದಿ ಮಾಡಿದವರ ಬಗ್ಗೆ ನಮಗೆ ಗೊತ್ತಿಲ್ಲವೆ ಎಂದು ಪ್ರಶ್ನಿಸಿದರು.

ಎಸ್‌ಐಆರ್ ಬಗ್ಗೆ ನಮ್ಮ ವಿರೋಧವಿಲ್ಲ. ಆದರೆ, ನಿಜವಾದ ಯಾವೊಬ್ಬ ಮತದಾರನೂ ಪಟ್ಟಿಯಿಂದ ಬಿಟ್ಟುಹೋಗಬಾರದು ಎನ್ನುವುದುದು ನಮ್ಮ ಉದ್ದೇಶ. ಬಿಜೆಪಿ ಮತ್ತು ಆರ್‌ಎಸ್‌ಎಸ್ ಚುನಾವಣಾ ಆಯೋಗದ ಮೂಲಕ ತಮ್ಮನ್ನು ವಿರೋಧಿಸುವವರನ್ನು ಮತದಾರರ ಪಟ್ಟಿಯಿಂದ ಹೊರಗಿಡುವ ಷಡ್ಯಂತ್ರ ನಡೆಸುತ್ತಿವೆ. ಈ ನಿಟ್ಟಿನಲ್ಲಿ ನಾವು ವಿಭಾಗ ಮಟ್ಟದಲ್ಲಿ ಜಾಗೃತಿ ಸಮಾವೇಶ ನಡೆಸುತ್ತಿದ್ದೇವೆ ಎಂದು ಹೇಳಿದರು.

ಸಚಿವ ಸಂಪುಟ ವಿಸ್ತರಣೆಯಲ್ಲಿ ಯಾವುದೇ ಗೊಂದಲವಿಲ್ಲ. ಆದರೆ, ನಾವು ಸದ್ಯ ಎಸ್‌ಐಆರ್ ಕುರಿತು ಜನರಲ್ಲಿ ಜಾಗೃತಿ ಮೂಡಿಸಲು ನಿರತರಾಗಿದ್ದೇವೆ. ಜಿಲ್ಲಾ ಪಂಚಾಯ್ತಿ, ತಾಲ್ಲೂಕು ಪಂಚಾಯ್ತಿ ಹಾಗೂ ಉಪ ಚುನಾವಣೆಗಳು ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಪಕ್ಷದ ನೇತೃತ್ವದಲ್ಲಿ ನಡೆಯುತ್ತದೆ ಎಮದು ಅವರು ತಿಳಿಸಿದರು.

## ಧರ್ಮಕ್ಕೆ ಸಂಬಂಧ ಇಲ್ಲ

ಹಿಂದಿ ಪಠ್ಯಪುಸ್ತಕಕ್ಕೆ ಗಂಗಾ, ಇಂಗ್ಲಿಷ್ ಪಠ್ಯಪುಸ್ತಕಕ್ಕೆ ಕಾವೇರಿ ಹಾಗೂ ಉರ್ದುಗೆ ಜಮುನಾ ಎಂದು ಹೆಸರು ಇಡಲಾಗಿದೆ ಎಂದು ಸ್ಪಷ್ಟಪಡಿಸಿದೆ.

## ಶ್ರೀಗಳ ನಿರೀಕ್ಷಣಾ ಜಾಮೀನು ರದ್ದು

ನಿರೀಕ್ಷಣಾ ಜಾಮೀನು ನೀಡಿದ ವಿಧಾನ ಸರಿಯಲ್ಲ ಎಂದು ತಿಳಿಸಿತ್ತು.

## ಮೇಲುಸ್ತುವಾರಿ ಸಚಿವರ ನೇಮಕ

ನೀಡಲಾಗಿದೆ. ಈ ಆದೇಶವು ತಕ್ಷಣದಿಂದಲೇ ಜಾರಿಗೆ ಬರು ವಂತೆ ಸೂಚಿಸಲಾಗಿದೆ. ಮುಂದಿನ ಆದೇಶದ ವರೆಗೆ ಅನ್ವಯವಾಗಲಿದೆ ಎಂದು ತಿಳಿಸಲಾಗಿದೆ.

## ನೀವೂ ಮಾತಾಡಬೇಡಿ!: ಅಶೋಕ್

ನಿರಾಕರಿಸಿದರು. ಅಡ್ಡ ಮತದಾನ ಕುರಿತು ಧರ್ಮಸ್ಥಳದಲ್ಲಿ ಆಣೆ ಪ್ರಮಾಣ ಮಾಡಿಸುವುದು ಬೇಡ ಎಂದು ತೀರ್ಮಾನಿಸಿದ್ದೇವೆ. ವಿಜಯೇಂದ್ರ ಅವರು ವೈಯಕ್ತಿಕ ಭೇಟಿಗಾಗಿ ಧರ್ಮಸ್ಥಳಕ್ಕೆ ಹೋಗಿದ್ದಾರೆ. ಇದರಲ್ಲಿ ಯಾವುದೇ ರಾಜಕೀಯ ಇಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

## ನಟಿ ಕೃಷಿ ನಿವಾಸದಲ್ಲಿ ಉದ್ಯಮಿ ವೈಶಾಕ್ ಆತ್ಮಹತ್ಯೆ

ಮಾಡಿ ಆತ್ಮ ಹತ್ಯೆಗೆ ಶರಣಾಗಿದ್ದಾರೆ. ನಟಿ ಜೊತೆ ತನ್ನ ಪತಿ ಅಕ್ರಮ ಸಂಬಂಧ ಹೊಂದಿದ್ದ ಎಂದು ವೈಶಾಕ್ ಅವರ ಪತ್ನಿ ಪೊಲೀಸರಿಗೆ ದೂರು ನೀಡಿದ್ದಾರೆ. ವೈಶಾಕ್ ಅವರು ಪತ್ನಿಯೊಂದಿಗಿನ ವೈಮನಸ್ಸಿನಿಂದ ಆಗಾಗ್ಗ ನಟಿ ಕೃಷಿ ತಾಪಂಡ ಮನೆಗೆ ಬಂದು ಇರು ತ್ತಿದ್ದರು. ನಿನ್ನೆ ಕೂಡ ಇದೇ ಕಾರಣಕ್ಕೆ ಕೃಷಿ ತಾಪಂಡ ಮನೆಗೆ ಬಂದಿದ್ದ ವೈಶಾಕ್, ಅಲ್ಲಿಯೇ ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂಬ ಮಾಹಿತಿ ಇದೆ.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಅರಸು ಪ್ರತಿಮೆ ಮರು ಸ್ಥಾಪನೆ

## ಹಳೆಯ ಪ್ರತಿಮೆಯ ವಿವಾದ, ಬದಲಾವಣೆಯ ನಿರ್ಧಾರ

ಮೈಸೂರು: ಮೈಸೂರಿನ ಜಿಲ್ಲಾಧಿಕಾರಿ ಕಚೇರಿಯ ಮುಂಭಾಗದಲ್ಲಿದ್ದ ದಿವಂಗತ ಡಿ. ದೇವರಾಜ ಅರಸು ಅವರ ಹಳೆಯ ಪ್ರತಿಮೆಯನ್ನು ತೆರವುಗೊಳಿಸಿ, ಅದೇ ಸ್ಥಳದಲ್ಲಿ ಅವರ ನೈಜ ಮುಖಚಹರೆಯನ್ನು ಹೋಲುವ ಅತ್ಯಾಕರ್ಷಕ ನೂತನ ಪ್ರತಿಮೆಯನ್ನು ಯಶಸ್ವಿಯಾಗಿ ಮರುಸ್ಥಾಪನೆ ಮಾಡಲಾಗಿದೆ.

ಈ ಹಿಂದೆ 2025ರ ನವೆಂಬರ್ 3ರಂದು ಅನಾವರಣಗೊಂಡಿದ್ದ ಅರಸು ಅವರ ಪ್ರತಿಮೆಯು, ಅವರ ಮೂಲ ವ್ಯಕ್ತಿತ್ವ ಹಾಗೂ ಮುಖಭಾವಕ್ಕೆ ಹೊಂದಾಣಿಕೆಯಾಗುತ್ತಿಲ್ಲ ಎಂದು ಸಾರ್ವಜನಿಕವಾಗಿ ಮತ್ತು ರಾಜಕೀಯ ವಲಯದಲ್ಲಿ ವ್ಯಾಪಕ ಟೀಕೆಗೆ ಗುರಿಯಾಗಿತ್ತು. ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಸಹ ಪ್ರತಿಮೆಯಲ್ಲಿ ಅಗತ್ಯ



ಬದಲಾವಣೆಗಳನ್ನು ಮಾಡಿ, ಅರಸು ಅವರ ನೈಜ ರೂಪಕ್ಕೆ ಹತ್ತಿರವಾಗಿರುವಂತೆ ಕ್ರಮ ಕೈಗೊಳ್ಳಲು

> "ಜಿಲ್ಲಾಡಳಿತದ ವಿಶೇಷ ಮನವಿ ಮೇರೆಗೆ ಈ ನೂತನ ಪ್ರತಿಮೆಯ ಜವಾಬ್ದಾರಿಯನ್ನು ವಹಿಸಿಕೊಳ್ಳಲಾಯಿತು. ದೇವರಾಜ ಅರಸು ಅವರ ವ್ಯಕ್ತಿತ್ವಕ್ಕೆ ತಕ್ಕಂತೆ ಹಲವು ತಿಂಗಳುಗಳ ನಿರಂತರ ಪರಿಶ್ರಮದಿಂದ ಇದನ್ನು ಅತ್ಯಂತ ವೈಭವಪೂರಿತವಾಗಿ ಕೆತ್ತನೆ ಮಾಡಲಾಗಿದೆ. ಇಂತಹದೊಂದು ಐತಿಹಾಸಿಕ ಮತ್ತು ಗೌರವಾನ್ವಿತ ಅವಕಾಶವನ್ನು ನೀಡಿದ ಮೈಸೂರು ಜಿಲ್ಲಾಡಳಿತ ಹಾಗೂ ಎಲ್ಲರಿಗೂ ನಾನು ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತೇನೆ."
>
> ▸▸ ಅರುಣ್ ಯೋಗಿರಾಜ್
> ಶಿಲ್ಪಿ

ಶಿಫಾರಸು ಮಾಡಿದ್ದರು. ಆರಂಭದಲ್ಲಿ ಜಿಲ್ಲಾಡಳಿತವು ಹಳೆಯ ಪ್ರತಿಮೆಯಲ್ಲೇ ತಿದ್ದುಪಡಿ ಮಾಡಲು ಆಲೋಚಿಸಿದೆಯಾದರೂ, ಅದು ತಾಂತ್ರಿಕವಾಗಿ ಸಾಧ್ಯವಾಗದ ಹಿನ್ನೆಲೆಯಲ್ಲಿ ಸಂಪೂರ್ಣ ಹೊಸ ಪ್ರತಿಮೆಯನ್ನೇ ಕೆತ್ತಲು ನಿರ್ಧರಿಸಿತು.

### ತೆರವುಗೊಳಿಸುವ ವೇಳೆ ಮುರಿದು ಬಿದ್ದ ಹಳೆಯ ಪ್ರತಿಮೆ

**ಹೊಸ ಪ್ರತಿಮೆಯನ್ನು ಪ್ರತಿಷ್ಠಾಪಿಸುವ ಮುನ್ನ, ಹಳೆಯ ಪ್ರತಿಮೆಯನ್ನು ಕ್ರೇನ್ ಸಹಾಯದಿಂದ ತೆರವುಗೊಳಿಸುವ ಪ್ರಕ್ರಿಯೆಯಲ್ಲಿ ಆಕಸ್ಮಿಕ ಘಟನೆಯೊಂದು ಸಂಭವಿಸಿತು. ಕ್ರೇನ್ನ ಸರಪಳಿ ಕಳಚಿಕೊಂಡಿದ್ದರಿಂದ ಹಳೆಯ ಪ್ರತಿಮೆಯು ಆಕಸ್ಮಿಕವಾಗಿ ಕೆಳಗೆ ಬಿದ್ದು ಮುರಿದುಹೋಯಿತು. ಸುಮಾರು 92 ಲಕ್ಷ ರೂಪಾಯಿಗಳ ಭಾರಿ ವೆಚ್ಚದಲ್ಲಿ ಈ ಹಿಂದೆ ನಿರ್ಮಿಸಲಾಗಿದ್ದ ಆ ಪ್ರತಿಮೆಯ ವಿನ್ಯಾಸದ ಬಗ್ಗೆ ಈಗಾಗಲೇ ಜನಪ್ರತಿನಿಧಿಗಳು, ಅರಸು ಕುಟುಂಬದ ಸದಸ್ಯರು ಮತ್ತು ಸಾರ್ವಜನಿಕರು ತೀವ್ರ ಅಸಮಾಧಾನ ಹೊಂದಿದ್ದರು. ಇದೀಗ ಎಲ್ಲರ ಆಶಯದಂತೆ ಅರಸು ಅವರ ಗರಿಮೆಗೆ ತಕ್ಕುದಾದ ನೂತನ ಪ್ರತಿಮೆ ಮೈಸೂರಿನ ಹೃದಯಭಾಗದಲ್ಲಿ ತಲೆ ಎತ್ತಿ ನಿಂತಿದೆ.**

### ಅರುಣ್ ಯೋಗಿರಾಜ್ ತಂಡದ ಅದ್ಭುತ ಪರಿಶ್ರಮ

**ಅಯೋಧ್ಯೆಯ ಬಾಲರಾಮನ ಪ್ರತಿಮೆಯನ್ನು ಕೆತ್ತಿ ಜಗತ್ಪ್ರಸಿದ್ಧರಾಗಿರುವ ಮೈಸೂರಿನ ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್ ಅವರಿಗೆ ಜಿಲ್ಲಾಡಳಿತವು ಈ ನೂತನ ಪ್ರತಿಮೆ ನಿರ್ಮಾಣದ ಜವಾಬ್ದಾರಿ ಯನ್ನು ನೀಡಿತ್ತು. ಅರುಣ್ ಯೋಗಿರಾಜ್ ಹಾಗೂ ಅವರ ತಂಡವು ದೇವರಾಜ ಅರಸು ಅವರ ಹಳೆಯ ಚಿತ್ರಗಳು, ಅವರು ಧರಿಸುತ್ತಿದ್ದ ಬಟ್ಟೆಗಳ ಶೈಲಿ ಮತ್ತು ಅವರ ದೇಹದ ಸುತ್ತಳತೆ ಸೇರಿದಂತೆ ಪ್ರತಿಯೊಂದು ಸೂಕ್ಷ್ಮ ಅಂಶಗಳ ಬಗ್ಗೆ ಆಳವಾದ ಅಧ್ಯಯನ ನಡೆಸಿದರು. ಬಳಿಕ ಸಿದ್ಧಪಡಿಸಿದ ಒಂದು ಸುಂದರ ಮಾದರಿಯನ್ನು (Model) ಅರಸು ಅವರ ಕುಟುಂಬಸ್ಥರು ಮತ್ತು ಜಿಲ್ಲಾಡಳಿತದ ಮುಂದೆ ಪ್ರಸ್ತುತಪಡಿಸಿ ಒಪ್ಪಿಗೆ ಪಡೆದರು.**

**ತದನಂತರ ಸುಮಾರು 6 ತಿಂಗಳ ಸುದೀರ್ಘ ಅವಧಿಯಲ್ಲಿ ಕೃಷ್ಣ ಶಿಲೆಯನ್ನು (ಕಪ್ಪು ಕಲ್ಲು) ಬಳಸಿ, 10 ಅಡಿ ಎತ್ತರದ ಭವ್ಯ ದೇವರಾಜ ಅರಸು ಅವರ ಪ್ರತಿಮೆಯ ಕೆತ್ತನೆ ಕಾರ್ಯವನ್ನು ಪೂರ್ಣಗೊಳಿಸಿದರು.**

# ಹೊಸ ವಿದ್ಯುತ್ ಸಂಪರ್ಕಕ್ಕೆ ಸ್ವಾಧೀನಾನುಭವ ಪ್ರಮಾಣಪತ್ರ ವಿನಾಯಿತಿ

ಮೈಸೂರು: ಹೊಸದಾಗಿ ನಿರ್ಮಿಸಿರುವ ಮನೆಗಳಿಗೆ ಶಾಶ್ವತ ವಿದ್ಯುತ್ ಸಂಪರ್ಕವನ್ನು ಪಡೆಯಲು ಸ್ವಾಧೀನ ಪ್ರಮಾಣಪತ್ರ ನೀಡುವುದರಿಂದ ಒಂದು ಬಾರಿಯ ವಿನಾಯಿತಿ ನೀಡಿ ಆದೇಶ ಹೊರಡಿಸಿದೆ.

ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳ ವ್ಯಾಪ್ತಿ, ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿ ಮತ್ತು ರಾಜ್ಯದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ 2400 ಚದರ ಅಡಿಗಳವರೆಗೆ (+20% ಹೆಚ್ಚುವರಿ ವ್ಯತ್ಯಾಸದ ಮಿತಿಯೊಂದಿಗೆ) ಅಳತೆಯ ನಿವೇಶನಗಳಲ್ಲಿ ನಿರ್ಮಿಸಲಾಗಿರುವ ಜಿ+3 ಅಂತಸ್ತಿನ ವಸತಿ ಕಟ್ಟಡಗಳು ಅಥವಾ ಸ್ಟಿಲ್ಟ್ ಪಾರ್ಕಿಂಗ್+4 ಮಹಡಿಗಳನ್ನು ಹೊಂದಿ ರುವ ವಸತಿ ಕಟ್ಟಡಗಳು ಪೂರ್ಣಗೊಂಡು, ಶಾಶ್ವತ ವಿದ್ಯುತ್ ಸಂಪರ್ಕಕ್ಕಾಗಿ 31.5.2026ರ ಒಳಗಾಗಿ ಅರ್ಜಿ ಸಲ್ಲಿಸಿರುವ ಅಥವಾ ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆದು ಕಟ್ಟಡ ನಿರ್ಮಿಸಿರುವ ಪ್ರಕರಣಗಳಿಗೆ ಹಾಗೂ ಯಾವುದೇ ವಿದ್ಯುತ್ ಸಂಪರ್ಕ ಪಡೆಯದೆ ಕಟ್ಟಡ ಪೂರ್ಣಗೊಂಡಿರುವ ಪ್ರಕರಣಗಳಿಗೆ ಮಾತ್ರ ಅನ್ವಯಿಸುವಂತೆ ಶಾಶ್ವತ ವಿದ್ಯುತ್ ಸಂಪರ್ಕ ಪಡೆಯಲು ಈ ಆದೇಶ ಹೊರಡಿಸಿದೆ.

ಆದೇಶ ಪ್ರಕಟಗೊಂಡ ದಿನದಿಂದ 15 ದಿನಗಳವರೆಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಿ, ಸ್ವಾಧೀನಾನುಭವ ಪ್ರಮಾಣಪತ್ರ(ಔಅ) ಪಡೆಯುವುದರಿಂದ ಒಂದು ಬಾರಿಗೆ ವಿನಾಯಿತಿ ನೀಡಿದೆ. ಗ್ರಾಮೀಣ ಪ್ರದೇಶಗಳಲ್ಲಿ ರೈತರು ವಾಸಿಸುವ ಮನೆ, ತೋಟದ ಮನೆ, ಕೃಷಿ ಉಪಕರಣಗಳನ್ನು ಇಡುವ ಮನೆ, ದನದ ಕೊಟ್ಟಿಗೆ, ರೇಷ್ಮೆ ಗೂಡಿನ ಮನೆ ಇವುಗಳಿಗೆ ವಿದ್ಯುತ್ ಸಂಪರ್ಕಕ್ಕೆ ಸ್ವಾಧೀನಾನುಭವ ಪ್ರಮಾಣಪತ್ರ ಪಡೆಯುವುದಕ್ಕೆ ವಿನಾಯಿತಿ ನೀಡಿ ರಾಜ್ಯ ಸರ್ಕಾರ ಆದೇಶಿಸಿದೆ. ಆದ್ದರಿಂದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ(ಸೆಸ್ಕ್)ದ ವ್ಯಾಪ್ತಿಯ ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗ ಮಾಡಿಕೊಳ್ಳುವಂತೆ ಮಾಹಿತಿಗಾಗಿ ಸೆಸ್ಕ್ ಉಪ ವಿಭಾಗ ಕಚೇರಿಗಳನ್ನು ಸಂಪರ್ಕಿಸುವಂತೆ ಸೆಸ್ಕ್ ತಿಳಿಸಿದೆ.

## ಮಧು ಬಂಗಾರಪ್ಪ ಆಕ್ಷೇಪ

ಕೃಷ್ಣ ಎಂದು ಹೆಸರಿಡಲಾಗಿದೆ. ಕನ್ನಡದ ವೈಚಾರಿಕ ಪರಂಪರೆ, ಸ್ಥಳೀಯ ಸಂಸ್ಕೃತಿ ಹಾಗೂ ಪ್ರಾದೇಶಿಕ ಜೀವನ ಶೈಲಿಗೆ ಪುಸ್ತಕದಲ್ಲಿ ಆದ್ಯತೆ ನೀಡಿಲ್ಲ ಎಂದು ಮಧು ಬಂಗಾರಪ್ಪ ಆರೋಪಿಸಿದ್ದಾರೆ. ಸಮತೋಲನ ಆಹಾರದ ಪಾಠದಲ್ಲಿ ಮೊಟ್ಟೆ, ಮೀನು ಮತ್ತು ಮಾಂಸಾಹಾರದ ಕುರಿತು ಯಾವುದೇ ಉಲ್ಲೇಖವಿಲ್ಲ. ಕೇವಲ ಸಸ್ಯಾಹಾರಕ್ಕೆ ಮಾತ್ರ ಪ್ರಾಮುಖ್ಯತೆ ನೀಡಲಾಗಿದೆ. ಇದು ಸಮತೋಲಿತ ನಿರೂಪಣೆ ಅಲ್ಲ ಎಂದು ಟೀಕಿಸಿದ್ದಾರೆ.

## ಅಡ್ಡಮತಕ್ಕೆ ವೈಮನಸ್ಸು ಕಾರಣ!

ಬದಲಿಗೆ ವಿಜಯೇಂದ್ರ, ಅಶೋಕ ಮತ್ತು ಶೋಭಾ ಅವರಿಂದ ಆಣೆ ಮಾಡಿಸಬೇಕು. ಆಗ ಅಡ್ಡ ಮತದಾನ ಏಕೆ ಆಯಿತು ಮತ್ತು ಯಾರೆಲ್ಲಾ ಮಾಡಿದರು ಎಂಬುದು ಗೊತ್ತಾಗುತ್ತದೆ ಎಂದರು.

## ಪರಿಷ್ಕರಣೆ ತಡೆಯಲು ದೂರು

ಪ್ರಾಧಿಕಾರ ವ್ಯಾಪ್ತಿಯ ಪಾಲಿಕೆಗಳ ವ್ಯಾಪ್ತಿಯಲ್ಲಿ ಎಸ್‌ಐಆರ್ ನಡೆಸಿದೆ ಎಂದು ವಿವರಿಸಿದ್ದಾರೆ. ಮತದಾರರ ಪಟ್ಟಿಗೆ ಆಕ್ಷೇಪ ಬಂದಿದೆ ಎಂದು ಕಾಂಗ್ರೆಸ್‌ನ ಕೆಲವರು ದೂರು ನೀಡಿದ್ದಾರೆಂದು 27 ವಾರ್ಡ್‌ಗಳ ಮತದಾರರ ಪಟ್ಟಿಯನ್ನು ತಡೆಹಿಡಿದಿದೆ. ಅವುಗಳನ್ನು ಮತ್ತೆ ಎಸ್‌ಐಆರ್‌ಗೆ ಒಳಪಡಿಸಲು ಆದೇಶಿಸಿದೆ. ಇದು ಸಂಪೂರ್ಣವಾಗಿ ಕಾನೂನುಬಾಹಿರ. ಇದನ್ನು ತಡೆಯುವ ಸಲುವಾಗಿ ಭಾರತೀಯ ಚುನಾವಣಾ ಆಯೋಗಕ್ಕೆ ಪತ್ರ ಬರೆಯಿರಿ ಎಂದು ಮನವಿ ಮಾಡಿದ್ದಾರೆ.

# ದೇವಾಲಯಗಳು ನಮ್ಮ ಸಂಸ್ಕೃತಿಯ ಪ್ರತಿರೂಪ

ಕೆ.ಆರ್.ಪೇಟೆ: ದೇವಾಲಯಗಳು ನಮ್ಮ ಸಂಸ್ಕೃತಿ ಮತ್ತು ಪರಂಪರೆಯ ಪ್ರತಿಬಿಂಬವಾಗಿದ್ದು, ಅವುಗಳ ಸಂರಕ್ಷಣೆ ನಮ್ಮೆಲ್ಲರ ಆದ್ಯ ಜಾವಾಬ್ದಾರಿಯಾಗಿದೆ ಎಂದು ಬೆಂಗಳೂರು ಕೆಂಗೇರಿಯ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧಿಪತಿ ಡಾ. ನಿಶ್ಚಲಾನಂದನಾಥ ಸ್ವಾಮೀಜಿ ತಿಳಿಸಿದ್ದಾರೆ. ತಾಲೂಕಿನ ಅಕ್ಕಿಹೆಬ್ಬಾಳು ಹೋಬಳಿಯ ಮಂಚಿಬೀಡು ಗ್ರಾಮದಲ್ಲಿ ಧರ್ಮಸ್ಥಳದ ಶ್ರೀ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್ ವತಿಯಿಂದ ಪುನರುಜ್ಜೀವನಗೊಂಡ ಈಶ್ವರ ಮತ್ತು ಬಸವೇಶ್ವರ ದೇವಾಲಯಗಳ ಲೋಕಾರ್ಪಣೆ ಹಾಗೂ ಧಾರ್ಮಿಕ ಸಭೆಯ ದಿವ್ಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು. ಇಂದಿನ ಒತ್ತಡದ ಜೀವನದಲ್ಲಿ ಮಾನವರು ದೇವರು ಮತ್ತು ಧರ್ಮದ ಮಾರ್ಗದಲ್ಲಿ ನಡೆದರೆ ಮಾನಸಿಕ ನೆಮ್ಮದಿ ಸಿಗುತ್ತದೆ. ಪ್ರತಿದಿನ ಮುಂಜಾನೆ ಅರ್ಧ ಗಂಟೆ ಬಿಡುವು ಮಾಡಿಕೊಂಡು ಭಗವಂತನ ನಾಮಸ್ಮರಣೆ ಮಾಡಬೇಕು. ಎಂದು ಶ್ರೀಗಳು ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ತುಮಕೂರಿನ ಸಿದ್ದಗಂಗಾ ಮಠದ ಕಿರಿಯ ಶ್ರೀಗಳಾದ ಶ್ರೀ ಶಿವ ಸಿದ್ದೇಶ್ವರ ಸ್ವಾಮೀಜಿಗಳು, ಮನಸ್ಸಿನ ಅಜ್ಞಾನದ ಅಂಧಕಾರವನ್ನು ಹೊಡೆದೋಡಿಸಲು ದೈವದ ಮಾರ್ಗದಲ್ಲಿ ಸಾಗುವುದು ಅನಿವಾರ್ಯ ಎಂದರು. ಹನ್ನೆರಡನೇ ಶತಮಾನದಲ್ಲಿಯೇ ವಚನ ಕ್ರಾಂತಿ ನಡೆಸಿ ಕಾಯಕ ತತ್ವದ ಮಹತ್ವವನ್ನು ಜಗತ್ತಿಗೆ ಸಾರಿದ ಜಗಜ್ಯೋತಿ ಅಣ್ಣ



ಬಸವಣ್ಣನವರ ಜೀವನದ ಆದರ್ಶಗಳನ್ನು ನಾವು ಪಾಲಿಸಿದರೆ, ಜಾತಿ ಮತ ಪಂಥಗಳಿಂದ ಮುಕ್ತವಾದ ಸಮ ಸಮಾಜವನ್ನು ಸುಲಭವಾಗಿ ನಿರ್ಮಿಸಬಹುದು ಎಂದು ಆಶಿಸಿದರು. ಧರ್ಮಸ್ಥಳ ಟ್ರಸ್ಟ್ ನಿರ್ದೇಶಕ ನೇಮಿರಾಜ್, ರಾವಂದೂರು ಮುರುಗಮಠದ ಪೀಠಾಧಿಪತಿ ಪೂಜ್ಯಶ್ರೀ ಮೋಕ್ಷಪತಿ ಮಹಾಸ್ವಾಮೀಜಿ, ಕಾಪನಹಳ್ಳಿ ಗವಿಮಠದ ಶ್ರೀ ಸ್ವತಂತ್ರ ಚನ್ನವೀರಯ್ಯ ಸ್ವಾಮೀಜಿ, ತೆಂಡೆಕೆರೆ ಮಠದ ಶ್ರೀ ಗಂಗಾಧರ ಶಿವಾಚಾರ್ಯ ಸ್ವಾಮೀಜಿ, ಬೇಬಿ ಬೆಟ್ಟದ ಶ್ರೀ ಶಿವಬಸವ ಸ್ವಾಮೀಜಿ ಮತ್ತು ಆದಿಚುಂಚನಗಿರಿ ಮಠದ ಮಂಡ್ಯ ಶಾಖೆಯ ಶ್ರೀ ಸತ್ಕೀರ್ತಿನಾಥ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು.

ಕರ್ನಾಟಕ ಸರ್ಕಾರ
**ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರ**
ದೊಡ್ಡಕೆರೆ ಮೈದಾನ, ಇಂದಿರಾನಗರ, ಮೈಸೂರು–570010.
ದೂರವಾಣಿ (ಕಛೇರಿ): 0821–2523626, ಇ–ಮೇಲ್:exhibitionauthority@gmail.com

ಸಂಖ್ಯೆ:ಕವಪ್ರಾ/ಮುಕಾನಿ/2026–27 ದಿನಾಂಕ:25.06.2026

**ಪ್ರಕಟಣೆ**

ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದವತಿಯಿಂದ "ಇ" ಪ್ರಕ್ಯೂರ್‌ಮೆಂಟ್ ಮುಖಾಂತರ ಟೆಂಡರ್ ಆಹ್ವಾನಿಸಲಾಗಿದೆ. ಸದರಿ ಟೆಂಡರ್‌ನ ವಿವರಗಳು ಈ ಕೆಳಕಂಡತ್ತಿದೆ.

| ಕ್ರ. ಸಂ | ಕಾಮಗಾರಿಯ ಹೆಸರು | ಟೆಂಡರ್‌ನ ಮೊತ್ತ | ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ |
|---|---|---|---|
| 1 | Development of Concrete Road After Central Ball Fountain Circle up to Dragon Pond Circle inside Karnataka Exhibition Authority Premises Mysuru | ರೂ. 25,92,965–00 | 10.07.2026 ಸಂಜೆ 04.00ಕ್ಕೆ |

ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಹೆಚ್ಚಿನ ವಿವರಗಳು ಬೇಕಾಗಿದ್ದಲ್ಲಿ ಕಛೇರಿ ವೇಳೆಯಲ್ಲಿ ಕಛೇರಿಯ ಸಹಾಯಕ ಕಾರ್ಯಪಾಲಕ ಅಭಿಯಂತರರು (ಸಿವಿಲ್), ರವರನ್ನು ಸಂಪರ್ಕಿಸಿ ಹಾಗೂ ವೆಬ್‌ಸೈಟ್ **https://kppp.karnataka.gov.in** ನಲ್ಲಿ ಮಾಹಿತಿ ಪಡೆಯಬಹುದು ಎಂದು ಈ ಮೂಲಕ ಕೋರಿದೆ. ಮೊಬೈಲ್ ಸಂಖ್ಯೆ:8861437181,7892920878. ಇ–ಮೇಲ್ ಸಂಖ್ಯೆ: **exhibitionauthority@gmail.com**

ಸಹಿ/– ಸಹಾಯಕ ಕಾರ್ಯಪಾಲಕ ಅಭಿಯಂತರರು
ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರ, ಮೈಸೂರು

ವಾಸಾಸಂಇ/ಮೈಸೂರು/ಎಸ್‌ಎಸ್‌ಸಿ/381/2026–27

ಶಾಸಕ ಹೆಚ್.ಟಿ.ಮಂಜು ಆಹ್ವಾನ | ಜಯಂತ್ಯೋತ್ಸವದ ಆಹ್ವಾನ ಪತ್ರಿಕೆ ಬಿಡುಗಡೆ

# ಜು.1ರಂದು ಕೆಂಪೇಗೌಡರ 517ನೇ ಜಯಂತ್ಯೋತ್ಸವ

ಕೆ.ಆರ್.ಪೇಟೆ ತಾಲೂಕು ಒಕ್ಕಲಿಗರ ವೇದಿಕೆಯ ವತಿಯಿಂದ ಜುಲೈ 1 ರಂದು ಪಟ್ಟಣದ ಟಿಎಪಿಸಿಎಂಎಸ್ ಎಂ.ಕೆ.ಬೊಮ್ಮೇಗೌಡ ಸಹಕಾರ ಭವನದಲ್ಲಿ ಬೆಂಗಳೂರು ನಿರ್ಮಾತೃ ಹಾಗೂ ಸರ್ವಧರ್ಮ ಜನ ಪರಿಪಾಲಕರಾದ ನಾಡಪ್ರಭು ಕೆಂಪೇಗೌಡರ 517ನೇ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಅತ್ಯಂತ ವೈಭವದಿಂದ ಹಮ್ಮಿಕೊಳ್ಳಲಾಗಿದೆ. ಪಟ್ಟಣದ ಬಸವೇಶ್ವರನಗರದಲ್ಲಿರುವ ತಾಲೂಕು ಜೆಡಿಎಸ್ ಕಚೇರಿಯಲ್ಲಿ ಕಾರ್ಯಕ್ರಮದ ಆಹ್ವಾನ ಪತ್ರಿಕೆಗಳನ್ನು ಅಧಿಕೃತವಾಗಿ ಬಿಡುಗಡೆ ಮಾಡಿದ ಕ್ಷೇತ್ರದ ಶಾಸಕ ಹೆಚ್.ಟಿ.ಮಂಜು ಅವರು, ಈ ಐತಿಹಾಸಿಕ ಕಾರ್ಯಕ್ರಮಕ್ಕೆ ಸರ್ವ ಸಮುದಾಯದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

### ಪ್ರಮುಖ ಶ್ರೀಗಳ ದಿವ್ಯ ಸಾನಿಧ್ಯ ಮತ್ತು ಆಶೀರ್ವಚನ



ಈ ಭವ್ಯ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ನಾಡಿನ ಪ್ರಮುಖ ಮಠಾಧೀಶರು ಭಾಗವಹಿಸಿ ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಜಗದ್ಗುರು ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಸ್ವಾಮೀಜಿಯವರು, ಕೆಂಗೇರಿ ವಿಶ್ವ ಒಕ್ಕಲಿಗರ ಮಠದ ಜಗದ್ಗುರು ಶ್ರೀ ಡಾ. ನಿಶ್ಚಲಾನಂದನಾಥ ಸ್ವಾಮೀಜಿಯವರು ಹಾಗೂ ಕುಂಚಟಿಗ ಶ್ರೀ ಮಠದ ಜಗದ್ಗುರು ಡಾ. ನಂಜಾವಧೂತ ಸ್ವಾಮೀಜಿಯವರು ಕಾರ್ಯಕ್ರಮದ ನೇತೃತ್ವ ವಹಿಸಿ ಭಕ್ತಾದಿಗಳಿಗೆ ಆಶೀರ್ವಚನ ನೀಡಲಿದ್ದಾರೆ.

### ರಾಜಕೀಯ ಧುರಿತರು ಹಾಗೂ ಗಣ್ಯರ ಒಕ್ಕೂಟ

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಮಾಜಿ ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವಥ್ ನಾರಾಯಣಗೌಡ, ರಾಜ್ಯ ಯುವ ಜೆಡಿಎಸ್ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹಾಗೂ ಮಾಜಿ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಅವರು ಆಗಮಿಸಲಿದ್ದಾರೆ. ಇವರೊಂದಿಗೆ ಮಾಜಿ ಸಚಿವರುಗಳಾದ ಸಿ.ಎಸ್. ಪುಟ್ಟರಾಜು, ಕೆ.ಸಿ. ನಾರಾಯಣಗೌಡ, ಶಾಸಕ ದರ್ಶನ್ ಪುಟ್ಟಣ್ಣಯ್ಯ ಸೇರಿದಂತೆ ವಿವಿಧ ಪಕ್ಷಗಳ ರಾಜ್ಯ, ಜಿಲ್ಲಾ ಮತ್ತು ತಾಲೂಕು ಮಟ್ಟದ ಹಿರಿಯ ರಾಜಕೀಯ ನಾಯಕರು ಹಾಗೂ ಹಲವು ಗಣ್ಯರು ಭಾಗವಹಿಸಲಿದ್ದಾರೆ ಎಂದು ಶಾಸಕ ಹೆಚ್.ಟಿ.ಮಂಜು ವಿವರಿಸಿದರು.

ಆಹ್ವಾನ ಪತ್ರಿಕೆ ಬಿಡುಗಡೆ ಸಮಾರಂಭದಲ್ಲಿ ತಾಲೂಕು ಒಕ್ಕಲಿಗರ ವೇದಿಕೆಯ ಅಧ್ಯಕ್ಷ ವಳಗೆರೆಮೆಣಸ ಗ್ಯಾಸ್ ಕುಮಾರ್‌ಗೌಡ, ಪ್ರಧಾನ ಕಾರ್ಯದರ್ಶಿ ಗೌರೀಶ್, ಉಪಾಧ್ಯಕ್ಷ ಚಿಕ್ಕೋನಹಳ್ಳಿ ನಾಗರಾಜೇಗೌಡ, ಗೌರವಾಧ್ಯಕ್ಷ ವಡಕಹಳ್ಳಿ ಮಂಜಣ್ಣ, ಮುಖಂಡರಾದ ಬೇಲದಕೆರೆ ನಂಜಪ್ಪ, ಟಿ.ವೈ. ಆನಂದ್, ಕೊರಟೀಕೆರೆ ದಿನೇಶ್, ಖಜಾಂಚಿ ಕಿರಣ್ಕುಮಾರ್, ಕಾರ್ಯಾಧ್ಯಕ್ಷ ವಿಶ್ವನಾಥ್ ಮತ್ತು ಸಂಘಟನಾ ಕಾರ್ಯದರ್ಶಿ ಚಿನ್ನೇನಹಳ್ಳಿ ಕಾಂತರಾಜು ಉಪಸ್ಥಿತರಿದ್ದರು. ಇವರೊಂದಿಗೆ ವೇದಿಕೆಯ ನಿರ್ದೇಶಕರುಗಳು, ತಾಲೂಕು ಜೆಡಿಎಸ್ ಅಧ್ಯಕ್ಷ ಮಲ್ಲೇನಹಳ್ಳಿ ಮೋಹನ್ ಹಾಗೂ ಎಪಿಎಂಸಿ ಮಾಜಿ ಅಧ್ಯಕ್ಷ ಐನೋರಹಳ್ಳಿ ಮಲ್ಲೇಶ್ ಸೇರಿದಂತೆ ನೂರಾರು ಪದಾಧಿಕಾರಿಗಳು ಪಾಲ್ಗೊಂಡಿದ್ದರು.

# ಮಾದಕ ವಸ್ತುಗಳ ಸೇವನೆ ವಿರುದ್ಧ ಜಾಗೃತರಾಗಿ

ಚಾಮರಾಜನಗರ, ಸಮಾಜ ನಿರ್ಮಾಣಕ್ಕಾಗಿ ಮಾದಕ ವಸ್ತುಗಳ ಸೇವನೆ ಹಾಗೂ ಮಾದಕ ವ್ಯಸನದ ದುಷ್ಪರಿಣಾಮಗಳ ವಿರುದ್ಧ ಯುವಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಜಾಗೃತರಾಗುವಂತೆ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಎನ್. ಶಶಿಧರ್ ಅವರು ತಿಳಿಸಿದರು.

ನಗರದ ಚಾಮರಾಜೇಶ್ವರ ದೇವಾಲಯದ ಆವರಣದಲ್ಲಿಂದು ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಅಂತರಾಷ್ಟ್ರೀಯ ಮಾದಕ ವ್ಯಸನ ತಡೆ ದಿನಾಚರಣೆ ಅಂಗವಾಗಿ ಆಯೋಜಿಸಲಾಗಿದ್ದ ಮಾದಕ ವಸ್ತುಗಳ ಸೇವನೆ ಹಾಗೂ ವ್ಯಸನದ ದುಷ್ಪರಿಣಾಮಗಳ ಕುರಿತ ಜಾಗೃತಿ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು. ಮಾದಕ ವಸ್ತುಗಳ ಸೇವನೆಗೆ ಯುವಜನತೆ ಬಲಿಯಾಗುತ್ತಿರುವುದು ದುರಂತದ ಸಂಗತಿಯಾಗಿದೆ. ಮಾದಕ ವಸ್ತುಗಳ ಚಟ ವ್ಯಕ್ತಿಯ ಕುಟುಂಬ ಹಾಗೂ ಸಮಾಜದ ಮೇಲೆ ಪರಿಣಾಮ ಬೀರಲಿದೆ. ಯುವಜನರು, ವಿದ್ಯಾರ್ಥಿಗಳು ಮಾದಕ ವಸ್ತುಗಳಿಂದಾಗುವ ದುಷ್ಪರಿಣಾಮಗಳನ್ನು ಅರಿತು ಅವುಗಳಿಂದ ದೂರವಿರಬೇಕು. ಈ ಬಗ್ಗೆ ಯುವಕರು, ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳಿಗೆ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸರ್ಕಾರ ಸುತ್ತೋಲೆ ಹೊರಡಿಸಿದ್ದು, ಇದನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಪೊಲೀಸ್ ಇಲಾಖೆ ಮುಂದಾಗಿದೆ ಎಂದರು.




ದೈಹಿಕ ಹಾಗೂ ಮಾನಸಿಕ ಸಮತೋಲನ ಹೊಂದುವ ಮೂಲಕ ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಪ್ರತಿಯೊಬ್ಬರು ಮಾದಕ ವಸ್ತುಗಳ ಸೇವನೆ ನಿಲ್ಲಿಸಬೇಕು. ಸ್ವಾಸ್ಥ್ಯ ಸಮಾಜ ನಿರ್ಮಾಣ ಮೂಲಕ ಬಲಿಷ್ಠ ದೇಶ ಕಟ್ಟಲು ಮುಂದಾಗಬೇಕು. ಮಾದಕ ಪದಾರ್ಥಗಳ ಉತ್ಪಾದನೆ, ಸಾಗಣೆ, ಬಳಕೆ ಮಾಡುವವರಿಗೆ ವಿವಿಧ ಅರಿವು ಕಾರ್ಯಕ್ರಮಗಳ ಮೂಲಕ ಸ್ಪಷ್ಟ ಸಂದೇಶ ರವಾನಿಸಬೇಕಾಗಿದೆ. ಬೀಡಿ, ಸಿಗರೇಟ್, ತಂಬಾಕು, ಗುಟ್ಕಾದಂತಹ ಅಮಲು ಬರಿಸುವ ಮಾದಕ ವಸ್ತುಗಳ ಸೇವನೆ ತಡೆಯಲು ವಿವಿಧ ಇಲಾಖೆಗಳು, ಸಂಘಸಂಸ್ಥೆಗಳು ಪೊಲೀಸ್ ಇಲಾಖೆಗೆ ಸಹಕರಿಸಬೇಕು ಎಂದು ತಿಳಿಸಿದರು. ವ್ಯಸನಕ್ಕೆ ಒಳಗಾಗಿರುವವರನ್ನು ಪತ್ತೆಹಚ್ಚಿ ಮಾದಕ ವಸ್ತುಗಳಿಂದ ದೂರವಿರುವಂತೆ ಪ್ರೇರೇಪಿಸಲು ಪುನಶ್ಚೇತನ ಶಿಬಿರಗಳನ್ನು ಆಯೋಜಿಸಿ ಸಮಾಜದ ಮುಖ್ಯವಾಹಿನಿಗೆ ತರಬೇಕಿದೆ. ಜಿಲ್ಲೆಯಾದ್ಯಂತ ಮಾದಕ ವಸ್ತುಗಳ ಸೇವನೆ ತಡೆಗೆ ಪರಿಣಾಮಕಾರಿ ಜಾಗೃತಿ ಕಾರ್ಯಕ್ರಮಗಳನ್ನು ಏರ್ಪಡಿಸಿ ಮಾದಕ ವ್ಯಸನದ ಸರಪಳಿಯ ಕೊಂಡಿಯನ್ನು ಕಳಚುವುದು ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಯುವಕರು, ಸಾರ್ವಜನಿಕರು ಮಾದಕ ವಸ್ತುಗಳ ಸೇವನೆಯ ದುಷ್ಪರಿಣಾಮಗಳ ಕುರಿತು ಹೆಚ್ಚಿನ ಅರಿವು ಪಡೆದು ತಮ್ಮ ಸುತ್ತಲಿನ ಇತರರಿಗೂ ತಿಳಿಹೇಳುವಂತೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಎನ್. ಶಶಿಧರ್ ಅವರು ಸಲಹೆ ಮಾಡಿದರು. ಡಿ.ವೈ.ಎಸ್.ಪಿ ಸ್ನೇಹರಾಜ್, ಸೋಮಣ್ಣ, ಪೊಲೀಸ್ ಅಧಿಕಾರಿಗಳ್ಳು, ಇದ್ದರು. ವಿದ್ಯಾರ್ಥಿಗಳು, ಸಾರ್ವಜನಿಕರು ಜಾಥಾದಲ್ಲಿ ಪಾಲ್ಗೊಂಡು ನಗರದ ಪ್ರಮುಖ ರಸ್ತೆಗಳಲ್ಲಿ ಸಾಗಿ ಮಾದಕ ವಸ್ತುಗಳ ಸೇವೆನೆ ವಿರುದ್ಧ ಪ್ಲೇಕಾರ್ಡ್‌ಗಳ ಮೂಲಕ ಜಾಗೃತಿ ಘೋಷಣೆಗಳನ್ನು ಕೂಗುವ ಮೂಲಕ ಜನಜಾಗೃತಿ ಮೂಡಿಸಿದರು.

# ವಿಶೇಷ ಸ್ವಾತಿ ನಕ್ಷತ್ರ ಪೂಜೆ



ಮೈಸೂರು: ವಿಜಯನಗರದಲ್ಲಿರುವ ಶ್ರೀ ಯೋಗಾನರಸಿಂಹಸ್ವಾಮಿ ದೇವಸ್ಥಾನದಲ್ಲಿ ಗುರುವಾರ ಶ್ರೀ ಸ್ವಾಮಿಗೆ ವಿಶೇಷ ಸ್ವಾತಿ ನಕ್ಷತ್ರ ಪೂಜೆ ನಡೆಯಿತು. ದೇವಾಲಯದ ಸಂಸ್ಥಾಪಕ ಪ್ರೊ.ಭಾಷ್ಯಂ ಸ್ವಾಮೀಜಿ ನೇತೃತ್ವದಲ್ಲಿ ಬೆಳಗಿನಿಂದಲೇ ಮಹಾಮಂಗಳಾರತಿ ಸೇರಿ ಇನ್ನಿತರ ವಿಶೇಷ ಪೂಜಾ ಕೈಂಕರ್ಯ ಜರುಗಿತು.

ನೂರಾರು ಭಕ್ತರು ದೇಗುಲಕ್ಕೆ ಆಗಮಿಸಿ, ದೇವರ ದರ್ಶನ ಪಡೆದರು. ಬಳಿಕ ಎಲ್ಲಾ ಭಕ್ತಾದಿಗಳಿಗೂ ಪ್ರಸಾದ ವಿತರಿಸಲಾಯಿತು. ವಿಶೇಷವಾಗಿ ಮಾಜಿ ಸಚಿವ ಹಾಗೂ ಶಾಸಕ ಅಶ್ವಥ್ ನಾರಾಯಣ್ ದೇವಾಲಯಕ್ಕೆ ಆಗಮಿಸಿ ದರ್ಶನ ಪಡೆದು, ಸ್ವಾತಿ ನಕ್ಷತ್ರದ ವಿಶೇಷ ಪೂಜೆಯಲ್ಲಿ ಪಾಲ್ಗೊಂಡರು. ತದನಂತರ ದೇವಾಲಯಕ್ಕೆ ಬಂದಂತಹ ಭಕ್ತಾದಿಗಳಿಗೆ ತಾವೇ ಸ್ವತ: ಪ್ರಸಾದ ವಿತರಿಸಿದರು. ಈ ವೇಳೆ ದೇಗುಲದ ಪ್ರಧಾನ ಅರ್ಚಕ ಶೇಷಾದ್ರಿ, ಆಡಳಿತಾಧಿಕಾರಿ ಎನ್.ಶ್ರೀನಿವಾಸನ್ ಇನ್ನಿತರರು ಉಪಸ್ಥಿತರಿದ್ದರು.

# ತೊಟ್ಟಿಲು ಶಾಸ್ತ್ರ, ಸಿದ್ದಪ್ಪಾಜಿ ಕಂಡಾಯೋತ್ಸವದ ವಿಶೇಷ ಪೂಜೆ



ಹನೂರು : ತಾಲೂಕಿನ ದೊಡ್ಡಲತ್ತೂರು ಗ್ರಾಮದ ಶ್ರೀ ಮಕ್ಕಳೇಶ್ವರ ಸ್ವಾಮಿ ಪುಣ್ಯಕ್ಷೇತ್ರದಲ್ಲಿ ಹಮ್ಮಿಕೊಂಡಿದ್ದ ತೊಟ್ಟಿಲು ಶಾಸ್ತ್ರ, ಸಿದ್ದಪ್ಪಾಜಿ ಕಂಡಾಯೋತ್ಸವದ ವಿಶೇಷ ಪೂಜೆಯಲ್ಲಿ ಚಲನಚಿತ್ರ ನಟಿ ತಾರಾ ಹಾಗೂ ನಟ ಶಶಿಕುಮಾರ್ ಭಾಗವಹಿಸಿ ದೇವರ ದರ್ಶನ ಪಡೆದುಕೊಂಡರು.

ಚಲನಚಿತ್ರ ನಟ ಶಶಿಕುಮಾರ್ ಮಾತನಾಡಿ ದೊಡ್ಡಲತ್ತೂರು ಗ್ರಾಮದ ಬೆಟ್ಟದ ಶಂಕ್ರಪ್ಪ ರವರು ಮಕ್ಕಳಿಲ್ಲದ ಹೆಣ್ಣು ಮಕ್ಕಳಿಗೆ ಗಿಡಮೂಲಿಕೆಗಳಿಂದ ತಯಾರಿಸಲ್ಪಟ್ಟ ನಾಟಿ ಔಷಧಿಯನ್ನು ಕೊಟ್ಟು ಹಲವಾರು ವರ್ಷಗಳಿಂದ ತೊಟ್ಟಿಲು ಪೂಜೆ ಮಾಡಿಸಿಕೊಂಡು ಹೋಗಿರುವ ಸಾವಿರಾರು ಹೆಣ್ಣು ಮಕ್ಕಳಿಗೆ ಮಕ್ಕಳಾಗಿದೆ.ಸುಮಾರು 300 ರಿಂದ 400 ವರ್ಷಗಳಿಂದ ನಡೆದುಕೊಂಡು ಬಂದಿರುವ ಕಾರ್ಯಕ್ರಮ ಇದಾಗಿರುವುದು ಸಂತಸದ ವಿಚಾರ ಎಂದರು.

ಬೆಟ್ಟದ ಶಂಕರಪ್ಪನವರು ಮಕ್ಕಳಿಲ್ಲದ ಹೆಣ್ಣು ಮಕ್ಕಳಿಗೆ ಹಲವಾರು ವರ್ಷಗಳಿಂದ ನಾಟಿ ಔಷಧ ಕೊಡುತ್ತಾ ಬಂದಿದ್ದಾರೆ. ಹತ್ತಾರು ವರ್ಷಗಳಿಂದ ಮಕ್ಕಳಿಲ್ಲದವರಿಗೆ ನಾಟಿ ಗಿಡಮೂಲಿಕೆಗಳಿಂದ ಔಷಧಿ ಕೊಟ್ಟ ನಂತರ ಮಕ್ಕಳಾಗಿದೆ. ವೈದ್ಯರು ಮಕ್ಕಳೇ ಆಗುವುದಿಲ್ಲವೆಂದು ಹೇಳಿ ದಂಪತಿಗಳು ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಈ ಕ್ಷೇತ್ರಕ್ಕೆ ಬಂದು ಔಷಧಿ ಪಡೆದುಕೊಂಡು ಮಕ್ಕಳಾಗಿರುವ ಹಲವು ನಿರ್ದೇಶನಗಳಿವೆ.

ವೈದ್ಯರು ಮಕ್ಕಳಿಗೆ ಪ್ರಯತ್ನ ಮಾಡಬೇಡಿ, ಖರ್ಚು ಮಾಡಬೇಡಿ ವಯಸ್ಸು ಆಗಿದೆ ಇನ್ನು ಮುಂದಿನ ದಿನಗಳಲ್ಲಿ ಮಕ್ಕಳಾಗುವುದು ಕಷ್ಟವಿದೆ ಎಂದು ಹೇಳಿ ವೈದ್ಯ ಲೋಕಕ್ಕೆ ಸವಾಲಾಗಿದ್ದ ಹಲವು ಸಮಸ್ಯೆಗಳನ್ನು ಬಗೆಹರಿಸುವಲ್ಲಿ ಶಂಕರಪ್ಪ ಯಶಸ್ವಿಯಾಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಚಲನಚಿತ್ರ ನಟಿ ತಾರಾ ಮಾತನಾಡಿ ಒಂದು ಹೆಣ್ಣು ಮಗಳು ತಾಯಿಯಾದಾಗ ಅದರಲ್ಲಿ ಸಿಗುವ ಸಂತೋಷ ಖುಷಿ ಎಲ್ಲಿಯೂ ಸಿಗುವುದಿಲ್ಲ, ಬಂಜೆತನ ಎಂಬುದನ್ನು ಯಾವ ಮಹಿಳೆಯು ಊಹೆ ಮಾಡಲು ಸಾಧ್ಯವಿಲ್ಲ, ಇದರಿಂದ ಪ್ರತಿನಿತ್ಯ ಕೊರಗಿ ಕೊರಗಿ ಹಾಸಿಗೆ ಹಿಡಿದುಕೊಂಡಿರುವುದು ನಮ್ಮ ಕಣ್ಣಮುಂದೆ ಇದೆ. ಒಂದು ಕುಟುಂಬದಲ್ಲಿ ಮಕ್ಕಳಿದ್ದರೆ ಅಲ್ಲಿರುವ ಸಂತೋಷವೇ ಬೇರೆ, ಮಕ್ಕಳಿಗೆ ಮಕ್ಕಳಾಗದಿದ್ದರೆ ನೆರೆಹೊರೆಯರವರ ಚುಚ್ಚು ಮಾತುಗಳಿಂದ ಜೀವನವೇ ಬೇಡ ಎಂಬಂತಹ ಪರಿಸ್ಥಿತಿ ಉಂಟಾಗುತ್ತದೆ.

ಬೆಟ್ಟದ ಶಂಕರಪ್ಪ ರವರು ಮಕ್ಕಳಾಗದವರಿಗೆ ನಾಟಿ ಗಿಡಮೂಲಿಕೆಗಳಿಂದ ತಯಾರಿಸಲ್ಪಟ್ಟ ನಾಟಿ ಔಷಧಿಯನ್ನು ಕೊಟ್ಟು ತೊಟ್ಟಿಲು ಪೂಜೆ ಮಾಡಿಸಿದ ನಂತರ ಹೆಣ್ಣು ಮಕ್ಕಳಿಗೆ ಮಕ್ಕಳಾಗಿದೆ. ಇವರ ಇಂತಹ ಸೇವಾ ಕಾರ್ಯಕ್ಕೆ ಎಷ್ಟು ಹಣ ನೀಡಿದರು ಕಡಿಮೆ ಆದರೆ ಅವರು ನಿಸ್ವಾರ್ಥ ಸೇವೆಯಿಂದ ತಮ್ಮ ಹಿರಿಯರು ಮಾಡಿಕೊಂಡು ಬಂದಿರುವ ಸೇವೆಯನ್ನು ಇವರು ಮುಂದುವರಿಸಿಕೊಂಡು ಬಂದಿದ್ದಾರೆ. ಇವರ ಸೇವೆ ನಿರಂತರವಾಗಿರಲಿ ಎಂದು ಶುಭ ಹಾರೈಸಿದರು. ಬೆಟ್ಟದ ಶಂಕರಪ್ಪ ಮಾತನಾಡಿ ತಾಯ್ತನ ಎಂಬುದು ಎಲ್ಲರಿಗೂ ಸಿಗುವುದಿಲ್ಲ, ಹಲವಾರು ವರ್ಷಗಳ ಕಾಲ ಮಕ್ಕಳಿಲ್ಲದೆ ನಮ್ಮ ಬಳಿ ತಮ್ಮ ಕಷ್ಟ ಹೇಳಿಕೊಂಡು ಬಂದಂತಹ ದಂಪತಿಗಳಿಗೆ ಧೈರ್ಯ ತುಂಬಿ ನಾಟಿ ಔಷಧಿ ನೀಡಿ ತೊಟ್ಟಿಲು ಪೂಜೆ ಮಾಡಿಸಿ ಕಳುಹಿಸಿರುವ ಸಾವಿರಾರು ಹೆಣ್ಣು ಮಕ್ಕಳಿಗೆ ಮಕ್ಕಳಾಗಿದೆ. ಮಕ್ಕಳಾದ ನಂತರ ಅವರ ಸಂತಸಕ್ಕೆ ಪಾರವೇ ಇರುವುದಿಲ್ಲ ಪ್ರತಿಯೊಬ್ಬರೂ ಮಕ್ಕಳಾದ ನಂತರ ನಮ್ಮ ಮಕ್ಕಳೇಶ್ವರ ಸ್ವಾಮಿ ಪುಣ್ಯಕ್ಷೇತ್ರಕ್ಕೆ ಬಂದು ಪೂಜೆ ಸಲ್ಲಿಸಿಕೊಂಡು ಹೋಗುತ್ತಿದ್ದಾರೆ ಮಕ್ಕಳು ದೊಡ್ಡವರಾದ ನಂತರವೂ ಈ ಕ್ಷೇತ್ರಕ್ಕೆ ಬರುತ್ತಿದ್ದಾರೆ ತಮ್ಮ ನೆರೆಹೊರೆಯವರು ಮಕ್ಕಳಿಲ್ಲದೆ ಕೊರಗುತ್ತಿದ್ದರೆ ನಮ್ಮ ಬಳಿ ಬಂದರೆ ಅಂತಹವರಿಗೆ ನಾಟಿ ಔಷಧಿ ನೀಡಿ ಮಕ್ಕಳಾಗುವ ರೀತಿ ಮಾಡಲಾಗುವುದು ಎಂದರು. ಇದೆ ಸಂದರ್ಭದಲ್ಲಿ ದಂಪತಿಗಳು ಕುಟುಂಬಸ್ಥರು ಹಾಗೂ ಗ್ರಾಮಸ್ಥರು ಹಾಜರಿದ್ದರು

# ಶಕ್ತಿ, ಯುವನಿಧಿ ಸುಧಾರಣೆ

## ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಯಶಸ್ವಿ

ಪೊನ್ನಂಪೇಟೆ: ತಾಲೂಕು ಪಂಚಾಯಿತಿ ಸಾಮರ್ಥ್ಯ ಸೌಧದಲ್ಲಿ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಪ್ರಗತಿ ಪರಿಶೀಲನಾ ಸಭೆಯು ಸಮಿತಿಯ ಅಧ್ಯಕ್ಷರಾದ ಪ್ರಶಾಂತ್ ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಸಭೆಯಲ್ಲಿ ಶಕ್ತಿ ಯೋಜನೆಯ ಕುರಿತು ಸುದೀರ್ಘ ಚರ್ಚೆ ನಡೆದಿದ್ದು, ಈ ಯೋಜನೆಯು ಉದ್ಯೋಗಸ್ಥ ಮಹಿಳೆಯರಿಗೆ ಹೆಚ್ಚು ಅನುಕೂಲಕರವಾಗಿದೆ ಎಂದು ಅಭಿಪ್ರಾಯಪಡಲಾಯಿತು. ಗೋಣಿಕೊಪ್ಪದಿಂದ ಮೈಸೂರು ಮತ್ತು ಬೆಂಗಳೂರು ಮಾರ್ಗವಾಗಿ ಸಂಚರಿಸುವ ಬಸ್ಸುಗಳ ಸಂಖ್ಯೆಯನ್ನು ರಜಾ ದಿನಗಳಲ್ಲಿ ಹೆಚ್ಚಿಸಬೇಕು ಎಂದು ಸಭೆಯಲ್ಲಿ ತೀರ್ಮಾನಿಸಲಾಯಿತು. ರಜಾ ದಿನಗಳಲ್ಲಿ ಪ್ರಯಾಣಿಕರ ಸಂಖ್ಯೆ ಹೆಚ್ಚಿರುವುದರಿಂದ ಉಂಟಾಗುತ್ತಿರುವ ತಳ್ಳಾಟ-ನುಗ್ಗಾಟದ ಸಮಸ್ಯೆಯನ್ನು ಬಗೆಹರಿಸಲು ಹೆಚ್ಚುವರಿ ಬಸ್ಸುಗಳನ್ನು ನಿಯೋಜಿಸುವಂತೆ ಸೂಚಿಸಲಾಯಿತು. ಇದೇ ವೇಳೆ ಬಸ್ಗಳಲ್ಲಿ ಟಿಕೆಟ್ ಪಡೆಯಲು ಕೇವಲ ಫೋನ್ ಪೇ ಮಾತ್ರ ಬಳಕೆಯಾಗುತ್ತಿದ್ದು, ಗೂಗಲ್ ಪೇನಲ್ಲಿ ತಾಂತ್ರಿಕ ಸಮಸ್ಯೆ ಎದುರಾಗುತ್ತಿದೆ ಎಂಬ ದೂರಿಗೆ ಸ್ಪಂದಿಸಿದ ಅಧಿಕಾರಿಗಳು, ಈ ತಾಂತ್ರಿಕ ದೋಷವನ್ನು ಶೀಘ್ರವೇ ಬಗೆಹರಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವುದಾಗಿ ತಿಳಿಸಿದರು. ಇನ್ನು ಯುವನಿಧಿ ಯೋಜನೆಯಡಿ ತಾಲೂಕಿನ ಡಿಪ್ಲೊಮಾ ಮತ್ತು ಐಟಿಐ ಕಾಲೇಜುಗಳ ವಿದ್ಯಾರ್ಥಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಸಲು ಸಾರಿಗೆ ಹಾಗೂ ಸಂಬಂಧಪಟ್ಟ ಇಲಾಖೆಗಳು ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಮತ್ತು ತಾಲೂಕು ವ್ಯಾಪ್ತಿಯಲ್ಲಿ ಉದ್ಯೋಗ ಮೇಳ ಆಯೋಜಿಸಿ ವಿದ್ಯಾರ್ಥಿಗಳಿಗೆ ಉದ್ಯೋಗ ದೊರಕಿಸಿಕೊಡಲು ಸಹಕರಿಸಬೇಕು ಎಂದು ಅಧ್ಯಕ್ಷ ಪ್ರಶಾಂತ್ ತಿಳಿಸಿದರು.

### ಗೃಹಜ್ಯೋತಿ ಯೋಜನೆ ಪ್ರಗತಿ ಹಾಗೂ ವಿದ್ಯುತ್ ಕಂಬಗಳ ಬದಲಾವಣೆ

ತಾಲೂಕಿನಲ್ಲಿ ಗೃಹಜ್ಯೋತಿ ಯೋಜನೆಯು ಈಗಾಗಲೇ ಶೇಕಡಾ 98 ರಷ್ಟು ಪ್ರಗತಿ ಸಾಧಿಸಿದೆ ಎಂದು ಸಭೆಗೆ ಮಾಹಿತಿ ನೀಡಲಾಯಿತು. ಇನ್ನೂ ಯೋಜನೆಯಿಂದ ವಂಚಿತರಾಗಿರುವ ಹೊಸಬರು ಅರ್ಜಿ ಸಲ್ಲಿಸಲು ಹತ್ತಿರದ 'ಗ್ರಾಮ ಒನ್' ಕೇಂದ್ರಗಳಿಗೆ ಭೇಟಿ ನೀಡುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಲಾಯಿತು. ಪ್ರಸ್ತುತ ಮಳೆಗಾಲ ಪ್ರಾರಂಭವಾಗಿರುವುದರಿಂದ ತಾಲೂಕಿನ ಹಲವೆಡೆ ಇರುವ ಹಳೆಯ ಹಾಗೂ ಅಪಾಯಕಾರಿ ಕಬ್ಬಿಣದ ವಿದ್ಯುತ್ ಕಂಬಗಳನ್ನು ತಕ್ಷಣವೇ ಬದಲಾಯಿಸುವಂತೆ ಸೆಸ್ಕ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಯಿತು. ಐದು ಗ್ಯಾರಂಟಿ ಯೋಜನೆಗಳ ಯಶಸ್ವಿ ಅನುಷ್ಠಾನದ ಕುರಿತು ನಡೆದ ಈ ಪ್ರಮುಖ ಸಭೆಯಲ್ಲಿ ವಿರಾಜಪೇಟೆ ಸಹಾಯಕ ಲೆಕ್ಕಾಧಿಕಾರಿಗಳಾದ ಗಣೇಶ್ ಕುಮಾರ್, ಗ್ಯಾರಂಟಿ ಯೋಜನೆಯ ವಿವಿಧ ಸದಸ್ಯರು ಹಾಗೂ ಹಲವು ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



### ಅನ್ನಭಾಗ್ಯ ಮತ್ತು ಗೃಹಲಕ್ಷ್ಮಿ ಯೋಜನೆಗಳ ಕುಂದುಕೊರತೆ ನಿವಾರಣೆ

**ಅನ್ನಭಾಗ್ಯ ಯೋಜನೆಯಡಿ ನ್ಯಾಯಬೆಲೆ ಅಂಗಡಿಗಳಿಗೆ ಪ್ರತಿ ತಿಂಗಳು ಬೇಗನೇ ಅಕ್ಕಿಯನ್ನು ಕಳುಹಿಸಿಕೊಟ್ಟು, 15 ರಿಂದ 20 ದಿನಗಳ ಒಳಗಾಗಿ ವಿತರಣೆಯಾಗುವಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಯಿತು. ಕೆಲವು ನ್ಯಾಯಬೆಲೆ ಅಂಗಡಿಗಳಲ್ಲಿ ಸಾರ್ವಜನಿಕರಿಂದ ಹೆಚ್ಚಿನ ಹಣ ಪಡೆಯಲಾಗುತ್ತಿದೆ ಎಂಬ ದೂರುಗಳು ಕೇಳಿಬಂದಿದ್ದು, ಇಂತಹ ಪ್ರಕರಣಗಳು ಮರುಕಳಿಸದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಅಧ್ಯಕ್ಷರು ನಿರ್ದೇಶನ ನೀಡಿದರು. ಇದೇ ಸಂದರ್ಭದಲ್ಲಿ ಎಸ್ಸಿ ಹಾಗೂ ಎಸ್ಟಿ ಸಮುದಾಯದವರಿಗೆ ಹೊಸ ನ್ಯಾಯಬೆಲೆ ಅಂಗಡಿ ಆರಂಭಿಸಲು ಅವಕಾಶವಿದ್ದು, ಇದರ ಸದುಪಯೋಗಪಡಿಸಿಕೊಳ್ಳುವಂತೆ ಸಭೆಯಲ್ಲಿ ತಿಳಿಸಲಾಯಿತು. ಗೃಹಲಕ್ಷ್ಮಿ ಯೋಜನೆಗೆ ಸಂಬಂಧಿಸಿದಂತೆ ಮಾರ್ಚ್ ಮತ್ತು ಏಪ್ರಿಲ್ ತಿಂಗಳ ಹಣ ಜಮೆಯಾಗದ ಕುರಿತು ಚರ್ಚಿಸಲಾಯಿತು. ಇದಕ್ಕೆ ಉತ್ತರಿಸಿದ ಅಧಿಕಾರಿಗಳು, ಏಪ್ರಿಲ್ ತಿಂಗಳ ಹಣ ಬಿಡುಗಡೆಯಾಗಿದ್ದರೂ ತಾಂತ್ರಿಕ ತೊಂದರೆಗಳಿಂದಾಗಿ ಕೆಲವು ಫಲಾನುಭವಿಗಳ ಖಾತೆಗೆ ಇನ್ನು ತಲುಪಿಲ್ಲ. ಮರಣ ಹೊಂದಿದ ಫಲಾನುಭವಿಗಳ ಖಾತೆಗೂ ಹಣ ಜಮೆಯಾಗುತ್ತಿರುವುದು ಕಂಡುಬಂದಿದ್ದು, ರಾಜ್ಯ ತಾಂತ್ರಿಕ ತಂಡದ ಗಮನಕ್ಕೆ ತಂದು ಮುಂದಿನ ದಿನಗಳಲ್ಲಿ ಈ ಎಲ್ಲಾ ಸಮಸ್ಯೆಗಳನ್ನು ಸಂಪೂರ್ಣವಾಗಿ ಬಗೆಹರಿಸಲಾಗುವುದು ಎಂದು ಸ್ಪಷ್ಟಪಡಿಸಿದರು.**

# ಇಂದು ನೂತನ ಆಯೋಗದ ಸದಸ್ಯರಿಗೆ ಅಭಿನಂದನೆ

ಮೈಸೂರು: ಕರ್ನಾಟಕ ರಾಜ್ಯ ನಗರ ಪಾಲಿಕೆ, ನಗರಸಭೆ, ಪುರಸಭೆಗಳ ಪೌರ ಕಾರ್ಮಿಕರ ಮಹಾ ಸಂಘ, ಜಿಲ್ಲಾ ಗ್ರಾಪಂ ಪೌರ ಕಾರ್ಮಿಕರ ಸಂಘಗಳ ಸಂಯುಕ್ತಾಶ್ರಯದಲ್ಲಿ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ನೂತನ ಸದಸ್ಯರಾಗಿ ನೇಮಕಗೊಂಡಿರುವ ಸಿ.ಶಂಕರ ಅಂಕನಶೆಟ್ಟಿಪುರರನ್ನು ಅಭಿನಂದಿಸುವ ಸಮಾರಂಭ ಜೂ. 26 ರ ಮಧ್ಯಾಹ್ನ 3.30ಕ್ಕೆ ನಗರದ ಇನ್‌ಸ್ಟಿಟ್ಯೂಟ್ ಆಫ್ ಎಂಜಿನಿರ?ಸ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾಧ್ಯಕ್ಷ ಆರ್ಟಿಸ್ಟ್ ಎಸ್. ನಾಗರಾಜು ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಎಂಎಲ್ಸಿ ಡಾ.ಡಿ. ತಿಮ್ಮಯ್ಯ ಉದ್ಘಾಟಿಸುವರು, ಮಾಜಿ ಮೇಯರ್ ನಾರಾಯಣ ಅಧ್ಯಕ್ಷತೆ ವಹಿಸುವರು, ಮತ್ತೋರ್ವ ಎಂಎಲ್ಸಿ ಡಾ.ಕೆ. ಶಿವಕುಮಾರ್ ಅಭಿನಂದಿಸುವರು, ಇನ್ನಿತರ ಪದಾಧಿಕಾರಿಗಳಾದ ಪಾಲ್ ವೆಂಕಟೇಶ್, ಸೋಮು, ನೀಲಸೋಗೆ ರಾಜು, ಚೆಲುವರಾಜು ಗದ್ದಿಗೆ ಹಾಜರಿದ್ದರು.

# ಕೋರ್ಸ್‌ಗಳ ಪ್ರಾರಂಭ

ಮೈಸೂರು: ನಗರದ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿನ ಇಂದಿರಾ ಗಾಂಧಿ ರಾಷ್ಟ್ರೀಯ ಮುಕ್ತ ವಿವಿಯಲ್ಲಿ ನೂತನ ಸಾಲಿನ ವಿವಿಧ ಕೋರ್ಸ್‌ಗಳಿಗೆ ಪ್ರವೇಶ ಆರಂಭವಾಗಿದೆ ಎಂದು ಪ್ರಾದೇಶಿಕ ನಿರ್ದೇಶಕರಾದ ಡಾ. ಎಚ್.ಸಿ. ಹೇಮಮಾಲಿನಿ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಪದವಿ, ಸ್ನಾತಕೋತ್ತರ ಪದವಿ, ಡಿಪ್ಲೊಮಾ, ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಆಸಕ್ತ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಪ್ರವೇಶ ಪರೀಕ್ಷೆಯ ಅವಶ್ಯಕತೆ ಇಲ್ಲದೇ ಎಂಬಿಎ ಕಾರ್ಯಕ್ರಮಕ್ಕೂ ಇಗ್ನೋ ನೇರ ಪ್ರವೇಶ ಒದಗಿಸುತ್ತಿದೆ. ಹೆಚ್ಚಿನ ಮಾಹಿತಿಗೆ ಕಾಲೇಜಿನಲ್ಲಿರುವ ಈ ಕೇಂದ್ರಕ್ಕೆ ಮಧ್ಯಾಹ್ನ 3.30 ರಿಂದ ಸಂಜೆ 5.30 ರವರೆಗೆ ಭೇಟಿ ನೀಡಬಹುದಾಗಿದೆ. ಅಥವಾ 0821– 2423 374 ಕ್ಕೆ ಕರೆ ಮಾಡಬಹುದಾಗಿದೆ ಎಂದರು. ಸಂಯೋಜಕ ಡಾ.ಬಿ.ಎಸ್. ಹರ್ಷ, ಡಾ. ಸಿದ್ದರಾಜು ಇದ್ದರು.

# ಮಾದಕ ವ್ಯಸನದಿಂದ ದೂರವಿರಿ




ಮೈಸೂರು: ಮಾದಕ ವಸ್ತುಗಳ ಸೇವನೆಯು ವ್ಯಕ್ತಿಯ ಆರೋಗ್ಯ, ಶಿಕ್ಷಣ, ಕುಟುಂಬ ಹಾಗೂ ಸಮಾಜದ ಮೇಲೆ ಗಂಭೀರ ದುಷ್ಪರಿಣಾಮಗಳನ್ನು ಉಂಟುಮಾಡುವುದರ ಜೊತೆಗೆ ಅಪರಾಧ ಚಟುವಟಿಕೆಗಳಿಗೆ ದಾರಿಮಾಡಿಕೊಡುತ್ತದೆ ಎಂದು ವಿಜಯನಗರ ಉಪವಿಭಾಗದ ಎಸಿಪಿ( ಉಪ ಪೊಲೀಸ್ ಆಯುಕ್ತ) ರವಿಪ್ರಸಾದ್ ಹೇಳಿದರು.

ಅಂತಾರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನಾಚರಣೆ ಅಂಗವಾಗಿ, ಮೈಸೂರು ನಗರ ಪೊಲೀಸ್ ಸಹಯೋಗದೊಂದಿಗೆ ವಿಜಯನಗರ ಪೊಲೀಸ್ ಠಾಣಾ ವತಿಯಿಂದ ಗುರುವಾರ ಆಯೋಜಿಸಲಾಗಿದ್ದ ಜಾಗೃತಿ ಸಪ್ತಾಹ ಜಾಥಾಗೆ ಚಾಲನೆ ನೀಡಿದರು. ಸಾರ್ವಜನಿಕರು ವಿಶೇಷವಾಗಿ ಯುವಜನತೆ ಮತ್ತು ವಿದ್ಯಾರ್ಥಿಗಳು ಮಾದಕ ವ್ಯಸನದ ದುಷ್ಪರಿಣಾಮಗಳ ಬಗ್ಗೆ ಅರಿವು ಹೊಂದಿ, ಇಂತಹ ದುಷ್ಚಟಗಳಿಂದ ದೂರವಿದ್ದು ಆರೋಗ್ಯಕರ ಹಾಗೂ ಶಿಸ್ತುಬದ್ಧ ಜೀವನವನ್ನು ಅಳವಡಿಸಿಕೊಳ್ಳುವುದು ಅತ್ಯಗತ್ಯ ಎಂದು ತಿಳಿಸಿದರು. ಹೆಬ್ಬಾಳಿನ ಸೂರ್ಯ ಬೇಕರಿಯಿಂದ ಶುರುವಾದ ಜಾಗೃತಿ ಜಾಥಾ ಶ್ರೀಯೋಗಾನರಸಿಂಹ ಸ್ವಾಮಿ ದೇವಾಲಯದಲ್ಲಿ ಅಂತ್ಯಗೊಂಡಿತು. ಈ ಸಂದರ್ಭದಲ್ಲಿ ದೇವಾಲಯದ ಆಡಳಿತಾಧಿಕಾರಿ ಎನ್.ಶ್ರೀನಿವಾಸನ್, ವಿಜಯನಗರ ಠಾಣಾ ಇನ್ಸ್ ಪೆಕ್ಟರ್ ಲವ, ಮೇಟಗಳ್ಳಿ ಠಾಣಾ ಇನ್ಸ್ ಪೆಕ್ಟರ್ ಅರುಣ್ ಕುಮಾರ್, ಸರಸ್ವತಿಪುರಂ ಠಾಣೆಯ ರವಿಕಿರಣ್, ಹೆಬ್ಬಾಳು ಠಾಣೆಯ ಲಕ್ಷ್ಮೀಕಾಂತ್ ಸೇರಿ ಇತರರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಮುಖ್ಯ



ಮೈಸೂರು: ಕಂಪ್ಯೂಟರ್ ಯುಗದಲ್ಲಿ ವಿದ್ಯಾರ್ಥಿ ಆಧುನಿಕ ತಂತ್ರಜ್ಞಾನ ಕಲಿಯುತ್ತಾ ಸಾಗ ಬೇಕು. ಅದಕ್ಕೆ ಪಾಲಕರು ಪ್ರೋತ್ಸಾಹ ನೀಡಬೇಕು ಎಂದು ನಗರಪಾಲಿಕೆ ಸದಸ್ಯ ಪಿ.ಪ್ರಶಾಂತ್ ಗೌಡ ಹೇಳಿದರು.

ನಗರದ ನಾರಾಯಣ ಶಾಸ್ತ್ರಿ ರಸ್ತೆಯಲ್ಲಿರುವ ಎನ್‌ಟಿಎಂ ಸರ್ಕಾರಿ ಶಾಲೆ ವಿದ್ಯಾರ್ಥಿಗಳಿಗೆ ಕರುಣಾಮಯಿ ವಿಷ್ಣು ಅಭಿಮಾನಿ ಬಳಗದವತಿಯಿಂದ ಗುರುವಾರ ಲೇಖನಿ ಸಾಮಗ್ರಿಗಳು ವಿತರಿಸಿ ಮಾತನಾಡಿದರು. ಸರ್ಕಾರಿ ಶಾಲೆಗಳಿಗೆ ಹೆಚ್ಚು ಹಾಜರಾತಿ ಆಗುವ ಹಿನ್ನಲೆಯಲ್ಲಿ ಮುಂದಿನ ಶೈಕ್ಷಣಿಕ ವರ್ಷದಲ್ಲಿ ಸ್ನೇಹಿತರಲ್ಲ ಸೇರಿ ಎನ್ ಟಿ ಎಂ ಶಾಲಾ ವಾಹನವನ್ನು ಕೊಡುಗೆ ನೀಡಲಾಗುವುದು. ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಕಡೆಗೆ ಹೆಚ್ಚಿನ ಗಮನಹರಿಸಬೇಕು, ಈ ಕಲಿಕಾ ಪರಿಕರಗಳು ಅವರ ಶಿಕ್ಷಣಕ್ಕೆ ನೆರವಾಗಬೇಕು ಎನ್ನುವುದು ನಮ್ಮ ಆಶಯ, ಸಮಾಜಕ್ಕೆ ನಾವು ಸಾಧ್ಯವಾದಷ್ಟು ಕೊಡುಗೆ ನೀಡಬೇಕು ಪ್ರತಿಯೊಬ್ಬರೂ ಸಮಾಜಮುಖಿ ಚಿಂತನೆ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ನಗರಪಾಲಿಕೆ ಮಾಜಿ ಸದಸ್ಯ ಎಂ.ಡಿ.ಪಾರ್ಥಸಾರಥಿ ಮಾತನಾಡಿದರು. ಕರುಣಾಮಯಿ ವಿಷ್ಣು ಅಭಿಮಾನಿ ಬಳಗದ ಅಧ್ಯಕ್ಷ ಎಸ್.ಎನ್.ರಾಜೇಶ್, ಕನಕ ಪತ್ತಿನ ಸಹಕಾರಿ ಸಂಘದ ನಿರ್ದೇಶಕ ರವಿಚಂದ್ರ, ರಮೇಶ್, ರಾಕೇಶ್, ಶಾಲೆಯ ಮುಖ್ಯ ಶಿಕ್ಷಕಿ ಶಾಂತಮ್ಮ, ಶಿಕ್ಷಕರಾದ ಸಮೀನಾ ಪರ್ವೀನ್ ಹಾಜರಿದ್ದರು.

ಪ್ರೀತಂಗೌಡ ಹೇಳಿಕೆ

# ಜಾತಿ ಲೆಕ್ಕಾಚಾರ, ಆಮಿಷಗಳಿಂದ ಚುನಾವಣೆ ಗೆಲ್ಲಲು ಆಗಲ್ಲ

ಮೈಸೂರು: ಕೇವಲ ಜಾತಿ ಲೆಕ್ಕಾಚಾರ ಅಥವಾ ಆಮಿಷಗಳಿಂದ ಚುನಾವಣೆ ಗೆಲ್ಲಬಹುದು ಎಂಬ ಭ್ರಮೆಯಿಂದ ನಾಯಕರು ಹೊರಬರಬೇಕು. ಮುಂಬರುವ ಚುನಾವಣೆಗಳ ಹಣೆಬರಹವನ್ನು ಎಸ್‌ಐಆರ್ ನಿರ್ಧರಿಸಲಿದ್ದು, ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತರು ಎಸ್‌ಐಅರ್ ಯಶಸ್ಸಿಗೆ ಶ್ರಮಿಸಬೇಕು ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂಗೌಡ ಹೇಳಿದರು.

ನಗರದ ಖಾಸಗಿ ಹೋಟೆಲ್ ನಲ್ಲಿ ಆಯೋಜಿಸಿದ್ದ ಮೈಸೂರು ವಿಭಾಗದ ಎಸ್‌ಐಆರ್ ವಿಶೇಷ ಸಭೆಯಲ್ಲಿ ಮಾತನಾಡಿದ ಅವರು, ಮುಂದೆ ಬರಲಿರುವ ಒಂದು ದೇಶ, ಒಂದು ಚುನಾವಣೆ, ಕ್ಷೇತ್ರ ಮರುವಿಂಗಡಣೆ ಪ್ರಕ್ರಿಯೆಗಳ ಹಣೆಬರಹವನ್ನು ಎಸ್‌ಐಆರ್ ನಿರ್ಧರಿಸಲಿದೆ. ಈ ನಿಟ್ಟಿನಲ್ಲಿ ಪ್ರತಿ ಶಕ್ತಿ ಕೇಂದ್ರ, ಮಹಾ ಶಕ್ತಿ ಕೇಂದ್ರಗಳ ಮಟ್ಟದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರು, ಪಾಲಿಕೆ ಸದಸ್ಯರನ್ನೊಳಗೊಂಡ ತಂಡಗಳನ್ನು ರಚಿಸಿ, ತುರ್ತು ಸಭೆಗಳನ್ನು ನಡೆಸಿ ಕಾರ್ಯಾಚರಣೆಗೆ ಇಳಿಯಬೇಕು. ಕರಡು ಪಟ್ಟಿ ಪ್ರಕಟವಾದ ನಂತರ 2002ರ ನಂತರ ಪಟ್ಟಿಗೆ ಸೇರಿದ್ದರೆ, ಕುಟುಂಬದ ಸಂಬಂಧದ




ದಾಖಲೆಗಳು, ವಲಸೆ ಹೋದವರ ಹಳೇ ಪುರಾವೆಗಳನ್ನು ಮರುಸಲ್ಲಿಸುವಲ್ಲಿ ಕಾರ್ಯಕರ್ತರು ಮತದಾರರಿಗೆ ನೆರವಾಗಬೇಕು. ಎಸ್‌ಐಆರ್ ಪ್ರಕ್ರಿಯೆಯನ್ನು ಲಘುವಾಗಿ ಪರಿಗಣಿಸಿದರೆ ಭವಿಷ್ಯದಲ್ಲಿ ಪಕ್ಷಕ್ಕೆ ಭಾರಿ ಹಿನ್ನಡೆಯಾಗಲಿದೆ. ನಿರ್ಲಕ್ಷ್ಯ ವಹಿಸಿದರೆ, ನನ್ನನ್ನೂ ಸೇರಿದಂತೆ ಶಾಸಕರಾಗಿದ್ದವರ ಅಥವಾ ಶಾಸಕರಾಗಲಿಚ್ಛಿಸುವವರ ಮತಗಳೂ ಪಟ್ಟಿಯಿಂದ ಡಿಲೀಟ್ ಆಗಲಿವೆ ಎಂದು ಎಚ್ಚರಿಕೆ ನೀಡಿದರು.

ಕಳೆದ ಆರು ತಿಂಗಳಿನಿಂದ ಎಸ್‌ಐಆರ್ ನಡೆಯಲಿದೆ ಎಂದು ಹೇಳುತ್ತಾ ಕಾಲ ಕಳೆದಿದ್ದೇವೆ. ಜೂ.29 ರಿಂದ ಜು.30ರವರೆಗೆ ಪ್ರಕ್ರಿಯೆ ನಡೆಯಲಿದೆ. ತೋಳ ಬಂತು ತೋಳ ಕಥೆಯಂತೆ ನಿಜವಾಗಿಯೂ ಪ್ರಕ್ರಿಯೆ ಆರಂಭವಾದಾಗ ನಾವು ಮನೆಯಲ್ಲಿ ಮಲಗುವಂತಾಗಬಾರದು. ಇದೊಂದು ಗಂಭೀರವಾದ ಪ್ರಕ್ರಿಯೆಯಾಗಿದ್ದು, ಕಾರ್ಯಕರ್ತರು ಮೈಯೆಲ್ಲಾ ಕಣ್ಣಾಗಿ ಕೆಲಸ ಮಾಡಬೇಕಿದೆ. ಇದು ಕೇವಲ ಮತದಾರರ ಪಟ್ಟಿಗೆ ಹೊಸ ಹೆಸರು ಸೇರಿಸುವ ಅಥವಾ ತೆಗೆಯುವ ಸಾಂಪ್ರದಾಯಿಕ ಪ್ರಕ್ರಿಯೆಯಲ್ಲ. ಬೂತ್‌ನಲ್ಲಿರುವ ಎಲ್ಲಾ ಹಳೇ ವೋಟ್ ಗಳನ್ನು ಅಳಿಸಿ, ಮೊದಲನೇ ಮತದಾರನಿಂದ ಹೊಸದಾಗಿ ಪ್ರಕ್ರಿಯೆ ಆರಂಭವಾಗುತ್ತದೆ. ಬಿಎಲ್‌ಓಗಳು ತಂದುಕೊಡುವ ಎನ್ಯೂಮರೇಷನ್ ಫಾರ್ಮ್ ಭರ್ತಿ ಮಾಡಿ ವಾಪಸ್ ತಲುಪಿಸದಿದ್ದರೆ ಜಗತ್ತಿನ ಯಾವ ಶಕ್ತಿಯೂ ನಮ್ಮ ಮತವನ್ನು ಉಳಿಸಲು ಸಾಧ್ಯವಿಲ್ಲ. ಹೀಗಾಗಿ ನೈಜ ಮತದಾರರನ್ನು ಪಟ್ಟಿಗೆ ಸೇರಿಸುವ ಕೆಲಸ ಮಾಡಿ ಎಂದರು. ಸಭೆಯಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ, ವಿಧಾನ ಪರಿಷತ್ ಸದಸ್ಯರಾದ ರಘು ಕೌಟಿಲ್ಯ, ನವೀನ್, ಬಿಜೆಪಿ ರಾಜ್ಯ ಉಪಾಧ್ಯಕ್ಷ ಎಂ.ರಾಜೇಂದ್ರ, ಮಾಜಿ ಶಾಸಕರಾದ ಎಲ್.ನಾಗೇಂದ್ರ, ಎನ್.ಮಹೇಶ್, ಹರ್ಷವರ್ಧನ್, ನಿರಂಜನ್ ಕುಮಾರ್, ಜಿಲ್ಲಾಧ್ಯಕ್ಷ ಕುಂಬ್ರಳ್ಳಿ ಸುಬ್ಬಣ್ಣ, ಮಾಜಿ ಎಂಎಲ್ಸಿ ತೋಂಟದಾರ್ಯ ಲಕ್ಷ್ಮಿ ಅಶ್ವಿನ್ ಗೌಡ, ಹಾಸನ ಜಿಲ್ಲಾಧ್ಯಕ್ಷ ಸಿದ್ದೇಶ್, ಮಂಡ್ಯ ಜಿಲ್ಲಾಧ್ಯಕ್ಷ ಇಂದ್ರೇಶ್, ಮುಖಂಡರಾದ ಫಣೀಶ್, ಸಿದ್ದರಾಜು, ಮಾಜಿ ಮೇಯರ್ ಗಳಾದ ಶಿವಕುಮಾರ್, ಸಂದೇಶ್ ಸ್ವಾಮಿ, ಮುಖಂಡರಾದ ಕವೀಶ್ ಗೌಡ, ಪ್ರಶಾಂತ್ ಗೌಡ ಸೇರಿ ಅನೇಕರು ಇದ್ದರು.

# 100ಗ್ರಾಂ ಒಣ ಗಾಂಜಾ ವಶ

ಗುಂಡ್ಲುಪೇಟೆ:- ಪಟ್ಟಣದಲ್ಲಿ ಅಕ್ರಮವಾಗಿ ಗಾಂಜಾ ಸಾಗಾಣಿಕೆ ಮಾಡುತ್ತಿದ್ದ ವ್ಯಕ್ತಿಯನ್ನು ಪೊಲೀಸರು



ಬಂಧಿಸಿದ್ದು ಅತನಿಂದ 100ಗ್ರಾಂ ಒಣ ಗಾಂಜಾ ವಶಪಡಿಸಿಕೂಂಡಿದ್ದಾರೆ

ತಮಿಳುನಾಡಿನ ಮೂಲದ ವಿಘ್ನೇಶ್ (20)ಬಂಧಿತ ಅರೋಪಿ ಖಚಿತ ಮಾಹಿತಿ ಮೇರೆಗೆ ಅಂಗನವಾಡಿ ಕೇಂದ್ರ ಬಳಿ ಪೋಲಿಸರು ದಾಳಿ ನಡೆಸಿದ್ದಾರೆ ಈ ವೇಳೆ ಜಾಕೀರ್ ಹುಸೇನ್ ನಗರದ ನಿವಾಸಿಯಿಂದ ಗಾಂಜಾ ಪಡೆಯುತ್ತಿದ್ದ ತಮಿಳು ನಾಡು ಮೂಲದ ಊಟಿ ಸಮೀಪದ ನಡುವಟ್ಟಂ ನಿವಾಸಿ ವಿಘ್ನೇಶ (20) ಎಂಬಾತನನ್ನು ಪೋಲಿಸರು ಬಂಧಿಸಿದ್ದು ಮುಭಾರಕ್ ಎಂಬಾತ ಸ್ಥಳದಿಂದ ಪರಾರಿಯಾಗಿದ್ದು ಅತನ ಬಂಧನಕ್ಕೆ ಶೋಧ ಕಾರ್ಯ ಮುಂದುವರಿದಿದೆ

ಬಂಧಿತ ಅರೋಪಿ ಬಳಿ ಇದ್ದ ಐದು ಸಾವಿರ ರೂ ಮೌಲ್ಯದ 100 ಗ್ರಾಂ ತೂಕದ ಒಣ ಗಾಂಜಾವನ್ನು ವಶಪಡಿಸಿಕೂಳ್ಳಲಾಗಿದೆ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗುಂಡ್ಲುಪೇಟೆ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಪಲ್ಸ್ ಪೋಲಿಯೋ: ಲಸಿಕೆ ನೀಡಲು 612 ಬೂತ್‌ಗಳ ಸ್ಥಾಪನೆ

ಚಾಮರಾಜನಗರ, ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವು ಜಿಲ್ಲೆಯಾದ್ಯಂತ ಜೂನ್ 28ರಂದು ನಡೆಯಲಿದ್ದು, ಜಿಲ್ಲೆಯಲ್ಲಿ ಒಟ್ಟು 612 ಬೂತ್‌ಗಳಲ್ಲಿ 66601 ಮಕ್ಕಳಿಗೆ ಪೋ?ಲಿಯೋ ಲಸಿಕೆ ನೀಡುವ ಗುರಿಯನ್ನು ಹೊಂದಲಾಗಿದೆ.



ಚಾಮರಾಜನಗರ ತಾಲೂಕಿನಲ್ಲಿ ನಗರ ಪ್ರದೇಶದಲ್ಲಿ 7010, ಗ್ರಾಮೀಣ ಪ್ರದೇಶದಲ್ಲಿ 16699 ಸೇರಿದಂತೆ ಒಟ್ಟು 23709 ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಗುಂಡ್ಲುಪೇಟೆ ತಾಲೂಕಿನಲ್ಲಿ ನಗರ ಪ್ರದೇಶದಲ್ಲಿ 2006, ಗ್ರಾಮೀಣ ಪ್ರದೇಶದಲ್ಲಿ 11986 ಸೇರಿದಂತೆ ಒಟ್ಟು 13992, ಕೊಳ್ಳೇಗಾಲ ತಾಲೂಕಿನಲ್ಲಿ ನಗರ ಪ್ರದೇಶದಲ್ಲಿ 4962, ಗ್ರಾಮೀಣ ಪ್ರದೇಶದಲ್ಲಿ 7162 ಸೇರಿದಂತೆ ಒಟ್ಟು 121224, ಹನೂರು ತಾಲೂಕಿನಲ್ಲಿ ನಗರ ಪ್ರದೇಶದಲ್ಲಿ 987, ಗ್ರಾಮೀಣ ಪ್ರದೇಶದಲ್ಲಿ 10521 ಸೇರಿದಂತೆ ಒಟ್ಟು 11508 ಹಾಗೂ ಯಳಂದೂರು ತಾಲೂಕಿನಲ್ಲಿ ನಗರ ಪ್ರದೇಶದಲ್ಲಿ 464, ಗ್ರಾಮೀಣ ಪ್ರದೇಶದಲ್ಲಿ 4804 ಸೇರಿದಂತೆ ಒಟ್ಟು 5268 ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಒಟ್ಟಾರೆ ನಗರ ಪ್ರದೇಶದಲ್ಲಿ 15429 ಹಾಗೂ ಗ್ರಾಮೀಣ ಪ್ರದೇಶದಲ್ಲಿ 51172 ಸೇರಿದಂತೆ ಒಟ್ಟು 66601 ಮಕ್ಕಳಿಕೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಚಾಮರಾಜನಗರ ತಾಲೂಕಿನ ನಗರ ಪ್ರದೇಶದಲ್ಲಿ 39 ಬೂತ್ ಗಳು, ಗ್ರಾಮೀಣ ಪ್ರದೇಶದಲ್ಲಿ 150 ಬೂತ್ ಗಳು ಸೇರಿದಂತೆ ಒಟ್ಟು 189 ಬೂತ್ ಗಳನ್ನು ತೆರೆಯಲಾಗಿದೆ. ಗುಂಡ್ಲುಪೇಟೆ ತಾಲೂಕಿನ ನಗರ ಪ್ರದೇಶದಲ್ಲಿ 16 ಬೂತ್ ಗಳು, ಗ್ರಾಮೀಣ ಪ್ರದೇಶದಲ್ಲಿ 140 ಬೂತ್ ಗಳು ಸೇರಿದಂತೆ ಒಟ್ಟು 156 ಬೂತ್‌ಗಳು, ಕೊಳ್ಳೇಗಾಲ ತಾಲೂಕಿನ ನಗರ ಪ್ರದೇಶದಲ್ಲಿ 28 ಬೂತ್ ಗಳು, ಗ್ರಾಮೀಣ ಪ್ರದೇಶದಲ್ಲಿ 62 ಬೂತ್ ಗಳು ಸೇರಿದಂತೆ ಒಟ್ಟು 90 ಬೂತ್ ಗಳು, ಹನೂರು ನಗರ ಪ್ರದೇಶದಲ್ಲಿ 5 ಬೂತ್ ಗಳು, ಗ್ರಾಮೀಣ ಪ್ರದೇಶದಲ್ಲಿ 129 ಬೂತ್ ಗಳು ಸೇರಿದಂತೆ ಒಟ್ಟು 134 ಬೂತ್ ಗಳು ಹಾಗೂ ಯಳಂದೂರು ತಾಲೂಕಿನ ನಗರ ಪ್ರದೇಶದಲ್ಲಿ 4 ಬೂತ್ ಗಳು, ಗ್ರಾಮೀಣ ಪ್ರದೇಶದಲ್ಲಿ 39 ಬೂತ್ ಗಳು ಸೇರಿದಂತೆ ಒಟ್ಟು 43 ಬೂತ್ ಗಳನ್ನು ತೆರೆಯಲಾಗಿದೆ. ಒಟ್ಟಾರೆ ನಗರ ಪ್ರದೇಶದಲ್ಲಿ 92 ಹಾಗೂ ಗ್ರಾಮೀಣ ಪ್ರದೇಶದಲ್ಲಿ 520 ಸೇರಿದಂತೆ ಒಟ್ಟು 612 ಬೂತ್ ಗಳನ್ನು ತೆರೆಯಲಾಗುವುದು. ಒಟ್ಟು 23 ಟ್ರಾನ್ಸಿಟ್ ಬೂತ್‌ಗಳನ್ನು ತೆರೆಯಲಾಗಿದ್ದು, ಚಾಮರಾಜನಗರ ತಾಲೂಕಿನಲ್ಲಿ 10, ಗುಂಡ್ಲುಪೇಟೆ ತಾಲೂಕಿನಲ್ಲಿ 6, ಕೊಳ್ಳೇಗಾಲ ತಾಲೂಕಿನಲ್ಲಿ 3, ಹನೂರು ತಾಲೂಕಿನಲ್ಲಿ 3 ಹಾಗೂ ಯಳಂದೂರು ತಾಲೂಕಿನಲ್ಲಿ ಒಂದು ಟ್ರಾನ್ಸಿಟ್ ಬೂತ್‌ಗಳನ್ನು ತೆರೆಯಲಾಗಿದೆ. ಒಟ್ಟು 5 ಮೊಬೈಲ್ ತಂಡಗಳಿದ್ದು, ಚಾಮರಾಜನಗರ ತಾಲೂಕಿನಲ್ಲಿ ಒಂದು, ಗುಂಡ್ಲುಪೇಟೆ ಮತ್ತು ಯಳಂದೂರು ತಾಲೂಕಿನಲ್ಲಿ ತಲಾ 2 ಮೊಬೈಲ್ ತಂಡಗಳು ನಿಯೋಜನೆಯಾಗಿವೆ.

ಚಾಮರಾಜನಗರ ತಾಲೂಕಿನಲ್ಲಿ 778 ಲಸಿಕಾ ಕಾರ್ಯಕರ್ತರು, 39 ಲಸಿಕಾ ಮೇಲ್ವಿಚಾರಕರು, ಗುಂಡ್ಲುಪೇಟೆ ತಾಲೂಕಿನಲ್ಲಿ 664 ಲಸಿಕಾ ಕಾರ್ಯಕರ್ತರು, 33 ಮೇಲ್ವಿಚಾರಕರು, ಕೊಳ್ಳೇಗಾಲ ತಾಲೂಕಿನಲ್ಲಿ 366 ಲಸಿಕಾ ಕಾರ್ಯಕರ್ತರು, 17 ಮೇಲ್ವಿಚಾರಕರು, ಹನೂರು ತಾಲೂಕಿನಲ್ಲಿ 544 ಲಸಿಕಾ ಕಾರ್ಯಕರ್ತರು, 27 ಮೇಲ್ವಿಚಾರಕರು ಹಾಗೂ ಯಳಂದೂರು ತಾಲೂಕಿನಲ್ಲಿ 196 ಲಸಿಕಾ ಕಾರ್ಯಕರ್ತರು, 10 ಮೇಲ್ವಿಚಾರಕರು ಸೇರಿದಂತೆ ಒಟ್ಟು 2528 ಲಸಿಕಾ ಕಾರ್ಯಕರ್ತರು ಹಾಗೂ 126 ಮೇಲ್ವಿಚಾರಕರನ್ನು ನಿಯೋಜಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಜೂ.28ಕ್ಕೆ ಕವನ ಸಂಕಲನಗಳ ಲೋಕಾರ್ಪಣೆ

ಮೈಸೂರು: ಸಿರಿಗನ್ನಡ ವೇದಿಕೆ ನಗರ ಘಟಕ, ಋಷಿ ಪ್ರಕಾಶನಗಳ ಸಂಯುಕ್ತಾಶ್ರಯದಲ್ಲಿ ಜೂ. 28 ರ ಬೆಳಗ್ಗೆ 10ಕ್ಕೆ ವಿಜಯನಗರದಲ್ಲಿನ ಜಿಲ್ಲಾ ಕಸಾಪ ಸಭಾಂಗಣದಲ್ಲಿ ಆದಿಲ್ ಪಾಷ ಅವರ ನೀ ನನ್ನ ಚೈತ್ರ, ಹರ್ಷೋತ್ಸವ ಹಾಗೂ ಆದಿರಾಗ್ ಕವನ ಸಂಕಲನಗಳ ಲೋಕಾರ್ಪಣೆ ಸಮಾರಂಭ ಆಯೋಜಿಸಲಾಗಿದೆ ಎಂದು ಗೌರವ ಸಲಹೆಗಾರರಾದ ಡಾ. ಸೌಗಂಧಿಕಾ ವಿ.ಜೋಯಿಸ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಉದ್ಘಾಟಿಸಿ, ಕೃತಿ ಲೋಕಾರ್ಪಣೆಗೊಳಿಸುವರು, ಎಂ.ಬಿ. ಸಂತೋಷ್ ಅಧ್ಯಕ್ಷತೆ ವಹಿಸುವರು, ಕೃತಿಗಳನ್ನು ಕುರಿತು ಡಾ. ಯಲ್ಲಪ್ಪ ಕೆಕೆ ಪುರ, ಸತೀಶ್ ಜವರೇಗೌಡ ಹಾಗೂ ತಾವು ಮಾತನಾಡಲಿದ್ದು, ಅಲ್ ಹುಸ್ನ, ಕೃತಿಕಾರ ಆದಿಲ್ ಪಾಷ, ಸಿ.ಎಸ್. ರಾಘವೇಂದ್ರ ಇನ್ನಿತರರು ವೇದಿಕೆಯಲ್ಲಿರುವರೆಂದರು. ಕೃತಿಕಾರ ಆದಿಲ್ ಪಾಷ, ಎಂ.ಬಿ. ಸಂತೋಷ್, ರೇಖಾ ಗೌತಂ ಹಾಜರಿದ್ದರು.

# ಜೂ.28ಕ್ಕೆ ಆಯುರ್ ಮಟಂ ಶಾಖೆ ಉದ್ಘಾಟನೆ

ಮೈಸೂರು: ನಗರದ ಮಹದೇವಪುರ ರಸ್ತೆಯ ಕಾಳಿ ಸಿದ್ದನಹುಂಡಿ, ರಾಮೇನಹಳ್ಳಿ ಗ್ರಾಮಗಳಿಗೆ ಹೊಂದಿಕೊಂಡಂತಿರುವ ಆಯುರ್ ಮಟಂ ಆಯುರ್ವೇದ ಗ್ರಾಮದ ಉದ್ಘಾಟನೆ ಜೂ.28 ರ ಬೆಳಗ್ಗೆ 11ಕ್ಕೆ ನಡೆಯಲಿದೆ ಎಂದು ಮುಖ್ಯಸ್ಥ ಡಾ. ಮನು ಬಿ. ಮೆನನ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ನಾಲ್ವಡಿ ಶಾಂತಲಿಂಗ ಶಿವಾಚಾರ್ಯ ಸ್ವಾಮೀಜಿ, ಡಾ. ತ್ರಿನೇತ್ರ ಮಹಾಂತ ಶಿವಯೋಗಿ ಸ್ವಾಮೀಜಿ ಲೋಕಾರ್ಪಣೆಗೊಳಿಸುವರು, ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ, ಶಾಸಕರಾದ ಟಿ.ಎಸ್. ಶ್ರೀವತ್ಸ, ಬಿ.ಶಿವಣ್ಣ, ಟಿ.ಬಿ.ಜಯಚಂದ್ರ, ಅನಿಲ್ ಚಿಕ್ಕಮಾದು, ಸಂಸದ ಸುನೀಲ್ ಬೋಸ್ ಇನ್ನಿತರರು ಹಾಜರಿರುವರೆಂದರು. ಸಾಂಪ್ರದಾಯಿಕ ಚಿಕಿತ್ಸೆಯ ಎಲ್ಲ ಪ್ರಯೋಜನ, ದೇಹದ ಅಂಗಾಂಗಗಳು ಮತ್ತು ಕಣಜಗಳ ವೃದ್ಧಿ, ಕಣಜಗಳ ಪುನರುಜ್ಜೀವನ, ದೇಹದಲ್ಲಿನ ವಿಷಕಾರಿ ಅಂಶಗಳನ್ನು ಹೊರ ಹಾಕುವುದೇ ಮೊದಲಾದವನ್ನು ಒಳಗೊಂಡ ಮರ್ಮ ಚಿಕಿತ್ಸೆಗೆ ಈ ಕೇಂದ್ರ ಗಮನ ನೀಡಿದೆ ಎಂದರು. ಡಾ. ಆಶಾ ಮನು, ಮೋಹನ್ ಚಂದನ್, ಚೈತ್ರ, ಸುಧಾಕರ್ ಇದ್ದರು.

# ಕಾಮಗಾರಿಗೆಗಳಿಗೆ ಚಾಲನೆ



ಗುಂಡ್ಲುಪೇಟೆ: ತಾಲ್ಲೂಕಿನ ತೆರಕಣಾಂಬಿ ಎಪಿಎಂಸಿ ಅಭಿವೃದ್ಧಿ ಗೆ ಸುಮಾರು ಒಂದು ಕೋಟಿ ಅರವತ್ತು ಲಕ್ಷ ರೂ ವೆಚ್ಚದಲ್ಲಿ ಶಾಸಕ ಎಚ್ ಎಂ ಗಣೇಶ್ ಪ್ರಸಾದ್ ಗುದ್ದಲಿಪೂಜೆ ನೆರವೇರಿಸಿದರು.

ನಂತರ ಮಾತನಾಡಿ ಶಿವಾನಂದ ಪಾಟೀಲರು ಸಚಿವರಾಗಿದ್ದ ಸಂದರ್ಭದಲ್ಲಿ ಎಪಿಎಂಸಿ ಅಭಿವೃದ್ಧಿ ಗೆ ಅನುದಾನ ಕೇಳಿದ್ದೆವು ಅವರು ಐದು ಕೋಟಿ ಅನುದಾನ ನೀಡಿದ್ದು ಇದರಲ್ಲಿ ಗುಂಡ್ಲುಪೇಟೆ ಎಪಿಎಂಸಿ ಗೆ ಮೂರು ಕೋಟಿ ಅರವತ್ತು ಲಕ್ಷದಲ್ಲಿ ಅಭಿವೃದ್ಧಿ ಮತ್ತು ತೆರಕಣಾಂಬಿ ಎಪಿಎಂಸಿ ಅಭಿವೃದ್ಧಿ ಗೆ ಒಂದು ಕೋಟಿ ಅರವತ್ತು ಲಕ್ಷದಲ್ಲಿ ಗುದ್ದಲಿಪೂಜೆ ಮಾಡಿದ್ದು ಎಪಿಎಂಸಿ ಆವರಣದಲ್ಲಿ ಡಕ್ ಮತ್ತು ಸ್ಲ್ಯಾಬ್ ಸಿಸಿ ರಸ್ತೆ ಚರಂಡಿ ನಿರ್ಮಾಣ ಮಾಡಲಾಗುತ್ತದೆ ಎಂದರು. ಚಾಮುಲ್ ನಿರ್ದೇಶಕ ನಂಜುಂಡಪ್ರಸಾದ್, ಎಪಿಎಂಸಿ ಅಧ್ಯಕ್ಷ ನಾಗರಾಜು ಉಪಾಧ್ಯಕ್ಷ ರಾಜು ಕಲ್ಲಿಗೌಡನಹಳ್ಳಿ, ಮಾಜಿ ಜಿ.ಪಂ ಉಪಾಧ್ಯಕ್ಷ ಕೆ ಎಸ್ ಮಹೇಶ್ ,ಮಹದೇವಪ್ಪ ತೆರಕಣಾಂಬಿ, ವಿರೂಪಾಕ್ಷ, ಶಿವನಾಗಪ್ಪ, ನಂಜಪ್ಪ, ಮೃತ್ಯುಂಜಯ, ಕರಿನಾಯಕ, ಜಲೇಂದ್ರ, ಮನು, ನಿಖಿಲ್, ರವಿ, ರಾಮಣ್ಣ, ಮಹದೇವಪ್ಪ, ಬಾಗ್ಯಮ್ಮ ಎಪಿಎಂಸಿ ಕಾರ್ಯದರ್ಶಿ ಶ್ರೀಧರ್ ಮತ್ತಿತರರಿದ್ದರು.

# ಜಮೀನಿಗೆ ಹೋಗಲು ರಸ್ತೆ ಕಲ್ಪಿಸಿ

ಚಾಮರಾಜನಗರ : ತಮ್ಮಜಮೀನುಗಳಿಗೆ ಹೋಗಿ ಬರಲು ರಸ್ತೆ ಕಲ್ಪಿಸಿಕೊಡಬೇಕು ಎಂದು ತಾಲೂಕಿನ ಕೋಡಿಉಗನೆ ಗ್ರಾಮದ ರೈತರು ಒತ್ತಾಯಿಸಿದರು.

ಗ್ರಾಮದ ಬೇವಿನತಾಳಪುರ ರಸ್ತೆಯ ಬದಿಯಲ್ಲಿ ಬರುವ ಜಮೀನುಗಳಿಗೆ ಸೂಕ್ತ ರಸ್ತೆಯಿಲ್ಲದೆ ಜಮೀನುಗಳಿಗೆ ಕೃಷಿ ಚಟುವಟಿಕೆಗೆ ಬೆಳೆದ ಪದಾರ್ಥಗಳನ್ನು ಮಾರುಕಟ್ಟೆ ಗೆ ಸಾಗಿಲು, ಕೃಷಿಗೆ ಗೊಬ್ಬರ ತರಲು ಟ್ರಾಕ್ಟರ್, ಎತ್ತಿನಗಾಡಿ , ಆಟೋ ಬರಲು ಕಷ್ಟವಾಗುತ್ತದೆ. ಆಗಾಗಿ ನಮಗೆ ಅನುಕೂಲವಾಗುವಂತೆ ಸೂಕ್ತ ರಸ್ತೆ ನಿರ್ಮಿಸಿಕೊಡಬೇಕು ಎಂದು ರೈತರು ಸರ್ಕಾರವನ್ನು ಒತ್ತಾಯಿಸಿದರು.

ಮಳೆ ಬಂದರೆ ಈ ಓಣಿಯಲ್ಲಿ ಆಳೆತ್ತರ ನೀರು ನಿಲ್ಲುತ್ತದೆ. ಚಿಕ್ಕಹೊಳೆ ಪ್ರವಾಸ ಬಂದರೆ ಸಂಪೂರ್ಣ ಮುಳುಗುತ್ತದೆ. ನಾವು ಜಮೀನು, ತೋಟದಲ್ಲಿ ಮನೆ ಕಟ್ಟಿಕೊಂಡು ವಾಸಮಾಡುತ್ತೇವೆ. ಒಂದು ಕಡೆ ಕಾಡು ಪ್ರಾಣಿ ಕಾಟವಿದ್ದು, ಭಯದಿಂದ ಜೀವನ ಸಾಗಿಸಬೇಕಾಗಿದೆ. ಹುಷಾರಿಲ್ಲದಿದ್ದರೆ ಒಂದು ಆ?ಯಂಬುಲೆನ್ಸ್ ಬರುವಷ್ಟು ರಸ್ತೆ ಇಲ್ಲ. ಆಗಾಗಿ ಸೂಕ್ತ ರಸ್ತೆ ಕಲ್ಪಿಸಿ ಕೊಡುವಂತೆ ರೈತರಾದ ರೇಗನ್, ಮೇರಿಪುಷ್ಪಾ, ಲಕ್ಷ್ಮೀ ಆಗ್ರಹಿಸಿದರು.



ಛಲವಾದಿ ಮಹಾಸಭಾ ಜಿಲ್ಲಾ ಗೌರವಾಧ್ಯಕ್ಷ ಮಹದೇವಯ್ಯ ಮಾತನಾಡಿ,: ಬಿಸಲವಾಡಿ ಗ್ರಾ.ಪಂ. ಯು ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯ 2024-25ನೇ ಸಾಲಿನಲ್ಲಿ ಕೋಡಿಉಗನೆ ಗ್ರಾಮದ ಬಂಗಾರಿ ಜಮೀನಿನಿಂದ ಮಲ್ಲೇಶ್ ಜಮೀನಿನ ತನಕ ಕಾಲುವೆ ಸಮಗ್ರ ಅಭಿವೃದ್ಧಿ ಮಾಡಲಾಗಿದೆ ಎಂದು ಕಾಮಗಾರಿ ನಾಮಫಲಕ ಹಾಕಲಾಗಿದೆ ಹೊರತು ಯಾವುದೇ ಕಾಮಗಾರಿ ಮಾಡಿಲ್ಲ. ಇದರ ಬಗ್ಗೆ ಪಿಡಿಓಗೆ ಮನವಿ ಸಲ್ಲಿಸಲಾಗಿದೆ ಯಾವುದೇ ಪ್ರಯೋಜನವಾಗಲಿಲ್ಲ. ಸ್ಥಳಕ್ಕೆ ತಾ.ಪಂ. ಇಓ, ಜಿ.ಪಂ ಸಿಇಓ ಭೇಟಿ ನೀಡಿ ಪರಿಶೀಲಿಸಿ ಕ್ರಮಕೈಗೊಳ್ಳಬೇಕು ಇಲ್ಲದಿದ್ದರೆ ರೈತರೊಂದಿಗೆ ಜಿಲ್ಲಾಡಳಿತ ಭವನದ ಎದುರು ಹೋರಾಟ ಮಾಡುವುದಾಗಿ ಎಚ್ಚರಿಸಿದರು.

# ಭವ್ಯ ಟಾರ್ಚ್‌ಲೈಟ್ ಮೆರವಣಿಗೆ

## ಮತದಾರರ ಪಟ್ಟಿ ಪರಿಷ್ಕರಣೆ ಜಾಗೃತಿ | ಗಮನ ಸೆಳೆದ ಎಸ್.ಐ.ಆರ್ ಚಿತ್ತಾರ

ಚಾಮರಾಜನಗರ: ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಜಿಲ್ಲೆಯ ನಾಗರಿಕರಲ್ಲಿ ವ್ಯಾಪಕ ಜನಜಾಗೃತಿ ಮೂಡಿಸುವ ಸಲುವಾಗಿ ಚಾಮರಾಜನಗರದಲ್ಲಿ ಹಮ್ಮಿಕೊಂಡಿದ್ದ ಆಕರ್ಷಕ ಟಾರ್ಚ್ ಲೈಟ್ ಮೆರವಣಿಗೆಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ಮೋನಾ ರೋತ್ ಅಧಿಕೃತವಾಗಿ ಚಾಲನೆ ನೀಡಿದರು.

ನಗರದ ಐತಿಹಾಸಿಕ ಶ್ರೀ ಚಾಮರಾಜೇಶ್ವರ ದೇವಾಸ್ಥಾನದ ಆವರಣದಲ್ಲಿ ಜಮಾಯಿಸಿದ ಜಿಲ್ಲಾಡಳಿತ ಭವನದ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಾರ್ವಜನಿಕರು ಒಟ್ಟಾಗಿ ತಮ್ಮ ಮೊಬೈಲ್ ಟಾರ್ಚ್ ಲೈಟ್ ಆನ್ ಮಾಡುವ ಮೂಲಕ 'ಎಸ್.ಐ.ಆರ್' (ಖIಖ) ಆಕಾರದಲ್ಲಿ ನಿಂತು ವಿಶಿಷ್ಟ ಚಿತ್ತಾರ ಮೂಡಿಸಿದರು. ಈ ಅಪರೂಪದ ದೃಶ್ಯವು ನೆರೆದಿದ್ದ ಎಲ್ಲರ ಗಮನ ಸೆಳೆಯುವಲ್ಲಿ ಯಶಸ್ವಿಯಾಯಿತು.




### ಮತದಾರರ ಪಟ್ಟಿ ಪರಿಷ್ಕರಣೆಯ ಪ್ರಮುಖ ದಿನಾಂಕಗಳ ವಿವರ

ಈ ಬಾರಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯಕ್ಕೆ ಅಕ್ಟೋಬರ್ 01, 2026 ಅನ್ನು ಅರ್ಹತಾ ದಿನಾಂಕವಾಗಿ ಪರಿಗಣಿಸಲಾಗಿದೆ. ಇದರ ಅಂಗವಾಗಿ ಜೂನ್ 30 ರಿಂದ ಜುಲೈ 29 ರವರೆಗೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ ಮನೆಗೆ ಭೇಟಿ ನೀಡಿ ಕಡ್ಡಾಯ ಪರಿಶೀಲನೆ ನಡೆಸಲಿದ್ದಾರೆ. ಇದೇ ಜುಲೈ 29 ರೊಳಗೆ ಮತಗಟ್ಟೆಗಳ ಪುನರ್ ವಿಂಗಡಣೆ ಕಾರ್ಯವೂ ಪೂರ್ಣಗೊಳ್ಳಲಿದ್ದು, ಆಗಸ್ಟ್ 5 ರಂದು ಕರಡು ಮತದಾರರ ಪಟ್ಟಿಯನ್ನು ಅಧಿಕೃತವಾಗಿ ಪ್ರಕಟಿಸಲಾಗುತ್ತದೆ. ಸಾರ್ವಜನಿಕರು ತಮ್ಮ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಆಗಸ್ಟ್ 5 ರಿಂದ ಸೆಪ್ಟೆಂಬರ್ 4 ರವರೆಗೆ ಕಾಲಾವಕಾಶ ನೀಡಲಾಗಿದೆ. ಸ್ವೀಕೃತವಾದ ಆಕ್ಷೇಪಣೆಗಳನ್ನು ಅಕ್ಟೋಬರ್ 3 ರೊಳಗೆ ಸಂಪೂರ್ಣವಾಗಿ ವಿಲೇವಾರಿ ಮಾಡಿ, ಅಂತಿಮವಾಗಿ ಅಕ್ಟೋಬರ್ 7 ರಂದು ಪರಿಷ್ಕೃತ ಅಧಿಕೃತ ಮತದಾರರ ಪಟ್ಟಿಯನ್ನು ಬಿಡುಗಡೆ ಮಾಡಲಾಗುವುದು ಎಂದು ಮೋನಾ ರೋತ್ ವಿವರಿಸಿದರು.

### ಜಾಥಾದಲ್ಲಿ ಭಾಗವಹಿಸಿದ ಗಣ್ಯರು

ಈ ಪ್ರಮುಖ ಜಾಗೃತಿ ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ. ಮುತ್ತುರಾಜು, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಎ.ನ್. ಶಶಿಧರ್ ಹಾಗೂ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಡಿ.ಸಿ. ಶೃತಿ ಅವರು ಉಪಸ್ಥಿತರಿದ್ದರು. ಇವರೊಂದಿಗೆ ನಗರಸಭೆ ಪೌರಾಯುಕ್ತ ಪರಶುರಾಮ್ ಛಲವಾದಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಹಿರಿಯ ಅಧಿಕಾರಿಗಳು ಮತ್ತು ನೂರಾರು ಸಿಬ್ಬಂದಿಗಳು ಸಕ್ರಿಯವಾಗಿ ಪಾಲ್ಗೊಂಡಿದ್ದರು.

### 18 ವರ್ಷ ತುಂಬಿದ ಯುವಕರಿಗೆ ಮತದಾನದ ಹಕ್ಕು

ಶ್ರೀ ಚಾಮರಾಜೇಶ್ವರ ದೇವಸ್ಥಾನದಿಂದ ಆರಂಭವಾದ ಈ ಭವ್ಯ ಜಾಗೃತಿ ಜಾಥಾವು ನಗರದ ಪ್ರಮುಖ ರಸ್ತೆಗಳ ಮೂಲಕ ಸಾಗಿ ಜಿಲ್ಲಾಡಳಿತ ಭವನದ ಆವರಣದಲ್ಲಿ ಮುಕ್ತಾಯಗೊಂಡಿತು. ತದನಂತರ ಮಾತನಾಡಿದ ಹೆಚ್ಚುವರಿ ಜಿಲ್ಲಾಧಿಕಾರಿ ಟಿ.ಜವರೇಗೌಡ ಅವರು, 2026ರ ಅಕ್ಟೋಬರ್ 1ರ ಅನ್ವಯ ಹೊಸದಾಗಿ 18 ವರ್ಷ ತುಂಬುವ ಪ್ರತಿಯೊಬ್ಬ ಯುವಕ-ಯುವತಿಯರು ಕಡ್ಡಾಯ ವಾಗಿ ತಮ್ಮ ಹೆಸರನ್ನು ಮತದಾರರ ಪಟ್ಟಿಗೆ ಸೇರ್ಪಡೆ ಮಾಡಿಸಬೇಕು ಎಂದರು. ಈ ನಿಟ್ಟಿನಲ್ಲಿ ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವುದೇ ಇಂದಿನ ಮೆರವಣಿಗೆಯ ಮುಖ್ಯ ಉದ್ದೇಶವಾಗಿದ್ದು, ಜಿಲ್ಲೆಯಲ್ಲಿ ಈ ಮಹತ್ಕಾರ್ಯವು ಯಶಸ್ವಿಯಾಗಲಿ ಎಂದು ಹಾರೈಸಿದರು.

### ನಿಷ್ಪಕ್ಷಪಾತ ಚುನಾವಣೆಗೆ ಪರಿಷ್ಕರಣೆ ಅತ್ಯಗತ್ಯ

ಮೆರವಣಿಗೆ ಉದ್ದೇಶಿಸಿ ಮಾತನಾಡಿದ ಜಿ.ಪಂ. ಸಿಇಒ ಮೋನಾ ರೋತ್ ಅವರು, ಭಾರತ ಚುನಾವಣಾ ಆಯೋಗದ ಕಟ್ಟುನಿಟ್ಟಿನ ನಿರ್ದೇಶನದ ಮೇರೆಗೆ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ಹಮ್ಮಿಕೊಳ್ಳಲಾಗಿದೆ ಎಂದರು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮುಕ್ತ ಹಾಗೂ ನಿಷ್ಪಕ್ಷಪಾತವಾಗಿ ಚುನಾವಣೆಗಳನ್ನು ನಡೆಸಲು ಮತದಾರರ ಪಟ್ಟಿಯ ವಿಶ್ವಾಸಾರ್ಹತೆಯನ್ನು ಕಾಪಾಡಿಕೊಳ್ಳುವುದು ಅತ್ಯಂತ ಪ್ರಮುಖವಾಗಿದೆ. ಈ ನಿಟ್ಟಿನಲ್ಲಿ ಸಾರ್ವಜನಿಕರಲ್ಲಿ ಹೆಚ್ಚಿನ ಅರಿವು ಮೂಡಿಸಲು ಈ ವಿಶಿಷ್ಟ ಟಾರ್ಚ್ ಲೈಟ್ ಮೆರವಣಿಗೆಯನ್ನು ಆಯೋಜಿಸಲಾಗಿದೆ ಎಂದು ಅವರು ಸ್ಪಷ್ಟಪಡಿಸಿದರು.

# ಸ್ವಸಹಾಯ ಸಂಘಗಳಿಗೆ 93 ಲಕ್ಷ ಸಾಲ ವಿತರಣೆ

ಗುಂಡ್ಲುಪೇಟೆ: ತಾಲ್ಲೂಕಿನ ಶೆಟ್ಟಹಳ್ಳಿ ಕೃಷಿಪತ್ತಿನ ಸಹಕಾರ ಸಂಘದಿಂದ ಹದಿನಾಲ್ಕು ಮಹಿಳಾ ಸ್ವಸಹಾಯ ಸಂಘಗಳಿಗೆ ಹಾಗೂ ಒಂದು ಪುರುಷ ಸ್ವಸಹಾಯ ಸಂಘದ ಸದಸ್ಯರಿಗೆ ಸುಮಾರು 93 ಲಕ್ಷ ಸಾಲ ವಿತರಣೆಯ ಚೆಕ್ ಅನ್ನು ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿರ್ದೇಶಕ ಶಾಸಕ ಎಚ್ ಎಂ ಗಣೇಶ್ ಪ್ರಸಾದ್ ವಿತರಣೆ ಮಾಡಿದರು.

ನಂತರ ಮಾತನಾಡಿದ ಶಾಸಕ ಗಣೇಶ್ ಪ್ರಸಾದ್ ಪಿಎಸಿಸಿಗಳಲ್ಲಿ ರೈತರು ಶೂನ್ಯ ಬಡ್ಡಿಯಲ್ಲಿ ಸಾಲ ಪಡೆದು ಸಕಾಲಕ್ಕೆ ಮರುಪಾವತಿಸುವ ಮೂಲಕಸಂಘದ ಬೆಳವಣಿಗೆಗೆ ಸಹಕರಿಸಬೇಕು ಮುಂದಿನ ದಿನಗಳಲ್ಲಿ ಹೆಚ್ಚಿನ ಸಾಲ ನೀಡುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಶೆಟ್ಟಹಳ್ಳಿ ಪಿಎಸಿಸಿ ಸಹಕಾರ ಸಂಘದ ಅಧ್ಯಕ್ಷ ಜಯರಾಂ ಆಲತ್ತೂರು, ನಿರ್ದೇಶಕರಾದ ಶಿವರಾಮು, ಕೆ ಸತೀಶ್, ಲೋಕೇಶ್, ಚಿಕ್ಕತಾಯಮ್ಮ, ತಾಯಮ್ಮ, ಗೋವಿಂದ ,ಮಲ್ಲೇಶ್, ಎಸ್ ಗಂಗಾಧರ್, ಎಂಡಿಸಿಸಿ ಬ್ಯಾಂಕ್ ವ್ಯವಸ್ಥಾಪಕ ಶಿವಪ್ರಸಾದ್, ಇದ್ದರು



# ಕೋಡಂಬಹಳ್ಳಿ ಡೈರಿ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ

**ಚನ್ನಪಟ್ಟಣ:** ತಾಲೂಕಿನ ಕೋಡಂಬಹಳ್ಳಿ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಆಡಳಿತ ಮಂಡಳಿಯ ನೂತನ ಅಧ್ಯಕ್ಷರಾಗಿ ಕೆ.ಆರ್. ಕುಮಾರ್, ಉಪಾಧ್ಯಕ್ಷರಾಗಿ ಶಿವಲಿಂಗೇಗೌಡ ಅವರು ಅವಿರೋಧವಾಗಿ ಆಯ್ಕೆಯಾದರು.



ಸಂಘದ ಅಧ್ಯಕ್ಷರಾದ ಕೆ.ಎಂ. ರಾಜು ಮತ್ತು ಉಪಾಧ್ಯಕ್ಷರಾದ ಟಿ. ಮಮತಾ ಅವರ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ ಮತ್ತು ಉಪಾ ಧ್ಯಕ್ಷ ಸ್ಥಾನಕ್ಕೆ ಗುರುವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಕೆ.ಆರ್.ಕುಮಾರ್, ಉಪಾಧ್ಯಕ್ಷ ಸ್ಥಾನಕ್ಕೆ ಶಿವಲಿಂಗೇಗೌಡ ಅವರು ಮಾತ್ರ ನಾಮಪತ್ರ ಸಲ್ಲಿಕೆ ಮಾಡಿದ್ದರಿಂದ ಚುನಾವಣಾಧಿಕಾ ರಿಗಳಾಗಿ ಕರ್ತವ್ಯ ನಿರ್ವಹಿಸಿದ್ದ ಸಹಕಾರಿ ಇಲಾಖೆಯ ರಮ್ಯಶ್ರೀ ಅವರು ಇವರ ಅವಿರೋಧ ಆಯ್ಕೆಯನ್ನು ಘೋಷಣೆ ಮಾಡಿದರು. ಸಂಘದ ಸಿಇಒ ಯಶವಂತ್‌ಕುಮಾರ್ ಸಾಥ್ ನೀಡಿದರು. ಹಾಲು ಪರೀಕ್ಷಕ ಹುಚ್ಚೇಗೌಡ, ಕೆ.ಸಿ.ಸಚಿನ್ ಸಹಕರಿಸಿದರು. ಚುನಾವಣೆಯಲ್ಲಿ ಸಂಘದ ನಿರ್ದೇಶಕರುಗಳಾದ ಕೆ.ಸಿ. ರಾಜು, ಕೆ.ಎಂ. ರಾಜು, ಕೆ. ಗೋಪಾಲ್, ಮಮತಾ ಟಿ, ಮಂಗಳಮ್ಮ ಮತ್ತು ಅಪ್ಪಾಜಿ, ಮಲ್ಲೇಶ್, ಕೆ.ಸಿ. ಸುರೇಶ್, ಕೆ.ಆರ್. ಚಂದ್ರುಶೇಖರ್, ಕೆ.ಎಂ. ಮಹೇಂದ್ರ ಅವರು ಭಾಗಿಯಾಗಿ ನೂತನ ಅಧ್ಯಕ್ಷ-ಉಪಾಧ್ಯಕ್ಷರ ಅವಿರೋಧ ಆಯ್ಕೆಗೆ ಬೆಂಬಲ ಸೂಚಿಸಿದರು.


**ಶ್ಲಾಘನೆ:** ಕೋಡಂಬಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿದ್ದ ಕೆ.ಎಂ. ರಾಜು ಮತ್ತು ಉಪಾಧ್ಯಕ್ಷರಾಗಿದ್ದ ಟಿ. ಮಮತಾ ಅವರು ಎರಡು ವರ್ಷದ ಅವಧಿಗೆ ಅಧಿಕಾರ ಹಂಚಿಕೆ ಒಡಂಬಡಿಕೆ ಮಾಡಿಕೊಂಡಿದ್ದರು. ಇದೀಗ ಅವರ ಅವಧಿ ಮುಗಿದ ನಿಟ್ಟಿನಲ್ಲಿ ರಾಜೀನಾಮೆ ನೀಡಿ ಬೇರೆಯವರಿಗೆ ಅವರಕಾಶ ಮಾಡಿಕೊಟ್ಟು ಸಹಕಾರಿ ತತ್ವಕ್ಕೆ ಸಾಕ್ಷಿಯಾಗಿದ್ದಾರೆ ಎಂದು ಶ್ಲಾಘನೆ ಮಾಡಿದ್ದಾರೆ.

**ಅಭಿವೃದ್ಧಿಗೆ ಶ್ರಮಿಸುತ್ತೇವೆ:** ಸಂಘದ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಕೆ.ಆರ್. ಕುಮಾರ್ ಅವರು ಮಾತನಾಡಿ, ನಮ್ಮನ್ನು ಅವಿರೋಧವಾಗಿ ಆಯ್ಕೆ ಮಾಡಲು ಸಹಕರಿಸಿದ ಸಂಘದ ಎಲ್ಲಾ ನಿರ್ದೇಶಕರಿಗೆ ಹಾಗೂ ಈ ಭಾಗದ ಮುಖಂಡರಿಗೆ, ಯಜಮಾನರಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು. ಸಂಘದ ಸದಸ್ಯರಿಗೆ ಹೈನೋದ್ಯಮಕ್ಕೆ ಅನುಕೂಲ ಆಗುವ ನಿಟ್ಟಿನಲ್ಲಿ ಬಮೂಲ್ ಕಲ್ಯಾಣ ಟ್ರಸ್ಟ್‌ನಿಂದ ಸಿಗುವ ಎಲ್ಲಾ ಸೌಲಭ್ಯಗಳನ್ನು ಕೊಡಿಸುವ ಜೊತೆಗೆ ಸಂಘದ ಅಭಿವೃದ್ಧಿಗೆ ಶ್ರಮಿಸುವುದಾಗಿ ಭರವಸೆ ನೀಡಿದರು.

**ಅಭಿನಂದನೆ:** ಸಂಘದ ನೂತನ ಅಧ್ಯಕ್ಷ-ಉಪಾಧ್ಯಕ್ಷರನ್ನು ಮುಖಂಡರಾದ ಕೆ.ಪಿ. ಮಹೇಂದ್ರ, ರಂಗ, ಪಟೇಲ್ ಕೆ.ಟಿ. ಶ್ರೀನಿವಾಸ್, ತಮ್ಮಯ್ಯ, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಮದ್ದೂರಯ್ಯ, ಬೀರೇಶ್, ಹಾಗೂ ಪತ್ರಿಕೆ ವಿಚಾರಕ ಆದರ್ಶ, ಕೋಣಪ್ಪ, ಕಿರಣ್ ಶಿವರಾಮ, ಡಾಕ್ಟರ್ ಮಧು ಮುಂತಾದವರು ಅಭಿನಂದಿಸಿದರು.

# ಕೆಲವರಿಂದ ವೈಯುಕ್ತಿಕವಾಗಿ ತೇಜೋವಧೆ

ಮೈಸೂರು: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಕಡಗ ತೊಡಿಸಿದ ಪ್ರಸಂಗವನ್ನೇ ಮುಂದಿಟ್ಟುಕೊಂಡು ಕೆಲವು ಕೊಳಕು ಮನಸ್ಥಿತಿಗಳು ನನ್ನ ಕ್ಷೇತ್ರದಲ್ಲಿ ಒಕ್ಕಲಿಗರು ಮತ್ತು ಕುರುಬರ ನಡುವೆ ಎತ್ತಿ ಕಟ್ಟುವ ಕೆಲಸ ಮಾಡುತ್ತಿದ್ದಾರೆ. ಇದರ ಸುಪಾರಿ ಪಡೆದಿರುವ ಕೆಲ ಸಾಮಾಜಿಕ ಮಾಧ್ಯಮಗಳು ನನ್ನ ವೈಯಕ್ತಿಕ ತೇಜೋವಧೆಯಲ್ಲಿ ತೊಡಗಿವೆ ಎಂದು ಹುಣಸೂರಿನ ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್ ಆರೋಪಿಸಿದರು.



ನಗರದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಮತ್ತು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯಗೆ ಪ್ರೀತಿ ಪೂರ್ವಕವಾಗಿ ಚಿನ್ನ ಲೇಪಿತ ಬೆಳ್ಳಿ ಕಡಗವನ್ನು ತೊಡಿಸಿ ಶುಭಕೋರಿದ್ದೇನೆ. ಆದರೆ, ಕೆಲ ಸಾಮಾಜಿಕ ಮಾಧ್ಯಮದಲ್ಲಿ ಸಿಎಂ ಚಿನ್ನ, ಸಚಿವರಿಗೆ ಬೆಳ್ಳಿ ಎಂದು ಬಿಂಬಿಸಿ ಒಂದು ಸಮುದಾಯದ ಭಾವನೆಕ್ಕೆ ಧಕ್ಕೆ ತರಲಾಗಿದೆ. ಕೊಡುಗೆ ಕಟ್ಟಿರುವುದನ್ನೇ ಮುಂದಿಟ್ಟುಕೊಂಡು ಕೊಳಕು ರಾಜಕೀಯ ಮಾಡುತ್ತಿದ್ದಾರೆ. ಸುಪಾರಿ ಕಿಲ್ಲರ್‌ಗಳಂತೆ ವರ್ತಿಸುತ್ತಿರುವ ಕೆಲ ಸಾಮಾಜಿಕ ಮಾಧ್ಯಮಗಳ ವಿರುದ್ಧ ಕಾನೂನು ಮೂಲಕ ಉತ್ತರ ಕೊಡುತ್ತೇನೆ. ಆದರೆ, ಹುಣಸೂರು ಕ್ಷೇತ್ರದ ಕೆಲ ವ್ಯಕ್ತಿಗಳು ನಾನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಗೆ ಚಿನ್ನದ ಕಡಗ ಮತ್ತು ಸಚಿವ ಡಾ.ಯತೀಂದ್ರ ಅವರಿಗೆ ಬೆಳ್ಳಿಯ ಕಡಗ ತೊಡಿಸಿ ತಾರತಮ್ಯ ಮತ್ತು ಅವಮಾನ ಮಾಡಿದ್ದೇನೆ ಎಂಬಂತೆ ಬಿಂಬಿಸಿ ಒಂದು ವರ್ಗದ ಜನರ ಭಾವನೆಗೆ ಧಕ್ಕೆ ತರುವ ಕೆಲಸ ಮಾಡುತ್ತಿದ್ದಾರೆ. ಇದು ಅವರ ಕೊಳಕು ಮನಸ್ಥಿತಿಯನ್ನು ತೋರುತ್ತದೆ. ಈ ಸಂಬಂಧ ಕುರುಬ ಸಮುದಾಯದ ರಾಜ್ಯ ಮತ್ತು ಸ್ಥಳೀಯ ನಾಯಕರ ಸಲಹೆ ಮೇರೆಗೆ ಸ್ಪಷ್ಟೀಕರಣ ನೀಡುತ್ತಿದ್ದೇನೆ ಎಂದು ತಿಳಿಸಿದರು.

ಮುಂದಿನ ಚುನಾವಣೆಯಲ್ಲಿ ನಾನು ಹುಣಸೂರು ಕ್ಷೇತ್ರದಿಂದ ಮತ್ತೆ ಸ್ಪರ್ಧೆ ಮಾಡುತ್ತೇನೆ. ನನ್ನ 15 ವರ್ಷಗಳ ಸೇವೆಯನ್ನು ಕ್ಷೇತ್ರದ ಜನರು ಮರೆತಿಲ್ಲ. ನನ್ನ ಸೇವೆ ಅಗತ್ಯವಿದ್ದರೆ ಅವರು ನನ್ನನ್ನು ಗೆಲ್ಲಿಸಿಕೊಳ್ಳುತ್ತಾರೆ. ನಾನು ಈವರೆಗೆ ಮಾಡಿರುವ ಜನಪರ ಕೆಲಸಗಳು, ವಿದ್ಯಾರ್ಥಿಗಳಿಗೆ ಮಾಡಿರುವ ಸಹಾಯ ಎಲ್ಲರಿಗೂ ಗೊತ್ತಿದೆ. ಚಿನ್ನ, ಬೆಳ್ಳಿ ಉಡುಗೆರೆ ಕೊಡುವುದು ನನಗೇನು ಹೊಸದಲ್ಲ. ಆದರೆ, ನನ್ನ ಒಳ್ಳೆಯ ಕೆಲಸಗಳನ್ನು ಸಹಿಸದ ವಿರೋಧಿಗಳು ಸಣ್ಣ-ಸಣ್ಣ ವಿಷಯಗಳಲ್ಲಿ ಕೆಟ್ಟ ರಾಜಕೀಯ ಮಾಡುತ್ತಿದ್ದಾರೆ ಎಂದು ದೂರಿದರು.

## ಎಚ್.ಸಿ.ನರಸಿಂಹಮೂರ್ತಿ ಸ್ಪಷ್ಟನೆ

# ನನ್ನ ಮೇಲಿನ ಆರೋಪ ಸತ್ಯಕ್ಕೆ ದೂರ

ಎಚ್.ಡಿ.ಕೋಟೆ: ಯಾರ ಜಮೀನನ್ನು ನಾನು ಕಬಳಿಸಲು ಮುಂದಾಗಿಲ್ಲ. ನಾನಾಗಲಿ ನನ್ನ ಸಹೋದರನಾಗಲಿ ಯಾವುದೇ ಭೂ ವ್ಯಾಜ್ಯದಲ್ಲೂ ಭಾಗವಹಿಸಿಲ್ಲ. ಮಂಗಳವಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಡೆಸಿದ ಸಾರ್ವಜನಿಕರ ಅಹವಾಲು ಸ್ವೀಕಾರದಲ್ಲಿ ನನ್ನ ಮೇಲೆ ಆರೋಪ ಮಾಡಿರುವುದು ಸತ್ಯಕ್ಕೆ ದೂರವಾದದ್ದು ಎಂದು ಎಚ್.ಸಿ.ನರಸಿಂಹಮೂರ್ತಿ ಸ್ಪಷ್ಟನೆ ನೀಡಿದರು.



ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ನನ್ನ ಮೇಲೆ ಆರೋಪ ಮಾಡಿದ ನಿಂಗರಾಜಮ್ಮ ಬನವಾಡಿ ಗ್ರಾಮದವರಲ್ಲ. ವಂಶವೃಕ್ಷ ಬದಲಯಿಸಿ ಅವರೆ ಅಕ್ರಮ ಎಸಗಿದ್ದಾರೆ. ಬನವಾಡಿ ಗ್ರಾಮದಲ್ಲಿ ನಿಂಗರಾಜಮ್ಮನ ಕುಟುಂಬಕ್ಕೆ ಸೇರಿದ 4.9 ಎಕರೆ ಜಮೀನಿದೆ. ಆದರೆ, ಪಕ್ಕದಲ್ಲಿರುವ ಸುಮಾರು 12ರಿಂದ 13 ಎಕರೆ ಜಮೀನುಗಳನ್ನು ಇವರೇ ಒತ್ತುವರಿ ಮಾಡಿಕೊಂಡು ದಬ್ಬಾಳಿಕೆ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಬನವಾಡಿ ಗ್ರಾಮದ ವಾಸಿಗಳಿಗೆ ಅಂದಿನ ಕಂದಾಯ ಮಂತ್ರಿಯಾಗಿದ್ದ ರಾಚಯ್ಯ ಅವರು 3,4,5 ಎಕರೆ ಜಮೀನು ನೀಡಿ ಸಾಗುವಳಿ ಪತ್ರ ನೀಡಿದ್ದರು. ಹುಣಸೂರಿನ ರತ್ನಪುರಿ ಗ್ರಾಮದಲ್ಲಿದ್ದ ಲಕ್ಕಪ್ಪಸ್ವಾಮೀಜಿ ಅವರ ಮತ್ತು ಅವರ ಕುಟುಂಬಕ್ಕೆ ಸರ್ಕಾರ ನೀಡಿದ್ದ ಜಮೀನಿನಲ್ಲಿ ಅಂತರಾಷ್ಟ್ರೀಯ ಬೌದ್ಧ ವಿಹಾರ ನಿರ್ಮಾಣ ಮಾಡಲು ಮುಂದಾಗಿದ್ದೇವೆ ಹೊರತು ಯಾರ ಆಸ್ತಿಯನ್ನೂ ನಾನು ಕಬಳಿಸುವ ಉದ್ದೇಶವಿಲ್ಲ ಎಂದು ಎಚ್.ಸಿ.ನರಸಿಂಹಮೂರ್ತಿ ತಿಳಿಸಿದರು.ನಿಂಗರಾಜಮ್ಮ ಮೂಲತ್ಹ ಕಾಳೀಹುಂಡಿ ಗ್ರಾಮದವರು. ಅಲ್ಲಿ ಅಶಾಂತಿ ಸೃಷ್ಟಿಸಿ ಇದೀಗ, ಬನವಾಡಿ ಗ್ರಾಮದಲ್ಲಿ ನೆಲೆಸಿ ಗೊಂದಲ ಸೃಷ್ಟಿಸುತ್ತಿದ್ದಾರೆ. ಈ ಗ್ರಾಮದಲ್ಲಿ ನಕ್ಷೆಯಲ್ಲಿರುವ ಸರ್ಕಾರದ ರಸ್ತೆ ಮೇಲೆ ಮನೆ ಹಾಗೂ ಕೊಟ್ಟಿಗೆ ನಿರ್ಮಾಣ ಮಾಡಿಕೊಂಡಿದ್ದಾರೆ. ಸಾರ್ವಜನಿಕ ಸ್ಮಶಾನವನ್ನೂ ಆಕ್ರಮಿಸಿಕೊಂಡು ಗ್ರಾಮಸ್ಥರಿಗೆ ತೊಂದರೆ ನೀಡುತ್ತಿದ್ದಾರೆ. ಬೌದ್ಧ ವಿಹಾರ ನಿರ್ಮಾಣ ಮಾಡಿದರೆ, ಆಕ್ರಮಿಸಿಕೊಂಡಿರುವ ಅನ್ಯರ ಜಮೀನನ್ನು ಬಿಡಬೇಕಾಗುತ್ತದೆ ಎಂಬ ದುರುದ್ದೇಶದಿಂದ ಈ ರೀತಿ ನಾಟಕಮಾಡಿ ನನ್ನ ಮೇಲಿಯೇ ಆರೋಪ ಮಾಡುತ್ತಿದ್ದಾರೆ. ಈ ಗ್ರಾಮದಲ್ಲಿ ನನಗಾಗಲಿ, ನನ್ನ ಕುಟುಂಬಕ್ಕಾಗಲೀ ಒಂದಿಂಚು ಜಾಗವಿದ್ದರೆ ನಾನು ದೇಶ ಬಿಟ್ಟು ಹೋಗುತ್ತೇನೆ ಎಂದು ಹೇಳಿದರು.

# ನಿಮ್ಮ ಜೀವನಶೈಲಿಗೆ ಹೊಂದುವ ಯೋಗ ಯಾವುದು?

ಅಧ್ಯಾಯ 2



| ರೂಪ ಮಂಜುನಾಥ ಹೊಳೆನರಸೀಪುರ



ಮೊದಲ ಭಾಗದಲ್ಲಿ ನಾವು ಯೋಗವು ಹೇಗೆ ಪ್ರಯೋಗಾಲಯಗಳನ್ನು ತಲುಪಿ ಜಾಗತಿಕವಾಗಿ ಮರುರೂಪುಗೊಳ್ಳುತ್ತಿದೆ ಎಂದು ನೋಡಿದ್ದೆವು. ಇಂದು ಯೋಗ ಎಂದರೆ ಕೇವಲ ಋಷಿಮುನಿಗಳಿಗಷ್ಟೇ ಸೀಮಿತವಾದ ಹಳೆಯ ಶಿಸ್ತಲ್ಲ. ಇಂದಿನ ಆಧುನಿಕ ಸಮಾಜದ ಅಗತ್ಯತೆಗಳು, ಕಾಯಿಲೆಗಳು ಮತ್ತು ಮಾನಸಿಕ ಒತ್ತಡಗಳಿಗೆ ತಕ್ಕಂತೆ ಯೋಗವು ಸಂಪೂರ್ಣವಾಗಿ ಬದಲಾಗಿದೆ. ನಿಮಗೊತ್ತಾ? ಇಂದಿನ ಜಗತ್ತಿನಲ್ಲಿ ಯೋಗವು ಎಷ್ಟು ಪ್ರಜಾಪ್ರಭುತ್ವೀಕರಣಗೊಂಡಿದೆ ಎಂದರೆ, ಪ್ರತಿಯೊಬ್ಬ ವ್ಯಕ್ತಿಯ ದೇಹ ಮತ್ತು ಮನಸ್ಸಿನ ಸ್ಥಿತಿಗೆ ತಕ್ಕಂತೆ ಯೋಗದ ಶೈಲಿಗಳು ಲಭ್ಯವಿವೆ.

ನಿಮ್ಮ ದೈನಂದಿನ ಜೀವನಶೈಲಿ, ವಯಸ್ಸು ಅಥವಾ ದೈಹಿಕ ಮಿತಿಗಳು ಏನೇ ಇರಲಿ, ಇಂದಿನ ಸಮಾಜದಲ್ಲಿ ಧೂಳೆಬ್ಬಿಸುತ್ತಿರುವ ಪ್ರಮುಖ ಮತ್ತು ವಿಭಿನ್ನ ಯೋಗ ಪ್ರಕಾರಗಳ ವಿಸ್ತಾರವಾದ ಪರಿಚಯ ಇಲ್ಲಿದೆ:

1. ಚೇರ್ ಯೋಗ (Chair Yoga)

"ನೆಲದ ಮೇಲೆ ಕೂರಲು ಆಗ್ತಿಲ್ಲ ಅನ್ನೋ ಚಿಂತೆ ಬಿಡಿ, ಕುರ್ಚಿಯಲ್ಲೇ ಕುಳಿತು ಆರೋಗ್ಯ ಪಡೆಯಿರಿ!"

**ಏನಿದು?:** ಹೆಸರೇ ಸೂಚಿಸುವಂತೆ, ಈ ಯೋಗ ಪ್ರಕಾರದಲ್ಲಿ ಚಾಪೆಯ ಮೇಲಲ್ಲ, ಬದಲಿಗೆ ಕುರ್ಚಿಯ ಮೇಲೆ ಕುಳಿತು ಅಥವಾ ಕುರ್ಚಿಯ ಬೆಂಬಲವನ್ನು ಪಡೆದು ಆಸನಗಳನ್ನು ಮಾಡಲಾಗುತ್ತದೆ. ಚೇರ್ ಯೋಗವನ್ನು (Chair Yoga) ಮೊಟ್ಟಮೊದಲ ಬಾರಿಗೆ ಪರಿಚಯಿಸಿದವರು ಲಕ್ಷ್ಮಿ ವೋಲ್ಕರ್ (Lakshmi Voelker) ಅವರು. 1982 ರಲ್ಲಿ ತಮ್ಮ ಸ್ನೇಹಿತರೊಬ್ಬರು ಸಂಧಿವಾತದಿಂದಾಗಿ (Arthritis) ಸಾಮಾನ್ಯ ಯೋಗಾಸನಗಳನ್ನು ಮಾಡಲು ಕಷ್ಟಪಡುತ್ತಿದ್ದದ್ದನ್ನು ನೋಡಿ, ಅವರು ಕುರ್ಚಿಯ ಸಹಾಯದಿಂದ ಮಾಡಬಹುದಾದ ಈ ಸರಳ ಯೋಗ ಪದ್ಧತಿಯನ್ನು ರೂಪಿಸಿದರು. ಶಾರೀರಿಕ ಮಿತಿಗಳನ್ನು ಹೊಂದಿರುವವರಿಗೂ ಯೋಗದ ಪ್ರಯೋಜನಗಳು ಸಿಗಲಿ ಎಂಬ ಉದ್ದೇಶದಿಂದ ಇದನ್ನು ಅಭಿವೃದ್ಧಿಪಡಿಸಲಾಯಿತು. ವಯೋಸಹಜ ಕಾರಣಗಳಿಂದಾಗಿ, ಕೀಲು ನೋವು ಅಥವಾ ಮಂಡಿ ನೋವಿನಿಂದ ನೆಲದ ಮೇಲೆ ಕುಳಿತುಕೊಳ್ಳಲು ಕಷ್ಟಪಡುವ ಹಿರಿಯ ನಾಗರಿಕರಿಗೆ, ಮತ್ತಾವುದೋ ಕಾರಣಗಳಿಂದ ಕೆಳಗೆ ಕೂರಲು ಆಗದವರಿಗೆ ಇದು ಒಂದು ಅದ್ಭುತ ವರ. ಚಲನೆಯ ಮಿತಿ ಇರುವವರಿಗೆ ಇದು ಯೋಗದ ಲಾಭವನ್ನು ಸುಲಭವಾಗಿ ತಲುಪಿಸುತ್ತದೆ.

ಇಂದು ಕಂಪ್ಯೂಟರ್ ಮುಂದೆ ಗಂಟೆಗಟ್ಟಲೆ ಕುತ್ತಿಗೆ, ಬೆನ್ನು ಬಗ್ಗಿಸಿ ಕೆಲಸ ಮಾಡುವ ಐಟಿ ಮತ್ತು ಸಾಫ್ಟ್‌ವೇರ್ ಉದ್ಯೋಗಿಗಳಲ್ಲಿ ಇದು 'ಡೆಸ್ಕ್ ಯೋಗ' (Desk Yoga) ಎಂಬ ಹೆಸರಿನಿಂದ ಭಾರಿ ಪ್ರಸಿದ್ಧಿಯಾಗುತ್ತಿದೆ. ಕಚೇರಿಯ ಕುರ್ಚಿಯಲ್ಲೇ ಕುಳಿತು ದಿನಕ್ಕೆ ಹತ್ತು ನಿಮಿಷ ಈ ಯೋಗ ಮಾಡುವುದರಿಂದ ಬೆನ್ನು ನೋವು ಮತ್ತು ಒತ್ತಡ ತಕ್ಷಣ ಮಾಯವಾಗುತ್ತದೆ!

2. ಪ್ರೆನೆಟಲ್ ಯೋಗ (Prenatal Yoga)

"ಒಬ್ಬಳಿಗಾಗಿಯೇ ಮಾಡುವ ಯೋಗ ಅಲ್ಲ, ಇಬ್ಬರ ಆರೋಗ್ಯಕ್ಕಾಗಿ ಮಾಡುವ ದೈವಿಕ ಯೋಗ!"

ಆಧುನಿಕ ಪ್ರೆನೆಟಲ್ ಯೋಗವನ್ನು (Prenatal Yoga - ಗರ್ಭಿಣಿಯರ ಯೋಗ) 1960 ರ ದಶಕದಲ್ಲಿ ಯೋಗಾಚಾರ್ಯ ಟಿ. ಕೃಷ್ಣಮಾಚಾರ್ಯ ಅವರು ಗರ್ಭಿಣಿಯರಿಗೆ ಸೂಕ್ತವಾದ ಆಸನಗಳನ್ನು ಗುರುತಿಸುವ ಮೂಲಕ ಮೊದಲು ಪ್ರಖ್ಯಾತಗೊಳಿಸಿದರು. ನಂತರ ಅವರ ಮಗಳಾದ ಗೀತಾ ಐಯ್ಯಂಗಾರ್ ಅವರು ಮತ್ತು ಪಾಶ್ಚಾತ್ಯ ಜಗತ್ತಿನಲ್ಲಿ ಫ್ರಾಂಕೋಯಿಸ್ ಬಾರ್ಬಿರಾ ಫ್ರೀಡ್‌ಮನ್ ರಂತಹ ತಜ್ಞರು ಗರ್ಭಾವಸ್ಥೆಯ ವಿವಿಧ ಹಂತಗಳಿಗೆ ಅನುಗುಣವಾಗಿ ಇದನ್ನು ವ್ಯವಸ್ಥಿತವಾಗಿ ಅಭಿವೃದ್ಧಿಪಡಿಸಿದರು. ಗರ್ಭಿಣಿಯರಲ್ಲಿ ದೈಹಿಕ ಸಾಮರ್ಥ್ಯ ಹೆಚ್ಚಿಸಲು ಮತ್ತು ಸುಲಭ ಹೆರಿಗೆಗೆ ಸಹಾಯ ಮಾಡಲು ಈ ವಿಶೇಷ ಯೋಗ ಪದ್ಧತಿಯನ್ನು ರೂಪಿಸಲಾಗಿದೆ.

ಗರ್ಭಾವಸ್ಥೆಯು ಮಹಿಳೆಯರ ಜೀವನದಲ್ಲಿ ದೈಹಿಕವಾಗಿ ಮತ್ತು ಭಾವನಾತ್ಮಕವಾಗಿ ಅತಿ ದೊಡ್ಡ ಬದಲಾವಣೆಗಳನ್ನು ತರುವ ಸಮಯ. ಗರ್ಭಿಣಿ ತಾಯಂದಿರಿಗಾಗಿ ಮತ್ತು ಅವರ ಗರ್ಭದಲ್ಲಿ ಬೆಳೆಯುತ್ತಿರುವ ಮಗುವಿನ ರಕ್ಷಣೆಗಾಗಿಯೇ ವಿಶೇಷವಾಗಿ ರೂಪಿಸಲಾದ ಯೋಗಾಭ್ಯಾಸದ ಶೈಲಿ ಇದು.

ನಿರೀಕ್ಷಿತ ತಾಯಂದಿರಿಗೆ (Expectant mothers) ಇದು ಅತ್ಯಂತ ಸುರಕ್ಷಿತ ಮತ್ತು ಸಹಕಾರಿ.

ಇದು ಗರ್ಭಾವಸ್ಥೆಯಲ್ಲಿ ಕಾಡುವ ಸೊಂಟ ನೋವು ಮತ್ತು ಆಯಾಸವನ್ನು ಕಡಿಮೆ ಮಾಡುತ್ತದೆ. ಶ್ವಾಸಕ್ರಿಯೆಯ ಅಭ್ಯಾಸಗಳ ಮೂಲಕ ಹೆರಿಗೆಯ ಸಮಯದ ಭಯ ಮತ್ತು ಆತಂಕವನ್ನು ಎದುರಿಸಲು ತಾಯಿಗೆ ಮಾನಸಿಕ ಧೈರ್ಯವನ್ನು ತುಂಬುತ್ತದೆ. ಇಂದಿನ ಆಧುನಿಕ ನಗರ ಜೀವನದಲ್ಲಿ ಸುಖಪ್ರಸವಕ್ಕಾಗಿ ಮಹಿಳೆಯರು ಈ ಯೋಗದ ಮೊರೆ ಹೋಗುತ್ತಿದ್ದಾರೆ.

3. ಟ್ರಾಮಾ-ಇನ್‌ಫಾರ್ಮ್ಡ್ ಯೋಗ (Trauma-Informed Yoga)

"ಇದು ದೇಹವನ್ನು ದಂಡಿಸುವ ಕಸರತ್ತಲ್ಲ, ಮನಸ್ಸಿನ ಗಾಯಗಳನ್ನು ಮಾಸಿಸುವ ಚಿಕಿತ್ಸೆ."

ಇದನ್ನು 2000 ರ ದಶಕದ ಆರಂಭದಲ್ಲಿ ಪ್ರಖ್ಯಾತ ಆಘಾತ (Trauma) ತಜ್ಞರಾದ ಡಾ. ಬೆಸೆಲ್ ವ್ಯಾನ್ ಡೆರ್ ಕೋಲ್ಕ್ (Dr. Bessel van der Kolk) ಮತ್ತು ಯೋಗ ಶಿಕ್ಷಕರಾದ ಡೇವಿಡ್ ಎಮರ್ಸನ್ (David Emerson) ಅವರು ಒಟ್ಟಾಗಿ ಅಮೆರಿಕಾದಲ್ಲಿ ಅಭಿವೃದ್ಧಿಪಡಿಸಿದರು.

ತೀವ್ರ ಮಾನಸಿಕ ಆಘಾತ (Trauma), ಖಿನ್ನತೆ (Depression), ಅಥವಾ ಅತಿಯಾದ ಆತಂಕದಿಂದ (Anxiety) ಅಥವಾ 'ಪಿಟಿಎಸ್‌ಡಿ' (PTSD) ಯಿಂದ ಬಳಲುತ್ತಿರುವವರು ತಮ್ಮ ದೇಹದೊಂದಿಗೆ ಮರಳಿ ಸುರಕ್ಷಿತ ಸಂಪರ್ಕ ಸಾಧಿಸಲು ಇದನ್ನು ರೂಪಿಸಲಾಯಿತು. ಇದರಲ್ಲಿ ಆಜ್ಞೆಗಳನ್ನು ನೀಡುವ ಬದಲಿಗೆ, ವ್ಯಕ್ತಿ ತನಗೆ ಕಂಫರ್ಟ್ ಎನಿಸುವ ಆಸನಗಳನ್ನು ಸ್ವತಃ ಆಯ್ಕೆ ಮಾಡಿಕೊಳ್ಳುವ ಸ್ವಾತಂತ್ರ್ಯ ಮತ್ತು ಶಾಂತಿಯುತ ವಾತಾವರಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತದೆ.

ಸಾಂಪ್ರದಾಯಿಕ ಯೋಗ ಕ್ಲಾಸುಗಳ ಕಠಿಣ ನಿಯಮಗಳು ಅಥವಾ ವೇಗ ಇಂದಿನ ಅತಿಯಾದ ಆತಂಕವಿರುವ ಜನರಿಗೆ ಭಯ ಅಥವಾ ಮುಜುಗರವನ್ನು ಉಂಟುಮಾಡಬಹುದು. ಆದರೆ, ಟ್ರಾಮಾ-ಇನ್‌ಫಾರ್ಮ್ಡ್ ಯೋಗದಲ್ಲಿ ಅತ್ಯಂತ ನಿಧಾನಗತಿಯ ಚಲನೆ ಇರುತ್ತದೆ ಮತ್ತು ಪ್ರತಿಯೊಂದು ಆಸನಕ್ಕೂ ಐಚ್ಛಿಕ ಮಾರ್ಪಾಡುಗಳಿರುತ್ತವೆ (Optional variations).

ಯಾರಿಗೆ ಸೂಕ್ತ?: ಯಾರು ಸಾಂಪ್ರದಾಯಿಕ ಸ್ಟುಡಿಯೋ ಪರಿಸರವನ್ನು ನೋಡಿ ಹಿಂಜರಿಯುತ್ತಾರೋ, ಅಂತವರಿಗೆ ಇದು ಅತ್ಯಂತ ಸುರಕ್ಷಿತ, ಪ್ರಶಾಂತ ಮತ್ತು ಸ್ವಯಂ-ಆರೈಕೆಯ ವಾತಾವರಣವನ್ನು ಕಲ್ಪಿಸಿಕೊಡುತ್ತದೆ.

4. ಅಯ್ಯಂಗಾರ್ ಯೋಗ (Iyengar Yoga)

"ಪರಿಪೂರ್ಣತೆಯೇ ಪರಮಾತ್ಮ; ಪರಿಕರಗಳ ಸಹಾಯದಿಂದ ಯೋಗಾಸನ!"

ವಿಶ್ವಪ್ರಸಿದ್ಧ ಯೋಗಾಚಾರ್ಯರಾದ ಬಿ. ಕೆ. ಎಸ್. ಅಯ್ಯಂಗಾರ್ (B. K. S. Iyengar) ಅವರು ಈ ವಿಶಿಷ್ಟ ಯೋಗ ಪದ್ಧತಿಯನ್ನು ಪರಿಚಯಿಸಿ, ಜಗತ್ತಿನಾದ್ಯಂತ ಪ್ರಖ್ಯಾತಗೊಳಿಸಿದರು.

ಪ್ರತಿಯೊಂದು ಆಸನವನ್ನು ಅತ್ಯಂತ ನಿಖರವಾಗಿ (Alignment) ಮತ್ತು ದೀರ್ಘಾವಧಿಯವರೆಗೆ ಮಾಡುವುದನ್ನು ಇದು ಒಳಗೊಂಡಿದೆ. ಶಾರೀರಿಕ ಮಿತಿಗಳಿರುವವರೂ ಸಹ ಸುಲಭವಾಗಿ ಯೋಗ ಮಾಡಲು ಅನುವಾಗುವಂತೆ ಬೆಲ್ಟ್‌ಗಳು, ಬ್ಲಾಕ್‌ಗಳು, ರೋಪ್‌ಗಳು ಮತ್ತು ಕುರ್ಚಿಗಳಂತಹ ಪರಿಕರಗಳನ್ನು (Props) ಯೋಗದಲ್ಲಿ ಮೊದಲ ಬಾರಿಗೆ ಬಳಕೆಗೆ ತಂದ ಹೆಗ್ಗಳಿಕೆ ಈ ಶೈಲಿಯದ್ದಾಗಿದೆ.

ವಿಶ್ವವಿಖ್ಯಾತ ಯೋಗ ಗುರು ಬಿ.ಕೆ.ಎಸ್. ಅಯ್ಯಂಗಾರ್ ಅವರು ಜಗತ್ತಿಗೆ ಪರಿಚಯಿಸಿದ ಈ ಶೈಲಿ ಇಂದು ಜಾಗತಿಕವಾಗಿ ಅತ್ಯಂತ ಗೌರವಿಸಲ್ಪಡುವ ಪ್ರಕಾರಗಳಲ್ಲಿ ಒಂದಾಗಿದೆ. ಇಲ್ಲಿ ಪ್ರತಿಯೊಂದು ಆಸನವನ್ನು ದೇಹದ ಅಂಗರಚನೆಗೆ ತಕ್ಕಂತೆ ಅತ್ಯಂತ ನಿಖರವಾಗಿ (Anatomical alignment) ಮಾಡುವುದಕ್ಕೆ ಒತ್ತು ನೀಡಲಾಗುತ್ತದೆ.

ಬೆನ್ನುಮೂಳೆಯ ಸಮಸ್ಯೆ ಇರುವವರಿಗೆ, ಅಪಘಾತ ಅಥವಾ ಕಾಯಿಲೆಯಿಂದ ಚೇತರಿಸಿಕೊಳ್ಳುತ್ತಿರುವವರಿಗೆ (Physiotherapy ಮಾದರಿಯಲ್ಲಿ) ಮತ್ತು ಯೋಗಾಸನಗಳನ್ನು ಯಾವುದೇ ತಪ್ಪುಗಳಿಲ್ಲದೆ ಕರಾರುವಾಕ್ಕಾಗಿ ಕಲಿಯಬೇಕು ಎನ್ನುವವರಿಗೆ ಇದು ಅತ್ಯುತ್ತಮ ಶೈಲಿ.

5. ಯಿನ್ ಯೋಗ (Yin Yoga)

"ವೇಗದ ಜಗತ್ತಿನಲ್ಲಿ ನಿಧಾನಗತಿಯ ಮ್ಯಾಜಿಕ್; ತಾಳ್ಮೆಯೇ ಇದರ ಶಕ್ತಿ."

ಯಿನ್ ಯೋಗವನ್ನು 1970 ರ ದಶಕದ ಕೊನೆಯಲ್ಲಿ ಸಮರ ಕಲೆಗಳ (Martial Arts) ತಜ್ಞರಾದ ಪೌಲಿ ಜಿಂಕ್ (Paulie Zink) ಅವರು ಅಮೆರಿಕಾದಲ್ಲಿ ಮೊದಲು ಪರಿಚಯಿಸಿದರು. ನಂತರ ಅವರ ಶಿಷ್ಯರಾದ ಪಾಲ್ ಗ್ರಿಲ್ಲಿ (Paul Grilley) ಮತ್ತು ಸಾರಾ ಪವರ್ಸ್ (Sarah Powers) ಇದನ್ನು ಮತ್ತಷ್ಟು ವ್ಯವಸ್ಥಿತಗೊಳಿಸಿ, ಜಗತ್ತಿನಾದ್ಯಂತ ಪ್ರಖ್ಯಾತಗೊಳಿಸಿದರು.

ಚೀನೀ ತಾವೊಯಿಸ್ಟ್ (Taoist) ಸಂಪ್ರದಾಯ ಮತ್ತು ಭಾರತದ ಹಠಯೋಗದ ಸಮ್ಮಿಲನವೇ ಈ ಯಿನ್ ಯೋಗ. ಇದರಲ್ಲಿ ಸ್ನಾಯುಗಳಿಗಿಂತ ಹೆಚ್ಚಾಗಿ ದೇಹದ ಆಳವಾದ ಅಂಗಾಂಶಗಳನ್ನು (Connective tissues, ligaments, joints) ಬಲಪಡಿಸಲು, ಪ್ರತಿಯೊಂದು ಆಸನವನ್ನು ಯಾವುದೇ ತರಾತುರಿಯಿಲ್ಲದೆ 3 ರಿಂದ 5 ನಿಮಿಷಗಳವರೆಗೆ ಸ್ಥಿರವಾಗಿ ಹಿಡಿದಿಟ್ಟುಕೊಳ್ಳಲಾಗುತ್ತದೆ. ಇದು ಅತ್ಯಂತ ನಿಧಾನಗತಿಯ ಮತ್ತು ಧ್ಯಾನಸ್ಥ ಯೋಗ ಪದ್ಧತಿಯಾಗಿದೆ.

ಇಂದಿನ ಜಗತ್ತಿನಲ್ಲಿ ಎಲ್ಲವೂ ಫಾಸ್ಟ್ ಫಾರ್ವರ್ಡ್ ಆಗಿದೆ. ಆದರೆ ಯಿನ್ ಯೋಗ ಅದಕ್ಕೆ ತದ್ವಿರುದ್ಧ! ಇದು ಅತ್ಯಂತ ಶಾಂತ ಮತ್ತು ನಿಧಾನಗತಿಯ ಯೋಗ ಪ್ರಕಾರವಾಗಿದೆ. ಇದು ಕೇವಲ ಮೇಲ್ಮೈ ಸ್ನಾಯುಗಳಿಗಲ್ಲದೆ, ದೇಹದ ಆಳದಲ್ಲಿರುವ ಕನೆಕ್ಟಿವ್ ಟಿಶ್ಯೂಗಳು (Connective tissues) ಮತ್ತು ಕೀಲುಗಳ ಆರೋಗ್ಯವನ್ನು ಸುಧಾರಿಸುತ್ತದೆ.

ಇಲ್ಲಿ ಮಾಡುವ ಆಸನಗಳ ಸಂಖ್ಯೆ ತುಂಬಾ ಕಡಿಮೆ. ಆದರೆ, ಪ್ರತಿಯೊಂದು ಆಸನದಲ್ಲೂ ಕನಿಷ್ಠ 3 ರಿಂದ 5 ನಿಮಿಷಗಳ ಕಾಲ ಸಂಪೂರ್ಣ ಸ್ಥಿರವಾಗಿ ಇರಬೇಕಾಗುತ್ತದೆ.

ದಿನವಿಡೀ ಓಡಾಡಿ ಸುಸ್ತಾಗುವವರಿಗೆ, ಮಾನಸಿಕವಾಗಿ ತೀವ್ರ ಚಡಪಡಿಕೆ ಇರುವವರಿಗೆ ಮತ್ತು ದೇಹದ ಕೀಲುಗಳಲ್ಲಿ ಗಟ್ಟಿತನ (Stiffness) ಎದುರಿಸುತ್ತಿರುವವರಿಗೆ ಇದು ಆಳವಾದ ತಾಳ್ಮೆ ಮತ್ತು ನಮ್ಯತೆಯನ್ನು ನೀಡುತ್ತದೆ.

6. ರಿಸ್ಟೋರೇಟಿವ್ ಯೋಗ (Restorative Yoga)

"ದೇಹಕ್ಕೆ ಶ್ರಮವಿಲ್ಲ, ಮನಸ್ಸಿಗೆ ಆಯಾಸವಿಲ್ಲ; ಇದು ಯೋಗದ ಮೂಲಕ ವಿಶ್ರಾಂತಿ!"

ಯೋಗಾಚಾರ್ಯ ಬಿ. ಕೆ. ಎಸ್. ಅಯ್ಯಂಗಾರ್ ಅವರ ಪ್ರಮುಖ ಶಿಷ್ಯರಾದ ಜುಡಿತ್ ಹ್ಯಾನ್ಸನ್ ಲಾಸಿಟರ್ (Judith Hanson Lasater) ಅವರು 1970 ರ ದಶಕದಲ್ಲಿ ಅಮೆರಿಕಾದಲ್ಲಿ ಈ ಯೋಗ ಪದ್ಧತಿಯನ್ನು ಜನಪ್ರಿಯಗೊಳಿಸಿದರು.

ಇದು ದೇಹ ಮತ್ತು ಮನಸ್ಸನ್ನು ಸಂಪೂರ್ಣವಾಗಿ ವಿಶ್ರಾಂತಿ ಸ್ಥಿತಿಗೆ (Deep Relaxation) ಕೊಂಡೊಯ್ಯುವ ಅತ್ಯಂತ ಶಾಂತಿಯುತ ಯೋಗ ಪದ್ಧತಿಯಾಗಿದೆ. ದೇಹಕ್ಕೆ ಯಾವುದೇ ರೀತಿಯ ದೈಹಿಕ ಶ್ರಮ ನೀಡದೆ, ದಿಂಬುಗಳು (Bolsters), ಬ್ಲಾಂಕೆಟ್‌ಗಳು ಮತ್ತು ಬ್ಲಾಕ್‌ಗಳ ಸಹಾಯದಿಂದ ಆಸನಗಳನ್ನು ಅತ್ಯಂತ ಆರಾಮದಾಯಕವಾಗಿ ದೀರ್ಘಕಾಲದವರೆಗೆ (5 ರಿಂದ 20 ನಿಮಿಷ) ಹಿಡಿದಿಟ್ಟುಕೊಳ್ಳಲಾಗುತ್ತದೆ. ಇದು ನರಮಂಡಲವನ್ನು ಶಾಂತಗೊಳಿಸಲು ಮತ್ತು ಒತ್ತಡ ನಿವಾರಣೆಗೆ ರಾಮಬಾಣವಾಗಿದೆ.

ಹೆಸರೇ ಹೇಳುವಂತೆ ಇದು ದಣಿದ ದೇಹ ಮತ್ತು ಮನಸ್ಸನ್ನು ಮರಳಿ ಚೇತರಿಸಿಕೊಳ್ಳುವಂತೆ (Heal) ಮಾಡುವ ಯೋಗ. ಇಂದಿನ "ಬರ್ನ್‌ಔಟ್" (ಅತಿಯಾದ ಕೆಲಸದಿಂದಾಗಿ ಉಂಟಾಗುವ ತೀವ್ರ ದಣಿವು) ಸಂಸ್ಕೃತಿಗೆ ಇದು ಅತ್ಯುತ್ತಮ ಮದ್ದು.

ಇಲ್ಲಿ ದೇಹಕ್ಕೆ ಯಾವುದೇ ರೀತಿಯ ಕಠಿಣ ಶ್ರಮ ಇರುವುದಿಲ್ಲ. ಮೃದುವಾದ ದಿಂಬುಗಳು (Bolsters) ಮತ್ತು ಬ್ಲಾಂಕೆಟ್‌ಗಳ ಮೇಲೆ ದೇಹವನ್ನು ಒರಗಿಸಿ, ಅತ್ಯಂತ ಆರಾಮದಾಯಕ ಸ್ಥಿತಿಯಲ್ಲಿ ದೀರ್ಘಕಾಲ ಇರಲಾಗುತ್ತದೆ.

ಇದು ನಮ್ಮ ದೇಹದ ಪ್ಯಾರಾಸಿಂಪಥೆಟಿಕ್ ನರಮಂಡಲವನ್ನು ಜಾಗೃತಗೊಳಿಸಿ, ಆಳವಾದ ನಿದ್ರೆಗೆ ಹೋದಂತಹ ಅನುಭವ ನೀಡುತ್ತದೆ. ತೀವ್ರ ಒತ್ತಡ ನಿವಾರಣೆಗೆ ಇದು ರಾಮಬಾಣ.

7. ಅಸಾಂಪ್ರದಾಯಿಕ ವೆಲ್ನೆಸ್ ಟ್ರೆಂಡ್‌ಗಳು (Novelty Formats)

"ಮನರಂಜನೆಯ ಜೊತೆಗೆ ಆರೋಗ್ಯದ ಹುಡುಕಾಟ!"

ಯೋಗದ ಮುಖ್ಯ ಉದ್ದೇಶವೇ ಮನಸ್ಸನ್ನು ಪ್ರಶಾಂತಗೊಳಿಸುವುದು. ಆದರೆ ಇಂದಿನ ಪೀಳಿಗೆಯನ್ನು ಆಕರ್ಷಿಸಲು ಜಗತ್ತಿನಾದ್ಯಂತ ಕೆಲವು ವಿಶಿಷ್ಟ ಪ್ರಯೋಗಗಳು ನಡೆಯುತ್ತಿವೆ:

ಮೇಕೆಗಳೊಂದಿಗೆ ಯೋಗ (Goat Yoga): ಹಸಿರು ಹುಲ್ಲುಗಾವಲಿನಲ್ಲಿ ಚಿಕ್ಕ ಮೇಕೆಮರಿಗಳ ನಡುವೆ ಯೋಗ ಮಾಡುವುದು. ಪ್ರಾಣಿಗಳ ಒಡನಾಟವು ಮನುಷ್ಯನಲ್ಲಿ ಸಂತೋಷದ ಹಾರ್ಮೋನ್‌ಗಳನ್ನು ಹೆಚ್ಚು ಮಾಡುತ್ತದೆ ಎಂಬ ನಂಬಿಕೆ ಇದರ ಹಿಂದಿದೆ.

ಸೌಂಡ್ ಹೀಲಿಂಗ್ ಯೋಗ (Sound Healing): ಯೋಗ ಮಾಡುವಾಗ ಟಿಬೆಟಿಯನ್ ಬೌಲ್ಸ್ ಅಥವಾ ವಿಶೇಷ ಧ್ವನಿ ತರಂಗಗಳ (Sound vibrations) ಕಂಪನಗಳನ್ನು ಬಳಸಲಾಗುತ್ತದೆ. ಇದು ಧ್ವನಿ ಚಿಕಿತ್ಸೆಯ ಮೂಲಕ ಮನಸ್ಸನ್ನು ತಕ್ಷಣವೇ ಧ್ಯಾನದ ಸ್ಥಿತಿಗೆ ಕೊಂಡೊಯ್ಯುತ್ತದೆ.

ಇದಲ್ಲದೆ, ಬಯೋಹ್ಯಾಕಿಂಗ್ (Biohacking), ಕೋಲ್ಡ್ ಪ್ಲಂಜ್ / ಐಸ್ ಬಾತ್ (Cold Plunge), ಫಾರೆಸ್ಟ್ ಬಾತಿಂಗ್ (ಈಂಡಿಥಣ Bathing / Shinrin-yoku), ಫ್ಲೋಟೇಶನ್ ಥೆರಪಿ (Sensory Deprivation / Flotation Therapy), ಕ್ರಯೋಥೆರಪಿ (Cryotherapy) ಇನ್ನು ಕೆಲವು ಪ್ರಸ್ತುತ ಪ್ರಚಾರದಲ್ಲಿರುವ ಟ್ರೆಂಡ್‌ಗಳಾಗಿವೆ.

**ಯೋಗದ ರೂಪಗಳು, ಶೈಲಿಗಳು ಮತ್ತು ಹೆಸರುಗಳು** ಬದಲಾಗುತ್ತಿರಬಹುದು. ಮೇಕೆಗಳ ಜೊತೆ ಮಾಡುವ ಯೋಗ ಸಾಂಪ್ರದಾಯಿಕ ಸಿದ್ಧಾಂತಕ್ಕೆ ವಿಚಿತ್ರವೆನಿಸಬಹುದು. ಆದರೆ ಇದರ ಹಿಂದಿರುವ ಒಂದು ಮೂಲಭೂತ ಸತ್ಯವೇನೆಂದರೆ ? ಇಂದಿನ ಯಾಂತ್ರಿಕ ಜಗತ್ತಿನಲ್ಲಿ ಪ್ರತಿಯೊಬ್ಬ ಮನುಷ್ಯನೂ "ಪ್ರಶಾಂತತೆ" ಮತ್ತು "ನೆಮ್ಮದಿ"ಗಾಗಿ ಹಸಿದಿದ್ದಾನೆ. ಆ ನೆಮ್ಮದಿಯನ್ನು ಕಂಡುಕೊಳ್ಳಲು ಜನರು ತಮ್ಮದೇ ಆದ ವಿಭಿನ್ನ ಮತ್ತು ಅಸಾಂಪ್ರದಾಯಿಕ ಮಾರ್ಗಗಳನ್ನು ಆರಿಸಿಕೊಳ್ಳುತ್ತಿದ್ದಾರೆ.

ನಿಮ್ಮ ಜೀವನಶೈಲಿಗೆ ಇವುಗಳಲ್ಲಿ ಯಾವ ಯೋಗ ಪ್ರಕಾರ ಸೂಕ್ತ ಎನಿಸುತ್ತದೆ?

ನಾವು ಮುಂದಿನ ಲೇಖನದಲ್ಲಿ ಯೋಗದ ಅತಿ ಮುಖ್ಯ ಸಾಂಪ್ರದಾಯಿಕ ಶೈಲಿಯಾದ 'ಹಠ ಯೋಗ', ಜಾಗತಿಕವಾಗಿ ಬೆವರಿನ ಮಳೆ ಸುರಿಸುತ್ತಿರುವ 'ಹಾಟ್ ಯೋಗ' ಮತ್ತು ಆತ್ಮದ ಉನ್ನತಿಗೆ ನೆರವಾಗುವ *'ಸತ್ವ ಯೋಗ'*ಗಳ ಆಳವಾದ ಮತ್ತು ರೋಮಾಂಚಕ ಸಂಗತಿಗಳನ್ನು ತಿಳಿಯೋಣ! ತಪ್ಪದೇ ಓದಿ.ವಂದನೆಗಳು.

---


ಮಾವು ಬೆಳೆಗಾರರ ನೆರವಿಗೆ ಕೇಂದ್ರ ಸರಕಾರ; ತೋತಾಪುರಿಯ ಒಂದು ಕ್ವಿಂಟಲ್‌ಗೆ 1,750 ನಿಗದಿ

## ಜೂನ್ 17ರಂದು ಕೃಷಿ ಸಚಿವರಿಗೆ ಪತ್ರ ಬರೆದು ವಿನಂತಿಸಿದ್ದ ಕುಮಾರಸ್ವಾಮಿ

**ನವದೆಹಲಿ:** ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಕೇಂದ್ರದ ಕೃಷಿ ಮತ್ತು ರೈತ ಕಲ್ಯಾಣ ಖಾತೆ ಮಂತ್ರಿಗಳಾದ ಶಿವರಾಜ್ ಸಿಂಗ್ ಚೌಹಾಣ್ ಅವರೊಂದಿಗೆ ಚರ್ಚೆ ನಡೆಸಿದ ಫಲವಾಗಿ ಕೇಂದ್ರ ಸರಕಾರ ರಾಜ್ಯದ ಮಾವು ಬೆಳೆಗಾರರ ನೆರವಿಗೆ ಧಾವಿಸಿದೆ.

ವಾತಾವರಣ ವೈಪರಿತ್ಯ ಮತ್ತು ಬೆಲೆ ಕುಸಿತದಿಂದ ತೀವ್ರ ಸಂಕಷ್ಟಕ್ಕೆ ಗುರಿಯಾಗಿದ್ದ ಮಾವು ಬೆಳೆಗಾರರಿಗೆ ನೆರವಿನ ಹಸ್ತ ಚಾಚಿರುವ ಕೇಂದ್ರವು, ಮಾರುಕಟ್ಟೆ ಹಸ್ತಕ್ಷೇಪ ಯೋಜನೆ ಅಡಿಯಲ್ಲಿ 1.30 ಲಕ್ಷ ಮೆಟ್ರಿಕ್ ಟನ್ ಮಾವಿಗೆ ಪ್ರತಿ ಕ್ವಿಂಟಲ್‌ಗೆ ?1,750 ನೆರವು ಘೋಷಿಸಿದೆ.

ಈ ಸಂಬಂಧ ಸಚಿವ ಕುಮಾರಸ್ವಾಮಿ ಅವರು ನವದೆಹಲಿಯಲ್ಲಿ ಬುಧವಾರ ಕೃಷಿ ಸಚಿವರಾದ ಶಿವರಾಜ್ ಸಿಂಗ್ ಚೌಹಾಣ್ ಅವರನ್ನು ಅವರ ನಿವಾಸದಲ್ಲಿ ಭೇಟಿಯಾಗಿ ಮಾತುಕತೆ ನಡೆಸಿದರು. ತ್ವರಿತವಾಗಿ ಮಾವು ಬೆಳೆಗಾರರ ರಕ್ಷಣೆಗೆ ಧಾವಿಸಬೇಕು ಎಂದು ಮನವಿ ಮಾಡಿದ್ದರು.



ಕುಮಾರಸ್ವಾಮಿ ಅವರು ಮನವಿಗೆ ಸ್ಪಂದಿಸಿದ್ದ ಚೌಹಾಣ್ ಅವರು, ಮಾವು ಬೆಳೆಗಾರರಿಗೆ ಆರ್ಥಿಕ ನೆರವು ಘೋಷಿಸಿದ್ದಾರೆ.

ಅಲ್ಲದೆ, ಇದೇ ಜೂನ್ 17ರಂದು ಸಚಿವ ಚೌಹಾಣ್ ಅವರಿಗೆ ಪತ್ರ ಬರೆದಿದ್ದ ಬೃಹತ್ ಕೈಗಾರಿಕೆ ಸಚಿವರು, ಮಾವು ಬೆಳೆಗಾರರ ನೆರವಿಗೆ ಬರುವಂತೆ ಕೋರಿದರು. ಬೆಲೆ ಕೊರತೆ ಪಾವತಿ ಯೋಜನೆ (PDPS)ಯಡಿ ನೆರವಾಗುವಂತೆ ಕೇಳಿದ್ದರು. ತದನಂತರ ಕೋಲಾರ ಜಿಲ್ಲೆಯಲ್ಲಿ ಮಾವು ಬೆಳೆಗಾರರು ಪ್ರತಿಭಟನೆ ಶುರು ಮಾಡುತ್ತಿದ್ದಂತೆಯೇ ತುರ್ತಾಗಿ ಬುಧವಾರ ಸಂಜೆ ಕೃಷಿ ಸಚಿವರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದರು. ಅದರ ಫಲವಾಗಿ ಆರ್ಥಿಕ ನೆರವಿನ ಘೋಷಣೆ ಹೊರಬಿದ್ದಿದೆ. ಕೇಂದ್ರ ಸರ್ಕಾರದ ಈ ಉಪಕ್ರಮದ ಮೂಲಕ ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ತುಮಕೂರು, ಮಂಡ್ಯ ಸೇರಿದಂತೆ ವಿವಿಧ ಜಿಲ್ಲೆಗಳ ಮಾವು ಬೆಳೆಗಾರರಿಗೆ ನೆರವಾಗಲಿದೆ.

ಕೃಷಿ ಸಚಿವರಿಗೆ ಧನ್ಯವಾದ ತಿಳಿಸಿರುವ ಸಚಿವ ಕುಮಾರಸ್ವಾಮಿ ಅವರು; ಮಾರುಕಟ್ಟೆ ಮಧ್ಯಸ್ಥಿಕೆ ಯೋಜನೆ (MIS)ಯಡಿ ಬೆಲೆ ಕೊರತೆ ಪಾವತಿ ಯೋಜನೆ (ಕಆಕಖ) ಜಾರಿಗೆ ತ್ವರಿತವಾಗಿ ನಿರ್ಧಾರ ಕೈಗೊಂಡಿದೆ. ಮಾರುಕಟ್ಟೆ ಮಧ್ಯಸ್ಥಿಕೆ ಯೋಜನೆಯ ಮಾರ್ಗಸೂಚಿಯಂತೆ ಪ್ರಸಕ್ತ ಹಂಗಾಮಿನಲ್ಲಿ ತೋತಾಪುರಿ ಮಾವಿಗೆ ಬೆಲೆ ಕೊರತೆ ಪಾವತಿ ಜಾರಿಗೆ ಬರಲಿದೆ. ಗರಿಷ್ಠ 1,30,000 ಮೆಟ್ರಿಕ್ ಟನ್ ವರೆಗೆ ಅನ್ವಯ ಆಗುವಂತೆ ಪ್ರತೀ ಕ್ವಿಂಟಲ್‌ಗೆ ?1,750 ಸಹಾಯಧನ ಘೋಷಣೆ ಮಾಡಲಾಗಿದ್ದು, ಇದಕ್ಕೆ ಸಂಬಂಧಿಸಿದ ಮಾರ್ಗಸೂಚಿಯನ್ನು ಹೊರಡಿಸಿದೆ.

**ಕೃಷಿ ಸಚಿವರಿಗೆ ಧನ್ಯವಾದ ತಿಳಿಸಿದ ಹೆಚ್ಡಿಕೆ:**

ನನ್ನ ಮನವಿಗೆ ಅತ್ಯಂತ ಸಕಾರಾತ್ಮಕವಾಗಿ ಸ್ಪಂದಿಸಿದ ಕೃಷಿ ಸಚಿವರು ಅತ್ಯಂತ ತ್ವರಿತವಾಗಿ ಮಾವು ಬೆಳೆಗಾರರಿಗೆ ಅನುಕೂಲವಾಗುವ ನಿರ್ಧಾರ ಕೈಗೊಳ್ಳುವುದಾಗಿ ಭರವಸೆ ನೀಡಿದ್ದರು. ಅವರ ಸ್ಪಂದನೆಗೆ ನನ್ನ ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೂರದೃಷ್ಟಿ ನಾಯಕತ್ವದಲ್ಲಿ ರೈತರನ್ನು ಬೆಲೆ ಕುಸಿತ ಹಾಗೂ ಹವಾಮಾನ ವೈಪರೀತ್ಯದಂತಹ ಸಂಕಷ್ಟಗಳಿಂದ ಸಕಾಲದಲ್ಲಿ ಪಾರು ಮಾಡಲು ಕೇಂದ್ರ ಸರ್ಕಾರವು ಅವಿರತವಾಗಿ ಶ್ರಮಿಸುತ್ತಿದೆ ಮತ್ತು ಬದ್ಧವಾಗಿದೆ ಎಂದು ಕುಮಾರಸ್ವಾಮಿ ಅವರು ಹೇಳಿದ್ದಾರೆ.

---

## ವಿದ್ಯುತ್ ಖಾಸಗೀಕರಣ ವಿರೋಧಿಸಿ ಪ್ರತಿಭಟನೆ

**ತುರುವೇಕೆರೆ:** ಬೆಸ್ಕಾಂ ಇಲಾಖೆಯ ಖಾಸಗೀಕರಣ ಕ್ರಮವನ್ನು ವಿರೋಧಿಸಿ ತಾಲೂಕು ರೈತ ಸಂಘ ಹಾಗೂ ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಗುರುವಾರ ಪಟ್ಟಣದ ತಾಲೂಕು ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ನೂರಾರು ಕಾರ್ಯಕರ್ತರು ಮತ್ತು ಪದಾಧಿಕಾರಿಗಳು ಭಿತ್ತಿಪತ್ರಗಳನ್ನು ಹಿಡಿದು ಮೆರವಣಿಗೆ ನಡೆಸಿ ತಾಲೂಕು ಕಚೇರಿವರೆಗೆ ತೆರಳಿ, ವಿದ್ಯುತ್ ಕ್ಷೇತ್ರದ ಖಾಸಗೀಕರಣ ಹಾಗೂ ಸರ್ಕಾರದ ನೀತಿಗಳ ವಿರುದ್ಧ ಘೋಷಣೆಗಳನ್ನು ಕೂಗಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಘಟನಾ ಸಂಚಾಲಕ ದಂಡಿನಶಿವರ ಶಿವಕುಮಾರ್, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸಲು ಮುಂದಾಗಿವೆ ಎಂದು ಆರೋಪಿಸಿದರು. ಪ್ರಸ್ತುತ ವಿವಿಧ ಯೋಜನೆಗಳ ಮೂಲಕ ಸಾರ್ವಜನಿಕರಿಗೆ ವಿದ್ಯುತ್ ಸೌಲಭ್ಯ ದೊರೆಯುತ್ತಿದ್ದು, ರಾಜ್ಯ ಸರ್ಕಾರದ ಗೃಹಜ್ಯೋತಿ ಯೋಜನೆಯಿಂದಲೂ ಕೋಟ್ಯಂತರ ಜನರಿಗೆ ಅನುಕೂಲವಾಗಿದೆ. ಖಾಸಗೀಕರಣಗೊಂಡರೆ ಇಂತಹ ಜನಪರ ಯೋಜನೆಗಳಿಗೆ ಧಕ್ಕೆಯಾಗುವ ಸಾಧ್ಯತೆ ಇದೆ ಎಂದು ಹೇಳಿದರು.



ರೈತರು ಉಚಿತ ವಿದ್ಯುತ್ ಸೌಲಭ್ಯದ ನೆರವಿನಿಂದ ಕೊಳವೆಬಾವಿಗಳ ಮೂಲಕ ಕೃಷಿ ಚಟುವಟಿಕೆಗಳನ್ನು ನಡೆಸುತ್ತಿದ್ದಾರೆ. ವಿದ್ಯುತ್ ಪ್ರಸರಣವನ್ನು ಖಾಸಗಿ ಕಂಪನಿಗಳಿಗೆ ವಹಿಸಿದರೆ ರೈತರ ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಸುವ ಮೂಲಕ ಹೆಚ್ಚುವರಿ ಆರ್ಥಿಕ ಹೊರೆ ಹೊರಿಸಲಾಗುತ್ತದೆ. ಜೊತೆಗೆ ಗ್ರಾಹಕರಿಂದ ಹೆಚ್ಚುವರಿ ಶುಲ್ಕ ವಸೂಲಿ ಮಾಡುವ ಸಾಧ್ಯತೆಯೂ ಇದೆ ಎಂದು ಆತಂಕ ವ್ಯಕ್ತಪಡಿಸಿದರು. ಸರ್ಕಾರಗಳು ಖಾಸಗೀಕರಣದ ಉದ್ದೇಶವನ್ನು ಕೈಬಿಟ್ಟು ರೈತ ಸ್ನೇಹಿ ಆಡಳಿತ ನಡೆಸಬೇಕು ಎಂದು ಒತ್ತಾಯಿಸಿದರು.

ತಾಲೂಕು ರೈತ ಸಂಘದ ಅಧ್ಯಕ್ಷ ಶ್ರೀನಿವಾಸ್ ಗೌಡ ಮಾತನಾಡಿ, ವಿದ್ಯುತ್ ಖಾಸಗೀಕರಣದ ವಿರುದ್ಧ ಗ್ರಾಮ ಮಟ್ಟದಲ್ಲಿ ಜನಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು. ಖಾಸಗಿ ಕಂಪನಿಗಳ ಆಡಳಿತದಿಂದ ಜನಸಾಮಾನ್ಯರ ಹಿತಾಸಕ್ತಿಗೆ ಧಕ್ಕೆಯಾಗುವ ಸಾಧ್ಯತೆ ಇದ್ದು, ಪ್ರತಿಯೊಬ್ಬ ನಾಗರಿಕರೂ ಖಾಸಗೀಕರಣವನ್ನು ವಿರೋಧಿಸಬೇಕು ಎಂದು ಕರೆ ನೀಡಿದರು.

ಬಳಿಕ ಪ್ರತಿಭಟನಾಕಾರರು ತಹಸೀಲ್ದಾರ್ ಎನ್.ಎ.ಕುಂಇ ಅಹಮದ್ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ತಾಲೂಕು ಡಿಎಸ್‌ಎಸ್ ಸಂಚಾಲಕ ಮಲ್ಲೂರು ತಿಮ್ಮೇಶ್, ಮುಖಂಡರಾದ ಬೋರಪ್ಪ, ಮುತ್ತಗದಹಳ್ಳಿ ಶಿವಣ್ಣ, ಗೋವಿಂದರಾಜು, ವಿನಯ್, ಸಂತೋಷ್, ತಮ್ಮಯ್ಯ, ಡೊಂಕಿಹಳ್ಳಿ ನಾಗರಾಜು, ಕೆಂಪಯ್ಯ, ಮಧು, ಸಿದ್ದಾಪುರ ಶಿವಶೇಖರ್, ಬಸವರಾಜು ಕಲ್ಕೆರೆ, ಅಫ್ಜಲ್, ಪರಮೇಶ್ ಸೇರಿದಂತೆ ಹಲವರು ಭಾಗವಹಿಸಿದ್ದರು.

---

## ಹಿಟ್‌ಮ್ಯಾನ್ - ತಿರಸ್ಕಾರದಿಂದ ತಾಜ್‌ವರೆಗೆ



| ಡಾ.ಸುಧಾಕರ.ಜಿ.ಲಕ್ಕವಳ್ಳಿ

ಸ್ಫೂರ್ತಿ ಸುಧೆ - 52

ಮುಂಬೈ ನಗರದ ಗದ್ದಲದ ನಡುವೆ, ಮಧ್ಯಮ ವರ್ಗದ ಕುಟುಂಬಗಳಲ್ಲಿ ಬೆಳೆದ ರೋಹಿತ್ ಶರ್ಮಾ ಅವರಲ್ಲಿ ಕ್ರಿಕೆಟ್ ಕನಸುಗಳು ಮೊಳಕೆಯೊಡೆದವು. ಆರ್ಥಿಕ ಸಂಕಷ್ಟಗಳ ನಡುವೆಯೂ ಗುರು ದಿನೇಶ್ ಲಾಡ್ ಅವರ ನೆರವು ವಿದ್ಯಾರ್ಥಿವೇತನದ ರೂಪದಲ್ಲಿ ಅವರ ಬದುಕಿಗೆ ಬೆಳಕು ನೀಡಿತು. ಅಲ್ಲಿ ಮೊಳಕೆಯೊಡೆದ ಪ್ರತಿಭೆ ಮುಂದೆ ವಿಶ್ವಕ್ರಿಕೆಟ್‌ನ ಶಿಖರಗಳನ್ನು ಮುಟ್ಟಿತು.

ಆರಂಭಿಕ ದಿನಗಳಲ್ಲಿ ಅಸ್ಥಿರ ಪ್ರದರ್ಶನಗಳು, ತೀವ್ರ ಟೀಕೆಗಳು ಹಾಗೂ 2011ರ ವಿಶ್ವಕಪ್‌ನಲ್ಲಿ ಸ್ಥಾನ ಸಿಗದ ನಿರಾಸೆಗಳು ಅವರ ಹಾದಿಯನ್ನು ಕಠಿಣಗೊಳಿಸಿದವು. ಆದರೆ ರೋಹಿತ್ ಶರ್ಮಾ ಅವರು ಸೋಲನ್ನು ಅಂತ್ಯವೆಂದು ಸ್ವೀಕರಿಸಲಿಲ್ಲ. 2013ರಲ್ಲಿ ಆರಂಭಿಕ ಬ್ಯಾಟ್ಸ್‌ಮನ್ ಆಗಿ ದೊರೆತ ಅವಕಾಶವನ್ನು ತಿರುವುಬಿಂದುವಾಗಿ ಪರಿವರ್ತಿಸಿದರು.

ಅನಂತರ ಇತಿಹಾಸವೇ ಮಾತನಾಡಿತು ಏಕದಿನ ಕ್ರಿಕೆಟ್‌ನಲ್ಲಿ ಮೂರು ದ್ವಿಶತಕಗಳು, ಐಪಿಎಲ್‌ನಲ್ಲಿ ಮುಂಬೈ ಇಂಡಿಯನ್ಸ್ ತಂಡಕ್ಕೆ ಐದು ಕಿರೀಟಗಳು, ಹಾಗೂ ನಾಯಕತ್ವದ ಮೂಲಕ ಭಾರತಕ್ಕೆ ಅನೇಕ ಸ್ಮರಣೀಯ ಜಯಗಳು ದೊರಕಿದವು. ಶಾಂತ ಸ್ವಭಾವದ ಹಿಂದೆ ಅಡಗಿದ್ದ ದೃಢತೆ ಮತ್ತು ನಿರಂತರ ಪರಿಶ್ರಮವೇ ಅವರ ಶಕ್ತಿಯಾಯಿತು.




ಭಾರತ ಸರ್ಕಾರದಿಂದ ಅರ್ಜುನ ಪ್ರಶಸ್ತಿ (2015), ಖೇಲ್ ರತ್ನ (2020) ಹಾಗೂ ಪದ್ಮಶ್ರೀ(2026) ಗೌರವಗಳು ಅವರ ಸಾಧನೆಗಳಿಗೆ ರಾಷ್ಟ್ರೀಯ ಮುದ್ರೆಯಾಗಿ ಪರಿಣಮಿಸಿದವು.

ರೋಹಿತ್ ಶರ್ಮಾ ಅವರ ಬದುಕು ನೀಡುವ ಸಂದೇಶ ಒಂದೇ ಸೋಲು ಶಾಶ್ವತವಲ್ಲ; ಪರಿಶ್ರಮವೇ ಯಶಸ್ಸಿನ ನಿಜವಾದ ದಾರಿ. ಬದುಕಿನ ಪಿಚ್‌ನಲ್ಲಿ ಮತ್ತೆ ಏಳುವ ಧೈರ್ಯವೇ ನಿಜವಾದ ಚಾಂಪಿಯನ್‌ಗಳ ಗುರುತು.

---

## ಟಿಪ್ಪರ್ ಹರಿದು ಬೈಕ್ ಸವಾರ ಸಾವು

**ಪಾವಗಡ:** ಬೈಕ್ ಸವಾರನ ಮೇಲೆ ಟಿಪ್ಪರ್ ಹರಿದ ಪರಿಣಾಮ ಹಿಂಬದಿ ಸವಾರ ಸ್ಥಳದಲ್ಲೇ ಮೃತಪಟ್ಟ ಘಟನೆ ಗುರುವಾರ ಮಧ್ಯಾಹ್ನ ಪಾವಗಡ ಪೊಲೀಸ್ ಠಾಣಾ ವ್ಯಾಪ್ತಿಯ ಗಂಗಾಸಾಗರ ಗೇಟ್ ಸಮೀಪ ನಡೆದಿದೆ. ಮೃತರನ್ನು ಪಾವಗಡ ತಾಲೂಕಿನ ದೊಡ್ಡಹಳ್ಳಿ ಗ್ರಾಮದ ವೆಂಕಟೇಶ್ ಹಾಗೂ ರಾಮಾಂಜಿನಮ್ಮ ದಂಪತಿಯ ಪುತ್ರ ನಂದೀಶ್ ಕುಮಾರ್ (18) ಎಂದು ಗುರುತಿಸಲಾಗಿದೆ.

ನಂದೀಶ್ ಕುಮಾರ್ ದ್ವಿತೀಯ ಪಿಯುಸಿ ಉತ್ತೀರ್ಣರಾಗಿದ್ದು, ಮುಂದಿನ ವ್ಯಾಸಂಗಕ್ಕಾಗಿ ತುಮಕೂರಿನ ಕಾಲೇಜೊಂದರಲ್ಲಿ ಪ್ರವೇಶ ಪಡೆದಿದ್ದರು ಎಂದು ತಿಳಿದುಬಂದಿದೆ.

ಅಪಘಾತ ಸಂಭವಿಸಿದ ತಕ್ಷಣ ಪಾವಗಡ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದಾರೆ.

ಈ ಸಂಬಂಧ ಪಾವಗಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಅಪಘಾತದ ಕುರಿತು ತನಿಖೆ ಮುಂದುವರಿದಿದೆ.






ಸಿನಿಮಾ ವರದಿ: ಬಿ.ಜಿ.ರವಿಕುಮಾರ್



## 18 ಇದು ಹಾರರ್, ಸೆಸ್ಪೆನ್ಸ್ ಥ್ರಿಲ್ಲರ್ ಸರಕು



ಎ ನೂತನ ಶೀರ್ಷಿಕೆ KA-18 ಚಿತ್ರದ ಮುಹೂರ್ತ ಸಮಾರಂಭವು ಶ್ರೀ ಪಂಚಮುಖಿ ಗಣಪತಿ ದೇವಸ್ಥಾನದಲ್ಲಿ ಅದ್ದೂರಿಯಾಗಿ ನಡೆಯಿತು. ಹಿರಿಯ ಸಾಹಿತಿ ಡಾ.ವಿ.ನಾಗೇಂದ್ರ ಪ್ರಸಾದ್ ಮೊದಲ ದೃಶ್ಯಕ್ಕೆ ಕ್ಲಾಪ್ ಮಾಡಿ ತಂಡಕ್ಕೆ ಶುಭ ಹಾರೈಸಿದರು. ಛಾಲೆಂಜಿಂಗ್ ಸ್ಟಾರ್ ದರ್ಶನ್ ಅಳಿಯ ನಟ ಮನೋಜ್ ಕ್ಯಾಮಾರ ಆನ್ ಮಾಡಿದರು. ಅಪ್ಪಾಜಿ ಪ್ರೊಡಕ್ಷನ್ಸ್ ಅಡಿಯಲ್ಲಿ ಹಿರೇಮಗಳೂರು ಮೂಲದ ಎ.ಟಿ.ಎಂ.ಮಂಜು ನಿರ್ಮಾಣ ಮಾಡುವುದರ ಜತೆಗೆ ನಾಯಕನಾಗಿ ಬಣ್ಣ ಹಚ್ಚುತ್ತಿರುವುದು ಹೊಸ ಅನುಭವ. ಮೋಹನ್ ಚಿಕ್ಕಿ ಮೂರನೇ ಸಿನಿಮಾಕ್ಕೆ ಕಥೆ,ಚಿತ್ರಕಥೆ, ಸಂಭಾಷಣೆ ಬರೆದು ಆಕ್ಷನ್ ಕಟ್ ಹೇಳುತ್ತಿದ್ದಾರೆ. ಉತ್ತರಕಾಂಡದ ಸೋನಿಯಾ ರಾವುತ್ ಸಹ ನಿರ್ಮಾಪಕಿ ಹಾಗೂ ಹಾಡಿಗೆ ಹೆಜ್ಜೆ ಹಾಕುತ್ತಿದ್ದಾರೆ. ಚಿತ್ರವು ಕನ್ನಡ ಸೇರಿದಂತೆ ತೆಲುಗು, ಹಿಂದಿ, ತಮಿಳು ಮತ್ತು ಮಲೆಯಾಳಂ ಭಾಷೆಗಳಲ್ಲಿ ಸಿದ್ದಗೊಳ್ಳುತ್ತಿರುವುದು ವಿಶೇಷ.

ಮುಖ್ಯ ಪಾತ್ರದಲ್ಲಿ ಎ.ಟಿ.ಎಂ.ಮಂಜು, ತನಿಷಾ ಕುಪ್ಪಂಡ, ಸೋನಿಯಾ ರಾವುತ್. ಖಳನಾಗಿ ದೀಪು ಇವರೊಂದಿಗೆ ವರ್ಧನ್, ವಿಜಿ, ಪೂಜಾ ಮುಂತಾದವರು ಅಭಿನಯಿಸಿದ್ದಾರೆ. ಶಶಿಕುಮಾರ್. ಜೆ.ಕೆ ಸಾಹಿತ್ಯ, ಛಾಯಾಗ್ರಹಣ ಮುಂಜಾನೆ ಮಂಜು, ಸಂಕಲನ ರಘು ಶಿವರಾಮ್, ಸಾಹಸ ವೈಲೆಂಟ್ ವೇಲು, ನಿರ್ಮಾಣ ನಿರ್ವಹಣೆ ಮಂಜುನಾಥ್ ದೈವಜ್ಞ ಅವರದಾಗಿದೆ.

ನಂತರ ಮಾತನಾಡಿದ ನಿರ್ದೇಶಕರು, ಗೆಳೆಯ ನಿರ್ದೇಶಕ ಆರ್ಯ ಮಹೇಶ್ ಸಹಕಾರ ಎಂದಿಗೂ ಮರೆಯಲಾಗದು. ನಿರ್ಮಾಪಕರು ಹೇಳಿದ ಒಂದು ಏಳೆಯನ್ನು ಬಳಸಿಕೊಂಡು ಅದನ್ನು ವಿಸ್ತಾರ ಮಾಡಿಕೊಳ್ಳಲಾಗಿದೆ. ಚಿತ್ರವು ಎರಡು ಪಾತ್ರಗಳ ಸುತ್ತ ಸಾಯಂಕಾಲ 6 ಗಂಟೆಯಿಂದ ಬೆಳಿಗ್ಗೆ 6 ಗಂಟೆಯವರೆಗೆ ನಡೆಯುವ ಘಟನೆಯಲ್ಲಿ ನಾಲ್ಕೈದು ಎಲಿಮೆಂಟ್ಸ್ ಬರುತ್ತದೆ. ಚಿಕ್ಕಮಗಳೂರು ಸ್ಥಳದಲ್ಲಿ ಸಂಪೂರ್ಣ ಚಿತ್ರೀಕರಣವನ್ನು ಒಂದೇ ಹಂತದಲ್ಲಿ ಮುಗಿಸಲು ಯೋಜನೆ ಹಾಕಲಾಗಿದೆ ಅಂತ ಮೋಹನ್ ಚಿಕ್ಕಿ ಮಾಹಿತಿ ಹರಿಬಿಟ್ಟರು.

ಶಾಲೆ ಕಾಲೇಜು ದಿನಗಳಿಂದಲೂ ನಾಟಕ ಪ್ರೇಮಿ. ಅಂದಿನಿಂದಲೇ ಸಿನಿಮಾ ಮಾಡಬೇಕೆಂಬ ಹುಚ್ಚು ಇತ್ತು. ಅದಕ್ಕೆ ಈಗ ಕಾಲ ಕೂಡಿಬಂದಿದೆ. 2000 ಇಸವಿಯಲ್ಲಿ ಅಪ್ಪನೊಂದಿಗೆ ಕೆಮ್ಮಣ್ಣುಗುಂಡಿಗೆ ಹೋಗಿದ್ದಾಗ ಅಲ್ಲಿ ನೋಡಿದಂತ ಘಟನೆಯನ್ನು ನಿರ್ದೇಶಕರಿಗೆ ಹೇಳಿದೆ. ಈ ಸ್ಥಳ ಹಾಗೂ ಆ ಸ್ಥಳದ ಮಧ್ಯೆ ಮೂಲಭೂತ ಸೌಕರ್ಯವಿಲ್ಲದ ಹಾದಿಯಲ್ಲಿ ಮುಖ್ಯ ಕಾರಣವನ್ನು ಸಂಶೋಧನೆ ಮಾಡಲು ಹೋಗುತ್ತಿದ್ದಾಗ ಒಂದಷ್ಟು ಅಡಚಣೆಗಳು ಬರುತ್ತದೆ. ಕೊನೆಗೆ ಅದರಿಂದ ರಕ್ಷಣೆ ಸಿಗುತ್ತದಾ? ಇಲ್ಲವಾ ಎಂಬುದನ್ನು ಹೇಳ ಹೊರಟದ್ದೀವೆ. ಅಲ್ಲದೆ ಮೂಢನಂಬಿಕೆ ಅಂಶವನ್ನು ತೆಗೆದುಕೊಳ್ಳಲಾಗಿದೆ ಎಂದು ಎ.ಟಿ.ಎಂ. ಮಂಜು ಹೇಳಿದರು.

ತನಿಷಾ ಕುಪ್ಪಂಡ ಹೇಳುವಂತೆ, ಅಂಕಿತಾ ಹೆಸರಿನಲ್ಲಿ ಕಾಡು ದಾರಿಯಲ್ಲಿ ಅಪರಿಚಿತ ವ್ಯಕ್ತಿಯೊಂದಿಗೆ ಪಯಣಿಸುವಾಗ ಸಣ್ಣ ಪುಟ್ಟ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ. ಯಾರು ಯಾರಿಗೆ ಒಳ್ಳೇದು, ಕೆಟ್ಟದ್ದು ಮಾಡುತ್ತಾರೆ ಎಂಬುದನ್ನು ಹೇಳ ಹೊರಟಿದ್ದಾರೆ ಎಂದರು.



## ತೆರೆಗೆ ಸಿದ್ದ ರೈತರ ಮಕ್ಕಳಿಗೆ ಹೆಣ್ಣು ಕೊಡಿ

'ರೈತರ ಮಕ್ಕಳಿಗೆ ಹೆಣ್ಣು ಕೊಡಿ' ಚಿತ್ರಕ್ಕೆ ಕೆಂಪರಾಮ್ ಹೆಡಿಯಾಲ ಚಿತ್ರಕ್ಕೆ ಕಥೆ,ಚಿತ್ರಕಥೆ, ಸಂಭಾಷಣೆ, ಸಾಹಿತ್ಯ, ನಿರ್ದೇಶನ ಮಾಡುವ ಜತೆಗೆ ಮೆಲ್ಲುಲಿಗಾನ ಪ್ರೊಡಕ್ಷನ್ಸ್ ಅಡಿಯಲ್ಲಿ ನಿರ್ಮಾಣ ಮಾಡಿರುವುದು ಹೊಸ ಅನುಭವ.


ಇಲ್ಲಿನ ನೆಲದ ಮಣ್ಣಿನ ಜೀವನಗಾಥೆಯನ್ನು ಎಳೆಎಳೆಯಾಗಿ ಹಳ್ಳಿಸೊಗಡಿನ ಸನ್ನಿವೇಶಗಳನ್ನು ತೋರಿಸಲಾಗಿದೆ. ಬದಲಾದ ಪರಿಸ್ಥಿತಿಯಲ್ಲಿ ರೈತರ ಮಕ್ಕಳಿಗೆ ಹೆಣ್ಣು ಸಿಗುವುದಿಲ್ಲ ರಾಜ್ಯವ್ಯಾಪ್ತಿ ಮಾರ್ದನಿಸಿ ಅವರ ಬದುಕಿನಲ್ಲಿ ತಲ್ಲಣವನ್ನು ಉಂಟು ಮಾಡುತ್ತಿದೆ. ಚಿತ್ರವು ವಿಭಿನ್ನ ಹಾಗೂ ವಿಶಿಷ್ಟವಾದ ಅನುಭವಗಳನ್ನು ತೋರಿಸಿಕೊಡುತ್ತದೆ. ಅವರ ಬದುಕಿನ ಸೂಕ್ಷತೆಗಳು, ಅಲ್ಲಿನ ಗಂಭೀರ ಅಂಶಗಳು ಗಮನ ಸೆಳೆದು, ಬುದ್ದಿ, ಭಾವ ಚಿತ್ತ ಜಾಗೃತಗೊಳ್ಳುವಂತೆ ಮಾಡುತ್ತಾ, ನೋಡುಗರ ಮನಸ್ಸನ್ನು ಒಳಹೊಕ್ಕಿಸಿ, ಸನ್ನಿವೇಶಗಳಲ್ಲಿ ಕಾಣುವ ಪಾತ್ರಗಳು ನಮ್ಮ ಜೀವನದ ಪ್ರತಿಬಿಂಬವಾಗುವಂತೆ ಮಾಡುತ್ತದೆ. ಗೆಲ್ಲುತ್ತಾ ಹೋಗುವವರು ಇತಿಹಾಸ ಸೃಷ್ಟಿಸುತ್ತಾರೆ. ಆದರೆ ಸೋತು ಗೆಲ್ಲುವವರು ಇತಿಹಾಸವನ್ನು ಬದಲಾಯಿಸುತ್ತಾರೆ ಎನ್ನುವಂತ ತೂಕದ ಸಂದೇಶವನ್ನು ಹೇಳಲಾಗಿದೆ.

ಜೈ ಜಗದೀಶ್ ಮುಕಿ ನಾಯಕ. ದಿವ್ಯಾಶ್ರೀ ನಾಯಕಿ. ಉಳಿದಂತೆ ಅಮೋಘ್‌ದಾಸ್, ಅಗಸ್ಯ ಪ್ರೇಮ್, ಸಂಗನಗೌಡ, ಸಂತೋಷ್ ಜೋಗುಳ್, ಅಶ್ವಿನಿ ಮುಂತಾದವರು ನಟಿಸಿದ್ದಾರೆ. ರೋಹನ್.ಎಸ್. ದೇಸಾಯಿ, ಸಾಹಸ ಸಂಗೀತ–ಛಾಯಾಗ್ರಹಣ–ಸಂಕಲನ ಸಂತೋಷ್ ರಾಥೋಡ್, ನೃತ್ಯ ಅಕುಲ್ ಮಾಸ್ಟರ್–ಅಜಯ್ ಜೈಕೃಷ್ಣ–ಸಾಕ್ಷಿ ಅವರದಾಗಿದೆ. ಹುಬ್ಬಳ್ಳಿ, ಧಾರವಾಡ, ಬೆಳಗಾವಿ ಸುತ್ತಮುತ್ತ ಚಿತ್ರೀಕರಣ ನಡೆಸಲಾಗಿದೆ. ಅಂದ ಹಾಗೆ ಚಿತ್ರವು ಇದೇ ಶುಕ್ರವಾರ ತೆರೆ ಕಾಣಲಿದೆ.





ಕಿರುತೆರೆ ಹಾಗೂ ಹಿರಿತೆರೆ ಕಲಾವಿದೆ ರಶ್ಮಿ ಅಯ್ಯಂಗಾರ್ ಅವರು ತಮ್ಮ ಭರತನಾಟ್ಯ ಕಾರ್ಯಕ್ರಮದಲ್ಲಿ ಯಶೋಮತಿ ರವಿ ಬೆಳಗೆರೆ ಜೊತೆ ಸಂಭ್ರಮಿಸಿದ್ದು ಹೀಗೆ



ಕಲಾವಿದೆ ತಾರಾ ಅನುರಾಧ ಛಾಯಾಗ್ರಹಕ ವೇಣು ದಂಪತಿ ಮನೆಯಲ್ಲಿ ಸತ್ಯನಾರಾಯಣ ಪೂಜೆ

## ಲವ್ ಸೀಸನ್ಸ್: ಮುಕುಂದ ರಾಮಸ್ವಾಮಿ ಬರ್ತ್‌ಡೇಗೆ ಟ್ರೈಲರ್ ಉಡುಗೊರೆ!



ಎನ್.ಆರ್ ಸ್ಟುಡಿಯೋಸ್ ಬ್ಯಾನರಿನಡಿಯಲ್ಲಿ ನಿರ್ಮಾಣಗೊಂಡಿರುವ, ಕೃತ್ವಿಕ್ ನಿರ್ದೇಶನದಲ್ಲಿ ಮೂಡಿ ಬಂದಿರುವ ಲವ್ ಸೀಸನ್ಸ್ ಚಿತ್ರದ ಟ್ರೈಲರ್ ಬಿಡುಗಡೆಗೊಂಡಿದೆ. ಈ ಚಿತ್ರದ ಮೂಲಕ ನಾಯಕನಾಗಿ ಆಗಮಿಸುತ್ತಿರುವ ಮುಕುಂದ ರಾಮಸ್ವಾಮಿ ಹುಟ್ಟುಹಬ್ಬಕ್ಕೆ ಉಡುಗೊರೆ ಎಂಬಂತೆ ಈ ಟ್ರೈಲರ್ ಪ್ರೇಕ್ಷಕರ ಮುಂದೆ ಬಂದಿದೆ.

ಈ ಕುರಿತಾಗಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಂಡ್ಯ ರಮೇಶ್, ಜಯತೀರ್ಥ, ಎನ್.ಆರ್ ಮಂಜುನಾಥ (ನೀಲೇರಿ) ಮುಕುಂದ ರಾಮಸ್ವಾಮಿ, ಸಂಗೀತಾ ಅನಿಲ್, ದಿಯಾ ಕೀರ್ತಿ, ಶ್ವೇತಾ ಕೊಗ್ಲೂರು, ಚಂದನಾ ಗೌಡ, ಚೇತನ್ ದುರ್ಗ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಮಂಡ್ಯ ರಮೇಶ್ ಹಾಗೂ ಜಯತೀರ್ಥ 'ಈ ಚಿತ್ರದಲ್ಲಿ ರಂಗಭೂಮಿಯಿಂದ ಬಂದವರೇ ಹೆಚ್ಚಾಗಿದ್ದಾರೆ. ರಂಗಭೂಮಿಯಿಂದ ಆಗಮಿಸಿದವರಲ್ಲಿ ಪ್ರತಿಭೆ ಮಾತ್ರವಲ್ಲದೆ ಶಿಸ್ತು, ಬದ್ಧತೆಯೂ ಇರುತ್ತದೆ. ನಿರ್ದೇಶಕ ಕೃತ್ವಿಕ್ ಮೊದಲ ಪ್ರಯತ್ನದಲ್ಲಿಯೇ ಚೆಂದದ ಚಿತ್ರ ಮಾಡಿದ್ದಾರೆ. ಈ ಟ್ರೈಲರ್ ಮೂಲಕ ನಿರ್ಮಾಪಕರ ಸಿನಿಮಾ ಪ್ರೇಮವೂ ಪ್ರತಿಫಲಿಸಿದೆ. ಈ ಹೊಸಬರ ಪ್ರಯತ್ನಕ್ಕೆ ಪ್ರೇಕ್ಷಕರೆಲ್ಲ ಪ್ರೋತ್ಸಾಹಿಸಬೇಕು' ಎಂದು ಮನವಿ ಮಾಡಿಕೊಂಡರು.

ಈಗಾಗಲೇ ಲವ್ ಸೀಸನ್ಸ್ ಚಿತ್ರದ ಮೂರು ಹಾಡುಗಳು ಬಿಡುಗಡೆಗೊಂಡಿವೆ. ಅವೆಲ್ಲವೂ ಕೇಳುಗರ ಮೆಚ್ಚುಗೆಗೆ ಪಾತ್ರವಾಗಿವೆ. ಇಂಥಾ ಹಾಡುಗಳ ಪ್ರಭೆಯಲ್ಲಿಯೇ ಟ್ರೈಲರ್ ಬಗೆಗಿನ ಕುತೂಹಲ ವ್ಯಾಪಕವಾಗಿ ಮೂಡಿಕೊಂಡಿತ್ತು. ಇನ್ನೇನು ಬಿಡುಗಡೆಯ ಕ್ಷಣಗಳು ಹತ್ತಿರಾಗುತ್ತಿರುವಾಗಲೇ, ನಾಯಕನ ಹುಟ್ಟುಹಬ್ಬದಂದೇ ಚಿತ್ರತಂಡ ಟ್ರೈಲರ್ ಬಿಡುಗಡೆಗೊಳಿಸಿದೆ. ಈ ಚಿತ್ರ ಇದೇ ಜುಲೈ 3ರ ರಂದು ರಾಜ್ಯಾದ್ಯಂತ ತೆರೆಗಾಣಲಿದೆ.

ಎನ್.ಆರ್ ಮಂಜುನಾಥ (ನೀಲೇರಿ) ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಕೃತ್ವಿಕ್ ನಿರ್ದೇಶನ, ವೀರ್ ಸಮರ್ಥ್ ಸಂಗೀತ ನಿರ್ದೇಶನ ಈ ಚಿತ್ರಕ್ಕಿದೆ. ಕೆ.ಕಲ್ಯಾಣ್, ಪ್ರಮೋದ್ ಮರವಂತೆ ಮುಂತಾದವರು ಸಾಹಿತ್ಯ ಬರೆದಿದ್ದಾರೆ. ಅವಿನಾಶ ಶಾಸ್ತ್ರಿ ಛಾಯಾಗ್ರಹಣ, ಮಧು ತುಂಬಾಕೆರೆ ಸಂಕಲನ, ಭಜರಂಗಿ ಮೋಹನ್ ನೃತ್ಯ ಸಂಯೋಜನೆಯಿರುವ ಈ ಚಿತ್ರದಲ್ಲಿ ಮುಕುಂದ ರಾಮಸ್ವಾಮಿ ನಾಯಕನಾಗಿ ನಟಿಸಿದ್ದಾರೆ. ದಿಯಾ ಕೀರ್ತಿ, ಚಂದನಾ ಗೌಡ ಮತ್ತು ಶ್ವೇತಾ ಕೊಗ್ಲೂರು ನಾಯಕಿಯರಾಗಿ ಜೊತೆಯಾಗಿದ್ದಾರೆ. ಮಂಡ್ಯ ರಮೇಶ್, ರಾಜೇಶ್ ನಟರಂಗ, ಸಂಗೀತಾ ಅನಿಲ್, ಜಯತೀರ್ಥ, ಚೇತನ್ ದುರ್ಗ, ಕಾಮಿಡಿ ಕಿಲಾಡಿ ಸದಾನಂದ, ಹುಲಿ ಕಾರ್ತಿಕ್, ಬೇಬಿ ರಿತು ಸಿಂಗ್ ಮುಂತಾದವರ ತಾರಾಗಣವಿದೆ.

## ರಕ್ಷಕ 2 ಈ ವಾರ ಬಿಡುಗಡೆ



ಆರ್. ವಿಜಯ್ ಕುಮಾರ್ ಅವರ ರಕ್ಷಕ –2 ಚಿತ್ರವನ್ನು ನಿರ್ದೇಶಿಸಿ ಈ ವಾರ ತೆರೆಗೆ ತರುತ್ತಿದ್ದಾರೆ. ಇದು ಅವರ ನಿರ್ದೇಶನದ ಮೂರನೇ ಚಿತ್ರ.

ಲವ್, ಆಕ್ಷನ್, ಫ್ಯಾಮಿಲಿ, ಸಸ್ಪೆನ್ಸ್ ಥ್ರಿಲ್ಲರ್, ಕಾಮಿಡಿಯಂಥ ಎಲ್ಲ ಮನರಂಜನಾತ್ಮಕ ಅಂಶಗಳೂ ಈ ಚಿತ್ರದಲ್ಲಿವೆ. ಬೆಂಗಳೂರು ನಗರದ ಸುತ್ತಮುತ್ತಲ ಪ್ರದೇಶಗಳಲ್ಲಿ ಈ ಚಿತ್ರದ ಚಿತ್ರೀಕರಣ ನಡೆಸಲಾಗಿದೆ.

ಸರ್ವೆ ಸ್ಟುಡಿಯೋಸ್ ಬ್ಯಾನರ್ ಅಡಿಯಲ್ಲಿ ಶಿವು ಸರ್ವೇಶ್ ಅವರು ಈ ಚಿತ್ರವನ್ನು ನಿರ್ಮಿಸಿದ್ದಾರೆ. ಡಾ. ಆರ್ ವಿಜಯಕುಮಾರ್ ಅವರು ಈ ಚಿತ್ರಕ್ಕೆ ಕಥೆ, ಚಿತ್ರಕಥೆ, ಸಂಭಾಷಣೆ, ಸಾಹಿತ್ಯ ಬರೆದು ನಿರ್ದೇಶನದ ಜತೆ ಸಂಗೀತ ಸಂಯೋಜನೆಯ ಜವಾಬ್ದಾರಿಯನ್ನೂ ಸಹ ನಿರ್ವಹಿಸಿದ್ದಾರೆ. ವೈಲೆಂಟ್ ವೇಲು ಅವರ ಸಾಹಸ, ವಿಜಯ್ ಮಧಾಳೇ ಅವರ ಛಾಯಾಗ್ರಹಣ ಹಾಗೂ ಸಂಕಲನ ಈ ಚಿತ್ರಕ್ಕಿದೆ.

ನಿರ್ದೇಶಕ ಡಾ.ಆರ್ ವಿಜಯ್ ಕುಮಾರ್ ಅವರು ದಕ್ಷ ಪೊಲೀಸ್ ಅಧಿಕಾರಿಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಹಾಸ್ಯನಟ ಲಯಕೋಕಿಲ ಅವರು ಪೊಲೀಸ್ ಕಾನ್ಸ್ಟೇಬಲ್ ಪಾತ್ರ ನಿರ್ವಹಿಸಿದ್ದಾರೆ.

## ಸುಷ್ಮಾ ವೀರ್ ಸಾರಥ್ಯದಲ್ಲಿ `ವೀರ ರಂಗ ಸಂಭ್ರಮ ಏ5'



ಮೊದಲ ಗೀತೆಯಾಗಿ ಡಾ॥ಚಂದ್ರಶೇಖರ್ ಕಂಬಾರರ "ಮಾಯಾದ ಮನದ ಭಾರ" ಹಾಡು ಬಿಡುಗಡೆ .

ನಟಿ, ನಿರ್ಮಾಪಕಿ, ನಿರ್ದೇಶಕಿ ಸುಷ್ಮಾ ವೀರ್ ಈಗ ರಂಗಗೀತೆ ಪರಂಪರೆಗೆ ಹೊಸಲೇಪನ ಕೊಡಲು ಮುಂದಾಗಿದ್ದಾರೆ. ಇತ್ತೀಚೆಗೆ ತಮ್ಮ ವೀರ ಕಥಾಕರ ಎಂಬ ಸಂಸ್ಥೆ ಮೂಲಕ "ವೀರ ರಂಗ ಸಂಭ್ರಮ ಏ5" ಎಂಬ ಸಮಾರಂಭ ಆಯೋಜನೆ ಮಾಡಿದ್ದರು. ಈ ಸಮಾರಂಭದಲ್ಲಿ ಡಾ॥ಚಂದ್ರಶೇಖರ್ ಕಂಬಾರರ "ಮಾಯಾದ ಮನದ ಭಾರ" ಹಾಡನ್ನು ಬಿಡುಗಡೆ ಮಾಡಲಾಯಿತು. ವರನಟ ಡಾ॥ರಾಜಕುಮಾರ್ ಪುತ್ರಿ ಲಕ್ಷ್ಮೀ ಗೋವಿಂದರಾಜು ಹಾಗೂ ಅಳಿಯ ಎಸ್ ಎ ಗೋವಿಂದರಾಜು ಈ ಹಾಡನ್ನು ಅನಾವರಣ ಮಾಡಿದರು. ನಿರ್ದೇಶಕ ಪಿ.ಶೇಷಾದ್ರಿ, ನಟ ಸುಚೇಂದ್ರ ಪ್ರಸಾದ್, ಡಾ॥ಸಿ.ಸೋಮಶೇಖರ್, ನಟ ಸುಂದರರಾಜ್, ಕೊಂಡಜ್ಜಿ ಮೋಹನ್, ಪ್ರಕಾಶ್ ರಾಘವಾಚಾರ್ ಹಾಗೂ ಡಾ॥ಚಂದ್ರಶೇಖರ್ ಕಂಬಾರ ಅವರ ಪುತ್ರಿ ಜಯಶ್ರೀ ಸೇರಿದಂತೆ ಅನೇಕ ಗಣ್ಯರು ಹಾಗೂ ಗುಬ್ಬಿ ವೀರಣ್ಣ ಅವರ ಕುಟುಂಬದ ಅನೇಕ ಸದಸ್ಯರು ಈ ಸಮಾರಂಭದಲ್ಲಿ ಉಪಸ್ಥಿತರಿದ್ದರು. ದಕ್ಷಿಣ ಭಾರತದಲ್ಲೇ ಮೊದಲ ಬಾರಿಗೆ ೦ಖ ತಂತ್ರಜ್ಞಾನ ಬಳಸಿಕೊಂಡಿರುವ ರಂಗಗೀತೆ ಇದ್ದಾಗಿದೆ. ಹಾಡಿನ ಲೋಕಾರ್ಪಣೆಯ ನಂತರ ಅತಿಥಿಗಳು ಹಾಗೂ ಸುಷ್ಮಾ ವೀರ್ ಮಾತನಾಡಿದರು.

ಸುಷ್ಮಾ, ನಾವು ಎತ್ತಿ ಆಡಿಸಿದ ಮಗು. ನಮ್ಮ ಕುಟುಂಬಕ್ಕೂ ಅವರ ಕುಟುಂಬಕ್ಕೂ ನಾಲ್ಕು ತಲೆಮಾರುಗಳ ನಂಟಿದೆ. ಸುಷ್ಮಾ ಈಗ ಹೊಸಹೆಜ್ಜೆ ಇಟ್ಟಿದ್ದಾರೆ. ಅವರಿಗೆ ಶುಭವಾಗಲಿ ಎಂದು ಡಾ॥ರಾಜಕುಮಾರ್ ಪುತ್ರಿ ಲಕ್ಷ್ಮೀ ಗೋವಿಂದರಾಜು ಹಾರೈಸಿದರು.

ಸುಷ್ಮಾ ಅವರಿಗೆ ಹೇಗೆ ಬಂತು ಈ ಅಭಿನಯ. ತಾತಾ ಅವರಿಂದ? ತಾಯಿ ಅವರಿಂದ? ಅಲ್ಲ. ಅವರ ಪರಿಶ್ರಮದಿಂದ ಈ ಅಭಿನಯ ಬಂದಿದೆ. ಧ್ವನಿ ಮಾತ್ರ ಅವರ ಕುಟುಂಬದಿಂದ ಬಂದಿರಬಹುದು. ಸುಷ್ಮಾ ಸಕಲಕಲಾವಲ್ಲಭೆ. ಈಗ ವೀರ ರಂಗ ಸಂಭ್ರಮದ ಮೂಲಕ ಮತ್ತೊಂದು ಹೊಸ ಹೆಜ್ಜೆ ಇಟ್ಟಿದ್ದಾರೆ ಅವರಿಗೆ ಒಳ್ಳೆಯದಾಗಲಿ ಎಂದರು ನಿರ್ದೇಶಕ ಪಿ.ಶೇಷಾದ್ರಿ.

ಸುಷ್ಮಾ ಅವರನ್ನು ನಾನು ಅಮ್ಮು ಅಂತಲೇ ಕರೆಯುವುದು. ನಾವೆಲ್ಲಾ ಮಾಡಬೇಕಾದ ಕೆಲಸವನ್ನು ಸುಷ್ಮಾ ಮಾಡಿ ನಮ್ಮಗೆಲ್ಲಾ ಮಾದರಿಯಾಗಿದ್ದಾರೆ. ಕಾಲಗರ್ಭದಲ್ಲಿ ಕಳೆದು ಹೋಗುತ್ತಿದ್ದ ಈ ಹಾಡುಗಳನ್ನು ಸ್ಮೃತಿಗರ್ಭದಲ್ಲಿರುವಂತೆ ಮಾಡಿದ್ದಾರೆ ಎಂದು ನಟ ಸುಚೇಂದ್ರ ಪ್ರಸಾದ್ ತಿಳಿಸಿದರು.

ಸುಷ್ಮಾ ಅವರ ಧ್ವನಿ ಕೇಳುತ್ತಿದ್ದರೆ, ಉಷಾ ಉತ್ತಪ್ಪ ಅವರ ಧ್ವನಿ ಕೇಳಿದ ಹಾಗೆ ಆಗುತ್ತದೆ. ಅವರ ಕಂಠದಿಂದ ಮತ್ತಷ್ಟು ಗೀತೆಗಳು ಬರಲಿ ಎಂದು ಡಾ॥ ಸಿ.ಸೋಮಶೇಖರ್ ಅವರು ಹೇಳಿದರು.

ಸುಷ್ಮಾ ನನ್ನ ಮಗಳು ಇದ್ದ ಹಾಗೆ. ಬಾಲ್ಯದಿಂದಲೂ ನೋಡಿದ ಮಗು. ಅವರ ಈ ಬೆಳವಣಿಗೆ ನನಗೆ ಸಂತೋಷ ತಂದಿದೆ ಎಂದರು ನಟ ಸುಂದರರಾಜ್.

ನಮ್ಮ ವೀರ ಕಥಾಕರ ಸಂಸ್ಥೆಯಿಂದ "ವೀರ ಸಂಭ್ರಮ ಏ5" ಎಂಬ ಸಮಾರಂಭ ಆಯೋಜಿಸಿದ್ದೇವೆ. ಇದು ರಂಗಗೀತೆಗಳ ಹೊಸ ಅಲೆ ಅನಾವರಣ. ಈಗಿನ ಯುವಜನತೆಗೆ ರಂಗಗೀತೆಗಳನ್ನು ಪರಿಚಯಿಸುವುದೇ "ವೀರ ಸಂಭ್ರಮ"ದ ಮೂಲ ಉದ್ದೇಶ. ಇನ್ನೂ, ಏ5 ಅಂದರೆ, ಕರ್ನಾಟಕ, ಕನ್ನಡ, ಕಾರಂತ, ಕಾರ್ನಾಡ್ ಹಾಗೂ ಕಂಬಾರ ಎಂದು. ಶಿವರಾಮ ಕಾರಂತ, ಗಿರೀಶ್ ಕಾರ್ನಾಡ್ ಹಾಗೂ ಚಂದ್ರಶೇಖರ್ ಕಂಬಾರರ ಹಾಡುಗಳನ್ನು ಜನರಿಗೆ ತಲುಪಿಸುವ, ವಿಶೇಷವಾಗಿ ಯುವಜನತೆಗೆ ಮಟ್ಟಿಸುವ ಉದ್ದೇಶ. ಮುಂದಿನ ದಿನಗಳಲ್ಲಿ ಈ ಮೂವರು ದಿಗ್ಗಜರ ಕುರಿತು ದೊಡ್ಡ ಸಮಾರಂಭ ಮಾಡುವ ಯೋಜನೆ ಕೂಡ ಇದೆ. ಇಂದು "ವೀರ ಸಂಭ್ರಮ"ದ ಮೊದಲ ಗೀತೆಯಾಗಿ ಡಾ॥ಚಂದ್ರಶೇಖರ್ ಕಂಬರರ " ಮಾಯಾದ ಮನದ ಭಾರ" ಹಾಡನ್ನು ಬಿಡುಗಡೆ ಮಾಡಿದ್ದೇವೆ. ಜಂಕಾರ್ ಮ್ಯೂಸಿಕ್ ಮೂಲಕ ಈ ಹಾಡು ಬಿಡುಗಡೆಯಾಗಿದೆ. ಈ ಹಾಡನ್ನು ಟಿ.ಎಸ್ ನಾಗಾಭರಣ ನಿರ್ದೇಶನದ "ನಾಗ ಮಂಡಲ" ಚಿತ್ರದಲ್ಲಿ ಬಳಸಿಕೊಳ್ಳಲಾಗಿತ್ತು. ಮೂಲ ಸ್ವರ ಸಂಯೋಜನೆ ಮಾಡಿದ್ದು ಸಿ.ಅಶ್ವಥ್ ಅವರು. ಈಗ ಈ ಹಾಡನ್ನು ನಾನು ಹಾಡುವ ಪ್ರಯತ್ನ ಮಾಡಿದ್ದೇನೆ. ನಿರ್ದೇಶಕ ನಾಗಾಭರಣ ಅವರು ಕೂಡ ನನ್ನ ಗಾಯನದ ಬಗ್ಗೆ ಮೆಚ್ಚುಗೆ ಸೂಚಿಸಿರುವುದು ಸಂತೋಷವಾಗಿದೆ. ಮುಂದೆ ಕೂಡ ಅನೇಕ ರಂಗಗೀತೆಗಳು ನಮ್ಮ ಸಂಸ್ಥೆಯ ಮೂಲಕ ಲೋಕಾರ್ಪಣೆಯಾಗಲಿದೆ. ಸಮಾರಂಭಕ್ಕೆ ಆಗಮಿಸಿದ ಗಣ್ಯರಿಗೆ ಹಾಗೂ ಕುಟುಂಬ ಸದಸ್ಯರಿಗೆ ಧನ್ಯವಾದ ಎಂದರು ವೀರ ಕಥಾಕರ ಸಂಸ್ಥೆ ಸ್ಥಾಪಕಿ ಹಾಗೂ "ವೀರ ಸಂಭ್ರಮ ಏ5" ಸಮಾರಂಭದ ಆಯೋಜಕಿ ಸುಷ್ಮಾ ವೀರ್. ತಮ್ಮದೇ ಕಂಠಸಿರಿಯಲ್ಲಿ ರಂಗಗೀತೆ ಹಾಡುವ ಮೂಲಕ ಸುಷ್ಮ ವೀರ್ ಸಮಾರಂಭಕ್ಕೆ ಚಾಲನೆ ನೀಡಿದ್ದು ವಿಶೇಷವಾಗಿತ್ತು. ಯುವ ಗಾಯಕಿಯರಾದ ಕಾವ್ಯ ಹಾಗೂ ಕವನ ಸಹ ಸುಷ್ಮಾ ಅವರ ಜೊತೆಗೆ ಗಾಯನಕ್ಕೆ ಜೊತೆಯಾದರು.

ಗುಬ್ಬಿ ವೀರಣ್ಣ ಅವರ ಕುಟುಂಬ ಕಂಚಿನ ಕಂಠಕ್ಕೆ ಹೆಸರುವಾಸಿ. ಅದೇ ಕಂಚಿನ ಕಂಠ ನಮ್ಮ ಸುಷ್ಮಾ ಅವರದು. ರಂಗಗೀತೆಗಳಿಗೆ ಹೇಳಿ ಮಾಡಿಸಿದ ಕಂಠ ಅವರದು ಎಂದು ಸಮಾರಂಭಕ್ಕೆ ಆಗಮಿಸಿದ್ದ ಎಲ್ಲಾ ಗಣ್ಯರು ಒಕ್ಕೊರಲ ಅಭಿಪ್ರಾಯ ಪಟ್ಟು, ಸುಷ್ಮಾ ಅವರ ಗಾಯನವನ್ನು ಮುಕ್ತಕಂಠದಿಂದ ಶ್ಲಾಘಿಸಿದರು.




## ರಜನಿಕಾಂತ್ 173ನೇ ಸಿನಿಮಾಗೆ ಮುಹೂರ್ತ


ಕಮಲ್ ಹಾಸನ್ ಒಡೆತನದ ರಾಜ್ ಕಮಲ್ ಫಿಲ್ಮ್ಸ್ ಇಂಟರ್ನ್ಯಾಷನಲ್ ನಿರ್ಮಾಣ ಮಾಡುತ್ತಿರುವ ಚಿತ್ರದ ಟೈಟಲ್ ಹಾಗೂ ಫಸ್ಟ್ ಲುಕ್ ಬಿಡುಗಡೆಯಾಗಿದೆ. ಇದು ರಜನಿಕಾಂತ್ ನಟಿಸುತ್ತಿರುವ 173ನೇ ಸಿನಿಮಾ.

ಚೆನ್ನೈನಲ್ಲಿ ನಡೆದ ಪೂಜಾ ಸಮಾರಂಭದಲ್ಲಿ ಚಿತ್ರದ ಫಸ್ಟ್ ಲುಕ್ ಹಾಗೂ ಟೈಟಲ್ ಅನಾವರಣ ಮಾಡಲಾಯಿತು. ಈ ಸಿನಿಮಾಗೆ ಧರ್ಮನ್ ಎಂದು ಶೀರ್ಷಿಕೆ ಇಡಲಾಗಿದೆ.

ಡಾಕ್ಟರ್ ಡ್ರೆಸ್‌ನಲ್ಲಿ ರಜನಿಕಾಂತ್ ಕೈಯಲ್ಲಿ ಒಂದು ಚಿಕ್ಕ ಬ್ಯಾಂಡೇಜ್‌ನೊಂದಿಗೆ, ರಕ್ತ ಸುರಿಯುವ ಅವತಾರದಲ್ಲಿ ಕಾಣಿಸಿಕೊಂಡಿದ್ದಾರೆ.

ರಜನಿಕಾಂತ್ ಜೊತೆಗೆ ನಟಿಯರಾದ ಸಿಮ್ರಾನ್ ಮತ್ತು ರಾಶಿ ಖನ್ನಾ ಚಿತ್ರದಲ್ಲಿ ಅಭಿನಯಿಸುತ್ತಿದ್ದಾರೆ.

ಕಮಲ್ ಹಾಸನ್ ಹಾಗೂ ಆರ್. ಮಹೇಂದ್ರನ್ ನಿರ್ಮಾಣ ಮಾಡುತ್ತಿದ್ದು ಅಶ್ವಥ್ ಮಾರಿಮುತ್ತು ನಿರ್ದೇಶನದ ಮಾಡುತ್ತಿದ್ದಾರೆ.



## ಮೋಡ ಕವಿದ ವಾತಾವರಣ ಈ ವಾರ ಬಿಡುಗಡೆ

ನಟ ಶೀಲಮ್, ಇದೀಗ ಮೋಡ ಕವಿದ ವಾತಾವರಣ ಚಿತ್ರದ ಮೂಲಕ ಪೂರ್ಣ ಪ್ರಮಾಣದ ನಾಯಕನಾಗಿದ್ದಾರೆ.

ಸೈನ್ಸ್ ಫಿಕ್ಷನ್ ಕಥಾಹಂದರ ಹೊಂದಿರುವ ಈ ವಿಭಿನ್ನ ಲವ್ ಸ್ಟೋರಿ ಚಿತ್ರದ ಟ್ರೇಲರ್ ಬಿಡುಗಡೆಯಾಯಿತು.

ವಿನಯ್ ರಾಜ್‌ಕುಮಾರ್, ನವೀನ್ ಶಂಕರ್ ನಿರ್ಮಾಪಕ ಉದಯ್ ಮೆಹ್ತಾ ಆಗಮಿಸಿದ್ದರು. ಚಿತ್ರತಂಡಕ್ಕೆ ಶುಭ ಹಾರೈಸಿದರು. ಈ ವಾರ ಚಿತ್ರ ತೆರೆಕಾಣುತ್ತಿದೆ. ಚಿತ್ರತಂಡದ ಮಾತುಗಳು: ನಾಯಕ ಶೀಲಂ, ನಟಿ ಮೋಕ್ಷಾ ಕುಶಾಲ್, ನಟಿ ಸಾತ್ವಿಕಾ ತಮ್ಮ ಪಾತ್ರಗಳ ಬಗ್ಗೆ ಮಾತಾಡಿದರು.

ನಿರ್ದೇಶಕ ಸುನೀ ಮಾತಾಡಿ ಖಂಡಿತಾ ಈ ಸಿನಿಮಾ ಪ್ರೇಕ್ಷಕರಿಗೆ ಇಷ್ಟವಾಗಲಿದೆ" ಎಂದು ಭರವಸೆ ವ್ಯಕ್ತಪಡಿಸಿದರು. 'ರಾಮ್ ಮೂವೀಸ್' ಬ್ಯಾನರ್ ಅಡಿಯಲ್ಲಿ ಈ ಚಿತ್ರವನ್ನು ಜಂಟಿಯಾಗಿ ನಿರ್ಮಿಸಿದ್ದಾರೆ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,